ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 144 ಸಂಚಿಕೆ- 144 | PAGE-8 ಪುಟ-8 | ಗುರುವಾರ 17.07.2025 | RS.2/- ಬೆಲೆ 2/-

# ಜಾತಿ ಗಣತಿಗಾಗಿ ದೇಶದಾದ್ಯಂತ ಕಾಂಗ್ರೆಸ್ ಅಭಿಯಾನ: ಸಿದ್ದರಾಮಯ್ಯ




ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜು.16: ಬುಧವಾರ ನಡೆದ ಎಐಸಿಸಿ ಹಿಂದುಳಿದ ವರ್ಗಗಳ ಸಲಹಾ ಮಂಡಳಿಯ ಸಭೆಯಲ್ಲಿ ಜಾತಿ ಗಣತಿಗಾಗಿ ದೇಶದಾದ್ಯಂತ ಅಭಿಯಾನ ನಡೆಸಲು ನಿರ್ಧರಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ತೆಲಂಗಾಣದ ಜಾತಿ ಸಮೀಕ್ಷೆಯನ್ನು ಮಾದರಿಯಾಗಿ ತೆಗೆದುಕೊಂಡು ಪ್ರಸ್ತಾವಿತ ರಾಷ್ಟ್ರೀಯ ಜನಗಣತಿಯನ್ನು ನಡೆಸಬೇಕು ಎಂದು ಅವರು ಹೇಳಿದರು.

ನಗರದ ಶಾಂಗ್ರಿಲಾ ಹೋಟೆಲ್‌ನಲ್ಲಿ ಬುಧವಾರ ನಡೆದ ಸಭೆ ಬಳಿಕ ಸುದ್ದಿಗೋಷ್ಠಿಯಲ್ಲಿ ಸಭೆಯ ಅಧ್ಯಕ್ಷತೆ ವಹಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿದರು. ಸಭೆಯಲ್ಲಿ ತೆ-ಗೆದುಕೊಂಡ ನಿರ್ಣಯಗಳನ್ನು 'ಬೆಂಗಳೂರು ಘೋಷಣೆ' ಎಂದು ಕರೆದರು.

ಸಭೆಯಲ್ಲಿ ಜನಗಣತಿಯು ಪ್ರತಿಯೊಬ್ಬ ವ್ಯಕ್ತಿಯ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ, ಉದ್ಯೋಗ, ರಾಜಕೀಯ ಅಂಶಗಳನ್ನು ಒಳಗೊಂಡಿರಬೇಕು'. ಜೊತೆಗೆ ಜಾತಿಗಳನ್ನು ಸಹ ಪ್ರಮುಖವಾಗಿ ಪರಿಗಣಿಸಬೇಕು.

ಮೀಸಲಾತಿ ಮೇಲಿನ ಶೇ 50ರ ಮಿತಿಯನ್ನು ರದ್ದುಗೊಳಿಸುವುದು. ಇದರಿಂದಾಗಿ ಶಿಕ್ಷಣ, ಉದ್ಯೋಗ, ರಾಜಕೀಯ ಮತ್ತು ಇತರ ಕ್ಷೇತ್ರಗಳಲ್ಲಿ ಒಬಿಸಿಗೆ ಸೂಕ್ತ ಮೀಸಲಾತಿ ಪಡೆಯಲು ಅವಕಾಶ ನೀಡುತ್ತದೆ.

ಸಂವಿಧಾನದ 15 (4)ನೇ ವಿಧಿಯ ಪ್ರಕಾರ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿಯೂ ಒಬಿಸಿಗಳಿಗೆ ಮೀಸಲಾತಿ ಸಿಗುವಂತಾಗಬೇಕು ಎಂಬ ನಿರ್ಣಯಗಳನ್ನು ತೆಗೆದುಕೊಳ್ಳಲಾಯಿತು ಎಂದರು.

ಸಾಮಾಜಿಕ ನ್ಯಾಯವನ್ನು ಬೆಂಬಲಿಸಿದ್ದಕ್ಕಾಗಿ ಮತ್ತು ಸಮಾಜದ ಅಂಚಿನಲ್ಲಿರುವ ವರ್ಗಗಳ ಪರವಾಗಿ ಮಾತನಾಡಿದ್ದಕ್ಕಾಗಿ ರಾಹುಲ್ ಗಾಂಧಿ ಅವರನ್ನು 'ನ್ಯಾಯ ಯೋಧ' ಎಂದು ಕರೆದು ಸಲಹಾ ಮಂಡಳಿಯು ಸರ್ವಾನುಮತದಿಂದ ಧನ್ಯವಾದ ಅರ್ಪಿಸಿತು.

'ರಾಹುಲ್ ಗಾಂಧಿ ಅವರ ದೃಢ ಸಂಕಲ್ಪವು ಮನುವಾದಿ ಮೋದಿ ಸರ್ಕಾರವನ್ನು ದೇಶದಲ್ಲಿ ಜಾತಿ ಗಣತಿ ನಡೆಸುವ

ನ್ಯಾಯಯುತ ಮತ್ತು ಸಾಂವಿಧಾನಿಕ ಬೇಡಿಕೆಗೆ ಶರಣಾಗುವಂತೆ ಮಾಡಿದೆ. ಈ ಐತಿಹಾಸಿಕ ಸಾಧನೆಗೆ ರಾಹುಲ್ ಗಾಂಧಿ ಅವರಿಗೆ

ಭಾರತದ ಎಲ್ಲ ಹಿಂದುಳಿದ ವರ್ಗಗಳ ಪರವಾಗಿ ಮಂಡಳಿಯು ತನ್ನ ಮುಕ್ತ ಮೆಚ್ಚುಗೆ ಮತ್ತು ಕೃತಜ್ಞತೆಯನ್ನು ವ್ಯಕ್ತಪಡಿಸಿದೆ' ಎಂದು ಸಿದ್ದರಾಮಯ್ಯ ಹೇಳಿದರು.

ಜಾತಿ ಸಮೀಕ್ಷೆ ನಡೆಸುವ ಕೇಂದ್ರದ ನಿರ್ಧಾರವನ್ನು

ಒಂದು ಮೈಲಿಗಲ್ಲು ಎಂದು ಬಣ್ಣಿಸಿದ ಮುಖ್ಯಮಂತ್ರಿ, ನಮ್ಮ ಸಂವಿಧಾನವು ಕಲ್ಪಿಸಿರುವಂತೆ ಸಾಮಾಜಿಕ ನ್ಯಾಯವನ್ನು ಖಚಿತಪಡಿಸಿಕೊಳ್ಳುವಲ್ಲಿ ಜಾತಿ ಗಣತಿಯು ಕೇವಲ ಒಂದು ಸಣ್ಣ ಹೆಜ್ಜೆಯಾಗಿದೆ. ಕೈಯಲ್ಲಿ ಕಾಂಗ್ರೆಸ್ ಪಕ್ಷದ ಧ್ವಜ ಮತ್ತು ನಮ್ಮ ಹೃದಯದಲ್ಲಿ ನ್ಯಾಯದೊಂದಿಗೆ, ನಾವು ಈ ಹೋರಾಟವನ್ನು ಮುಂದಕ್ಕೆ ಕೊಂಡೊಯ್ಯುತ್ತೇವೆ ಎಂದರು. 'ನ್ಯಾಯ ಯೋಧ ರಾಹುಲ್ ಗಾಂಧಿ ಅವರ ಅಚಲ ನಾಯಕತ್ವದಲ್ಲಿ, ದೇಶದಲ್ಲಿ ಸಮಾನತೆ ಮತ್ತು ಸಮಾನ ಸಮಾಜಕ್ಕೆ ಕಾರಣವಾಗುವ ಸಾಮಾಜಿಕ ಸಬಲೀಕರಣದ ಅಂತಿಮ ಸಾಂವಿಧಾನಿಕ ಉದ್ದೇಶಗಳನ್ನು ಸಾಧಿಸುವ ಗುರಿಯನ್ನು ಹೊಂದಲಾಗಿದೆ'

## ಶೀಘ್ರದಲ್ಲೇ ನೂತನ ಜೈವಿಕ ಇಂಧನ ನೀತಿ:ಪ್ರಿಯಾಂಕ್ ಖರ್ಗೆ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜು.16 ಗ್ರಾಮೀಣ ಪ್ರದೇಶಗಳಲ್ಲಿ ಪರ್ಯಾಯ ಇಂಧನ ವ್ಯವಸ್ಥೆಯನ್ನು ಪ್ರೋತ್ಸಾಹಿಸುವ ಸಲುವಾಗಿ ನೂತನ ಜೈವಿಕ ಇಂಧನ ನೀತಿಯನ್ನು ಜಾರಿಗೆ ತರಲು ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ವಿಧಾನಸೌಧದಲ್ಲಿ ನಡೆದ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ 10 ನೇ ವಾರ್ಷಿಕ ಸರ್ವ ಸದಸ್ಯ ಸಮಿತಿ ಸಭೆಯ ನಂತರ ಸಚಿವರು ಜೈವಿಕ ಇಂಧನ ನೀತಿಯ ಬಗ್ಗೆ ಮಾಹಿತಿ ನೀಡಿ, ಈ ಸಂಬಂಧ ಈಗಾಗಲೇ ಕೆಲವು ಪೂರ್ವ ಸಿದ್ಧತಾ ಕಾರ್ಯಯೋಜನೆಗಳನ್ನು ಕೈಗೊಳ್ಳಲಾಗಿದೆ, ರಾಜ್ಯದಲ್ಲಿ ಹಾಗೂ ಇತರ ರಾಜ್ಯಗಳಿಗೆ ಭೇಟಿ ನೀಡಿ ಜೈವಿಕ ಇಂಧನ ಕಾರ್ಯಯೋಜನೆಗಳ ಅನುಷ್ಠಾನ ಪ್ರಕ್ರಿಯೆ ಹಾಗೂ ವಸ್ತುಸ್ಥಿತಿ ಅಧ್ಯಯನ ಮಾಡಲಾಗಿದೆ, ಇದರೊಂದಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಜೈವಿಕ ಇಂಧನ ನೀತಿಗಳ ವಿಶ್ಲೇಷಣೆ ಮಾಡಲಾಗಿದೆ ಎಂದು ಹೇಳಿದರು.

ಜೈವಿಕ ಇಂಧನ ಸಂಪನ್ಮೂಲಗಳ ಲಭ್ಯತೆ, ಕ್ರೋಢಿಕರಣ ಕುರಿತು ಪರಿಶೀಲನೆ ಮಾಡಲಾಗಿದ್ದು, ನೂತನ ಕರ್ನಾಟಕ ರಾಜ್ಯ ಜೈವಿಕ ಇಂಧನ ರಚನೆ ಕುರಿತು ಪ್ರಕ್ರಿಯೆ ಆರಂಭಿಸಲಾಗಿದೆ ಎಂದೂ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದು ರಾಜ್ಯದಲ್ಲಿ ಜೈವಿಕ ಇಂಧನ ಕ್ಷೇತ್ರದಲ್ಲಿ ಬಂಡವಾಳ ಹೂಡಿಕೆದಾರರನ್ನು

(2ನೇ ಪುಟ ನೋಡಿ)

## ಮುಂದಿನ 7 ದಿನ ರಾಜ್ಯಾದ್ಯಂತ ಭಾರಿ ಮಳೆ ಸಾಧ್ಯತೆ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜು.16: ಮುಂದಿನ ಏಳು ದಿನಗಳಲ್ಲಿ ಕರ್ನಾಟಕ ರಾಜ್ಯಾದ್ಯಂತ ಭಾರೀ ಮಳೆಯಾಗುವ ನಿರೀಕ್ಷೆಯಿದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

ಈ ಬಗ್ಗೆ ಹವಾಮಾನ ಇಲಾಖೆ ಬುಧವಾರ ಮಾಹಿತಿ ನೀಡಿದ್ದು,'ರಾಜ್ಯದ ಕರಾವಳಿ ಮತ್ತು ಮಲೆನಾಡು ಜಿಲ್ಲೆಗಳಲ್ಲಿ ಚದುರಿದ ಮಳೆಯಿಂದ ವ್ಯಾಪಕವಾಗಿ ಸಾಧಾರಣ ಮಳೆಯಾಗುವ ಸಾಧ್ಯತೆಯಿದ್ದು, ಅಲ್ಲಲ್ಲಿ ಭಾರಿ ಮಳೆ ನಿರೀಕ್ಷಿಸಲಾಗಿದೆ.

ಒಳನಾಡು ಜಿಲ್ಲೆಗಳಲ್ಲಿ ಅಲ್ಲಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ವಿಶೇಷವಾಗಿ ಕರಾವಳಿ ಮತ್ತು ದಕ್ಷಿಣ ಒಳನಾಡಿನಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ' ಎಂದು ಹೇಳಿದೆ.

ಮುಂದಿನ 7 ದಿನಗಳ ಕಾಲ ರಾಜ್ಯಾದ್ಯಂತ ಭಾರಿ ಮಳೆಯಾಗುವ ಸಾಧ್ಯತೆ ಇದ್ದು, ಪ್ರಮುಖವಾಗಿ ಕರಾವಳಿ ಕರ್ನಾಟಕದಲ್ಲಿ ಭಾರಿ ಮಳೆಯಾಗಲಿದೆ ಎಂದು ಹೇಳಿದೆ. ಕರಾವಳಿ ಕರ್ನಾಟಕದ ದಕ್ಷಿಣ ಕನ್ನಡ, ಉತ್ತರ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ.

ಮಳೆಯೊಂದಿಗೆ ಬಲವಾದ ಮೇಲ್ಮೈ ಗಾಳಿಯೂ ಸಹ ನಿರೀಕ್ಷಿಸಲಾಗಿದ್ದು, ಗಂಟೆಗೆ 30-40 ಕಿ.ಮೀ. ವೇಗದಲ್ಲಿ ಬೀಸುವ ಸಾಧ್ಯತೆಯಿದೆ. ಜುಲೈ 16, 2025 ರಂದು ಕರಾವಳಿ ಕರ್ನಾಟಕದಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ. ಜುಲೈ 15 ರಿಂದ 19ರ ನಡುವೆ ಗಾಳಿಯ ವೇಗ ಗಂಟೆಗೆ 40-50 ಕಿ.ಮೀ. ತಲುಪಿ ಗಂಟೆಗೆ 60 ಕಿ.ಮೀ. ವೇಗದಲ್ಲಿ ಬೀಸುವ ಸಾಧ್ಯತೆ ಇರುವುದರಿಂದ ಮೀನುಗಾರರು ಸಮುದ್ರಕ್ಕೆ ಇಳಿಯುವ ಕುರಿತು ಎಚ್ಚರದಿಂದಿರಬೇಕು ಎಂದು ಹೇಳಿದೆ.

ದಕ್ಷಿಣ ಒಳನಾಡಲ್ಲೂ ಮಳೆ

ಜುಲೈ 15 ರಿಂದ 21 ರವರೆಗೆ ದಕ್ಷಿಣ ಒಳನಾಡಿನಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ. ದಕ್ಷಿಣ ಒಳನಾಡಿನ ಚಿಕ್ಕಮಗಳೂರು, ಹಾಸನ, ಶಿವಮೊಗ್ಗ ಮತ್ತು ಕೊಡಗು ಮುಂತಾದ ನಿರ್ದಿಷ್ಟ ಜಿಲ್ಲೆಗಳಲ್ಲಿ ಜುಲೈ 20 ಮತ್ತು 21 ರಂದು

(2ನೇ ಪುಟ ನೋಡಿ)

## ಉದ್ಯೋಗ ಖಾತರಿ ಅಕ್ರಮ; ಇಬ್ಬರು ಗುತ್ತಿಗೆ ನೌಕರರ ವಜಾ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು:ಜು.16:ರಾಯಚೂರು ಜಿಲ್ಲೆಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಹಾಜರಾತಿಯಲ್ಲಿ ಅಕ್ರಮ ಎಸಗಿದ ಆರೋಪದ ಮೇಲೆ ಗ್ರಾಮ ಪಂಚಾಯಿತಿಯ ಇಬ್ಬರು ಗುತ್ತಿಗೆ ನೌಕರರನ್ನು ಸೇವೆಯಿಂದ ವಜಾಗೊಳಿಸಲಾಗಿದೆ ಎಂದು ಅಧಿಕಾರಿಗಳು ಬುಧವಾರ ತಿಳಿಸಿದ್ದಾರೆ. ಲಿಂಗಸುಗೂರು ತಾಲ್ಲೂಕಿನ ನಾಗಲಾಪುರ ಗ್ರಾಮ ಪಂಚಾಯತ್‌ನಲ್ಲಿ ನಿಯೋಜಿತರಾಗಿದ್ದ ನಿರುಪಾದಿ ಮತ್ತು ಜಯಮ್ಮ ವಿರುದ್ಧ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (ಸಿಇಒ) ಶಿಸ್ತುಕ್ರಮ ಕೈಗೊಂಡಿದ್ದಾರೆ ಎಂದು ಅವರು ಹೇಳಿದ್ದಾರೆ.

ನಿರುಪಾದಿ 'ಬೇರ್ ಫೂಟ್ ತಂತ್ರಜ್ಞ'ರಾಗಿ ಮತ್ತು ಜಯಮ್ಮ ಅವರು ಗ್ರಾಮ ಕಾಯಕ ಮಿತ್ರರಾಗಿ ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿದ್ದರು.

ಜುಲೈ 14 ರ ಅಧಿಕೃತ ಆದೇಶದ ಪ್ರಕಾರ, ಎನ್‌ಎಂಎಂಎಸ್ (ನ್ಯಾಷನಲ್ ಮೊಬೈಲ್ ಮಾನಿಟರಿಂಗ್ ಸಿಸ್ಟಮ್) ಹಾಜರಾತಿ ವ್ಯವಸ್ಥೆಯಲ್ಲಿನ ಅಕ್ರಮಗಳ ಕುರಿತು ಅಧಿಕೃತ ತನಿಖೆಯ ನಂತರ ಈ ಇಬ್ಬರನ್ನು ಕೆಲಸದಿಂದ ವಜಾಗೊಳಿಸಲಾಗಿದೆ.

ಗಮನಿಸಲಾದ ಅಕ್ರಮಗಳ ಕುರಿತು ವಿಚಾರಣೆಯನ್ನು ಉಲ್ಲೇಖಿಸಿ, ಏಪ್ರಿಲ್ ಮತ್ತು ಮೇ, 2025 ರ ನಡುವೆ ಹಿರೇಹಳ್ಳ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿವಿಧ ಹೂಳು ತೆಗೆಯುವ ಯೋಜನೆಗಳಲ್ಲಿ ಕೆಲಸ ಮಾಡುತ್ತಿರುವ ದೈನಂದಿನ ಕೂಲಿ ಕಾರ್ಮಿಕರ ಹಾಜರಾತಿ ದಾಖಲೆಗಳನ್ನು ಮೇಲ್ವಿಚಾರಣೆ

(2ನೇ ಪುಟ ನೋಡಿ)

## ಬದಲಾದ ಭಾರತಕ್ಕೆ ಬೇಕಾದ ಕಾನೂನು ಭಾರತೀಯ ನ್ಯಾಯ ಸಂಹಿತೆ: ನ್ಯಾಯಮೂರ್ತಿ ಮಹಮ್ಮದ ನವಾಜ



ಮಲ್ಲಮ್ಮನುಡಿ ವಾರ್ತೆ ಕಲಬುರಗಿ, ಜು. 16 : ಸ್ವಾತಂತ್ರ ಪೂರ್ವದ ಬ್ರಿಟೀಷರ ಕಾನೂನುಗಳನ್ನು ಪರಿಷ್ಕರಿಸಿ, ಪ್ರಸ್ತುತ ಬದಲಾದ ಭಾರತಕ್ಕೆ ಅನುಗುಣವಾಗಿ ತಿದ್ದುಪಡಿ ಮಾಡಿ ಭಾರತದ ನ್ಯಾಯ ಕಲ್ಪನೆಯಡಿ ರೂಪಿಸಿರುವ ಭಾರತೀಯ ನ್ಯಾಯ ಸಂಹಿತೆ ಹಾಗೂ ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ ವರ್ತಮಾನದ ಅಪರಾಧ ತಡೆಗೆ ಮತ್ತು ನ್ಯಾಯಾಂಗದ ಪರಿಪಾಲನೆಗೆ ಮಹತ್ತರವಾದ ಬದಲಾವಣೆಯಾಗಿದೆ ಎಂದು ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಹಾಗೂ ಕಲಬುರಗಿ ಆಡಳಿತಾತ್ಮಕ ನ್ಯಾಯಾಧೀಶರಾದ ನ್ಯಾಯಮೂರ್ತಿ ಮಹಮ್ಮದ ನವಾಜ ಅವರು ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಗುಲಬರ್ಗಾ ನ್ಯಾಯವಾದಿಗಳ ಸಂಘ ಕಲಬುರಗಿ

(2ನೇ ಪುಟ ನೋಡಿ)

## ಪ್ರಜಾಪ್ರಭುತ್ವದಲ್ಲಿ ಮತದಾನ ಮಹಾಶಕ್ತಿ:ಡಾ.ಗೌತಮ ಅರಳಿ




ಮಲ್ಲಮ್ಮನುಡಿ ವಾರ್ತೆ ಬೀದರ. ಜು.16 : ಆಧುನಿಕ ಭಾರತದಂತಹ ಪ್ರಜಾಪ್ರಭುತ್ವದಲ್ಲಿ ಮತದಾನವು ಮಹತ್ವದ ಪಾತ್ರ ವಹಿಸುತ್ತದೆ. ಮತದಾರರನ್ನು ನೋಂದಣಿಗೊಳಿಸುವ ಕುರಿತು ಜಾಗೃತಿಯಾಗಬೇಕಾಗಿದೆ. ಜಾಗೃತ ಮತದಾರರಿಂದ ಸದೃಢ, ಶಕ್ತಿಯುತ ಸರ್ಕಾರ ರಚನೆಯಾಗಲು ಸಾಧ್ಯವೆಂದು ರಾಜ್ಯಮಟ್ಟದ ಚುನಾವಣಾ ತರಬೇತುದಾರರಾದ ಡಾ. ಗೌತಮ ಅರಳಿಯವರು ನುಡಿದರು.

ಅವರು ಬುಧವಾರ ಬೀದರ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆಯ ವಿಶೇಷ ಶಿಬಿರ ಪ್ರಯುಕ್ತ ಹಮ್ಮಿಕೊಂಡಿದ್ದ 'ಮತದಾರರ ನೋಂದಣಿ ಮತ್ತು ಜಾಗೃತಿ' ವಿಷಯದ ಕುರಿತು

(2ನೇ ಪುಟ ನೋಡಿ)

## ಚಲಿಸುವ ಬಸ್‌ನಿಂದ ಜಿಗಿದ ಬಾಲಕ: ಬುದ್ದಿ ಹೇಳಿದ್ದಕ್ಕೆ ಚಾಲಕನಿಗೆ ಹೊಡೆದ ಜನ



ಮಲ್ಲಮ್ಮನುಡಿ ವಾರ್ತೆ ಬೀದರ. ಜು. 16 : ತಪ್ಪು ಮಾಡಿದಾಗ ಯಾರಾದರು ದೊಡ್ಡವರು ಬುದ್ದಿ ಹೇಳುವುದು ಸಾಮಾನ್ಯ. ಅವರ ಮಾತಿಗೆ ನಾವು ಬೆಲೆ ಕೊಡುತ್ತೇವೆಯೋ ಇಲ್ಲವೋ ಅವರು ಹೇಳಿದ್ದನ್ನ ಕೇಳಿಸಿಕೊಳ್ಳುತ್ತೇವೆ. ಆದರೆ ಇಲ್ಲೊಬ್ಬ ಬಾಲಕನಿಗೆ ಚಾಲಕ ಬುದ್ದಿವಾದ ಹೇಳಲು ಹೋಗಿ ಚಾಲಕನೊಬ್ಬ ತಾನೇ ಹೊಡೆಸಿಕೊಂಡಿದ್ದು, ಸದ್ಯ ಚಿಕಿತ್ಸೆಪಡೆದು ಚೇತರಿಸಿಕೊಳ್ಳುತ್ತಿದ್ದಾರೆ.

ಬಸ್‌ನಿಂದ ಜಿಗಿದ ಬಾಲಕ

ಬೀದರ್ ಜಿಲ್ಲೆಯ ಚಿಕ್ಕಪೇಟ್ ನಗರದಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಯೊಬ್ಬ ಮನೆ ಹತ್ತಿರ ಬಂತು ಅಂತ ಬಸ್‌ನಿಂದ ಹಾರಿದ್ದಾನೆ. ಈ ರೀತಿ ಮಾಡುವುದು ನಿಜಕ್ಕೂ ಅಪಾಯಕಾರಿ. ಹಾಗಾಗಿ ಈ ರೀತಿ ಜಂಪ್ ಮಾಡುವುದು ಸರಿಯಲ್ಲ ಎಂದು ಎಂದು ಕರ್ನಾಟಕ ರಸ್ತೆ ಸಾರಿಗೆ ನಿಗಮದ ಚಾಲಕ ಬುದ್ದಿವಾದ ಹೇಳಿದ್ದಾನೆ. ಆದರೆ ಇದಕ್ಕೆ ಸರಿಯಾಗಿ ಸ್ಪಂದಿಸುವ ಬದಲಾಗಿ, ಬಾಲಕನ 7 ರಿಂದ 8 ಮಂದಿ ಸಂಬಂಧಿಗಳು ಹಲ್ಲೆ ಮಾಡಿದ್ದು, ಚಾಲಕ ಮೂರ್ಚೆ ತಪ್ಪುವ ತನಕ ಹೊಡೆದಿದ್ದಾರೆ.

ಬುದ್ದಿ ಹೇಳಬೇಕಾದವರಿಂದಲೇ ಹಲ್ಲೆ ಚಲಿಸುತ್ತಿರುವ ಬಸ್‌ನಿಂದ ಜಂಪ್ ಮಾಡುವುದು ಜೀವಕ್ಕೆ ಅಪಾಯ. ಜಂಪ್ ಮಾಡುವಾಗ ಸಣ್ಣ ತಪ್ಪಾದರೂ ಸಹ ಏನು ಬೇಕಾದರೂ ಆಗಬಹುದು. ಈ ಬಾಲಕ ಸಹ ಮನೆ ಹತ್ತಿರ ಬಂತು ಎನ್ನುವ ಕಾರಣಕ್ಕೆ ಜಿಗಿದಿದ್ದಾನೆ. ಇದರಿಂದ ಬಾಲಕನಿಗೆ ಸಣ್ಣ ಪೆಟ್ಟಾಗಿದೆ. ಈ ಸಮಯದಲ್ಲಿ ಬಸ್ ನಿಲ್ಲಿಸಿದ ಬೀದರ್ ವಿಭಾಗದ 1ನೇ ಘಟಕದ ಚಾಲಕ ಉಮೇಶ್, ಬಾಲಕನಿಗೆ ಈ ರೀತಿ ಜಂಪ್ ಮಾಡುವುದು ಸರಿಯಲ್ಲ. ನಿನಗೆ ಅಪಾಯ ಆಗುತ್ತದೆ ಹಾಗೂ ನನ್ನ ಕೆಲಸ ಸಹ ಹೋಗುತ್ತಿತ್ತು ಎಂದು ಹೇಳಿದ್ದಾರೆ. ಆದರೆ ಹುಡುಗನ ಕಡೆಯ ಜನರು ಬಾಲಕನಿಗೆ ಬುದ್ದಿ ಹೇಳಬೇಕಾದವರು, ಚಾಲಕನಿಗೆ ಮನಬಂದಂತೆ ಥಳಿಸಿದ್ದು, ಚಾಲಕ ಮೂರ್ಛೆ ಹೋಗಿದ್ದಾರೆ. ಇದಿಷ್ಟೇ

(2ನೇ ಪುಟ ನೋಡಿ)

## ನವೀಕರಿಸಬಹುದಾದ ಇಂಧನದಲ್ಲಿ ಭಾರತ ಅದ್ಭುತ ಸಾಧನೆ : ಪ್ರಧಾನಿ ಮೋದಿ ಶ್ಲಾಘನೆ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜು.16:ನವೀಕರಿಸಬಹುದಾದ ಇಂಧನ ವಲಯದಲ್ಲಿ ಭಾರತ ಅದ್ಭುತ ಸಾಧನೆಗೈಯುತ್ತಿದೆ. ಪಳೆಯುಳಿಕೆಯೇತರ ಇಂಧನ ಉತ್ಪಾದನೆಯಲ್ಲಿ 5 ವರ್ಷ ಮೊದಲೇ ಗುರಿ ಸಾಧಿಸಿರುವುದು ಹೆಮ್ಮೆಯ ಸಂಗತಿ ಎಂದು ಪ್ರಧಾನಿ ನರೇಂದ್ರ ಮೋದಿ ಸಂತಸ ವ್ಯಕ್ತಪಡಿಸಿದ್ದಾರೆ.

ನವೀಕರಿಸಬಹುದಾದ ಇಂಧನ ವಲಯದಲ್ಲಿ 2030ರ ವೇಳೆಗೆ ಭಾರತ ಒಟ್ಟಾರೆ 484.8 ಉಘ ಸ್ಥಾಪಿತ ವಿದ್ಯುತ್ ಸಾಮರ್ಥ್ಯದ ಗುರಿಯೊಂದಿಗೆ ಹೆಜ್ಜೆ ಹಾಕಿತ್ತು. ಆದರೆ ಪಳೆಯುಳಿಕೆಯೇತರ ಇಂಧನದಲ್ಲಿ ಅದಾಗಲೇ 242.8 ಉಘ ಸಾಮರ್ಥ್ಯ ಪೂರೈಸಿದೆ. ಪ್ಯಾರಿಸ್ ಒಪ್ಪಂದಕ್ಕೆ ಅನುಗುಣವಾಗಿ 5 ವರ್ಷ ಮೊದಲೇ ಗುರಿ ಸಾಧಿಸಿ ಹೊಸ ಮೈಲಿಗಲ್ಲು ಸ್ಥಾಪಿಸಿರುವ ದೇಶದ ಸಾಧನೆಗೆ ಪ್ರಧಾನಿ ನರೇಂದ್ರ ಮೋದಿ ಹೆಮ್ಮೆ ವ್ಯಕ್ತಪಡಿಸಿದ್ದಾರೆ.

ಪ್ರಸ್ತುತ ಜಾಗತಿಕ ಸನ್ನಿವೇಶದಲ್ಲಿ ಭಾರತದ ಈ ಪ್ರಗತಿ ಮಹತ್ವಪಡೆದಿದೆ. ಎನ್‌ಡಿಸಿ ಬದ್ಧತೆಗಳನ್ನು ಪೂರೈಸುವ ಹಾದಿಯಲ್ಲಿರುವ ಕೆಲವೇ ಜಿ20 ರಾಷ್ಟ್ರಗಳಲ್ಲಿ ಭಾರತವೂ ಒಂದಾಗಿದ್ದು, ಶುದ್ಧ ಇಂಧನ ಪರಿವರ್ತನೆಯಲ್ಲಿ ಭಾರತ ತನ್ನ ನಾಯಕತ್ವವನ್ನು ಬಲಪಡಿಸುತ್ತದೆ ಎಂದಿದ್ದಾರೆ. ಜೊತೆಗೆ ಹಸಿರು ಮತ್ತು ಸುಸ್ಥಿರ ಭವಿಷ್ಯ ನಿರ್ಮಿಸುವ ನಿಟ್ಟಿನಲ್ಲಿ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

## ಭಾರಿ ಮಳೆ ಸಾಧ್ಯತೆ

ಭಾರೀ ಮಳೆಯಾಗುವ ನಿರೀಕ್ಷೆಯಿದೆ. ಬೆಂಗಳೂರು (ಗ್ರಾಮೀಣ ಮತ್ತು ನಗರ), ಮೈಸೂರು ಮತ್ತು ಮಂಡ್ಯ ಸೇರಿದಂತೆ ಇತರ ಜಿಲ್ಲೆಗಳಲ್ಲಿ ಹಗುರದಿಂದ ಮಧ್ಯಮ ಮಳೆಯಾಗುವ ನಿರೀಕ್ಷೆಯಿದೆ.

ಜುಲೈ 16 ರಂದು ಕರ್ನಾಟಕದ ಉತ್ತರ ಒಳನಾಡಿನಲ್ಲಿ ಭಾರೀ ಮಳೆಯಾಗುವ ನಿರೀಕ್ಷೆಯಿದೆ. ಪ್ರಮುಖವಾಗಿ ಬಾಗಲಕೋಟೆ, ಬೀದರ್ ಮತ್ತು ರಾಯಚೂರು ಜಿಲ್ಲೆಗಳಲ್ಲಿ ಗಂಟೆಗೆ 40–50 ಕಿ.ಮೀ ವೇಗದಲ್ಲಿ ಗಾಳಿ ಬೀಸುವ ಮೂಲಕ ಹಗುರದಿಂದ ಮಧ್ಯಮ ಮಳೆಯಾಗಬಹುದು ಎಂದು ಹವಾಮಾನ ಇಲಾಖೆ ಹೇಳಿದೆ.

## ಮಹಾಶಕ್ತಿ:ಡಾ.ಗೌತಮ ಅರಳಿ

ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಮತದಾರರ ಚೀಟಿ ಹೊಂದಿರಲಾರದ ಪ್ರತಿಯೊಬ್ಬರಿಗೂ ಮತದಾರರ ಗುರುತಿನ ಚೀಟಿ ಪಡೆಯುವ ಸಲುವಾಗಿ ಪ್ರತಿಯೊಬ್ಬ ಪ್ರಜ್ಞಾವಂತ ನಾಗರೀಕರು ತಿಳಿಸುವ, ಜಾಗೃತಿ ನೀಡಬೇಕಾದ ಅವಶ್ಯಕತೆಯಿದೆ. ಆ ಮೂಲಕ ಆರೋಗ್ಯಕರ ಮತದಾರರ ಪಟ್ಟಿ ಸಿದ್ಧಗೊಳಿಸಲು ಸಾಧ್ಯವಾಗುತ್ತದೆ. ಹದಿನೆಂಟು ವರ್ಷ ತುಂಬಿದ ಪ್ರತಿಯೊಬ್ಬರೂ ಮತದಾನದ ಹಕ್ಕನ್ನು ಸಂವಿಧಾನಾತ್ಮಕವಾಗಿ ಪಡೆದಿರುತ್ತಾರೆ. ಆದರೆ ಕೆಲವೊಮ್ಮೆ ಮತದಾರರ ಚೀಟಿ ಪಡೆಯುವಲ್ಲಿ ನಿರ್ಲಕ್ಷದಿಂದಲೋ ಅಥವಾ ಜಾಗೃತಿಯ ಕೊರತೆಯಿಂದಲೋ ಮತದಾರರ ಚೀಟಿಯನ್ನು ಹೊಂದಿರುವುದಿಲ್ಲ. ಆದ್ದರಿಂದ ಯುವಕರು ಪ್ರತಿಯೊಬ್ಬರೂ ಮತದಾನದ ಹಕ್ಕನ್ನು ಹೊಂದಲು ಪ್ರತಿಯೊಬ್ಬರು ಕಡ್ಡಾಯವಾಗಿ ಮತದಾರರ ಚೀಟಿ ಹೊಂದಲು ಪ್ರೇರೇಪಿಸಬೇಕೆಂದರು.

ಬೀದರ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಬಿ.ಎಸ್.ಬಿರಾದಾರ ಮಾತನಾಡಿ, ಜಾಗೃತವಾದ ಮತದಾರರಿಂದ ಉತ್ತಮ ಸರ್ಕಾರ ನಿರ್ಮಿಸಲು, ಸ್ಥಾಪಿಸಲು ಸಾಧ್ಯವಾಗುತ್ತದೆ. ಪ್ರಜಾಪ್ರಭುತ್ವದಲ್ಲಿ ಮತದಾನದ ಶಕ್ತಿ, ಸಾಮರ್ಥ್ಯ ಅಪಾರವಾಗಿದೆ. ಆದರೆ ಅನೇಕ ಜನರು ಯಾವುದೋ ಕಾರಣಕ್ಕೆ ಮತದಾನದಿಂದ ವಂಚಿತರಾಗುತ್ತಾರೆ. ಮತದಾರರು ಯಾವುದೇ ಆಶೆ, ಆಮಿಷಕ್ಕೆ ಒಳಗಾಗದೆ ನಿರ್ಭೀತ ಮತದಾನ ಮಾಡಿದಾಗ ಆ ದೇಶ ಸಶಕ್ತವಾದ ಆಡಳಿತ ಹೊಂದಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ವಿಶ್ವವಿದ್ಯಾಲಯದಲ್ಲಿರುವ ಯುವಕರ ಮೇಲೆ ತುಂಬಾ ಜವಾಬ್ದಾರಿಯಿದೆ. ಆ ನಿಟ್ಟಿನಲ್ಲಿ ಯುವಕರು ಸ್ವಯಂ ಸೇವಕರಾಗಿ ಜನಪರ ಕಾರ್ಯದಲ್ಲಿ ತೊಡಗಿಸಿಕೊಳ್ಳಬೇಕಾಗಿದೆ ಎಂದರು.

ಬೀದರ ವಿಶ್ವವಿದ್ಯಾಲಯದ ಆಡಳಿತ ಕುಲಸಚಿವರಾದ ಸುರೇಖಾ ಕೆ.ಎ.ಎಸ್. ಮಾತನಾಡಿ, ಜಗತ್ತಿನ ಬೃಹತ್ ಪ್ರಜಾಪ್ರಭುತ್ವ ಹೊಂದಿರುವ ಭಾರತ ದೇಶದಲ್ಲಿ ಮತದಾನದ ಮೇಲೆಯೇ ಸರ್ಕಾರದ ಆಗುಹೋಗುಗಳು ನಿರ್ಧಾರವಾಗುತ್ತವೆ. ಹಾಗಾಗಿ ಸುಭದ್ರ ಸರ್ಕಾರ ನೆಲೆಗೊಳ್ಳಬೇಕಾದರೆ ನೂರು ಪ್ರತಿಶತ ಅರ್ಹ ಮತದಾರರ ಪಟ್ಟಿ ಸಿದ್ಧಗೊಳ್ಳಬೇಕಾಗಿದೆ, ಆಗ ಮಾತ್ರ ಚುನಾಯಿತ ಸರ್ಕಾರ ನಿಖರವಾಗಿ ನಿರ್ಧಾರಗಳನ್ನು ತೆಗೆದುಕೊಳ್ಳಲು ಸಾಧ್ಯವಾಗುತ್ತದೆ. ಚುನಾವಣೆಯಲ್ಲಿ ಎಲ್ಲಾ ಅರ್ಹ ನಾಗರಿಕರು ಜವಾಬ್ದಾರಿಯಿಂದ ಮತದಾನ ಮಾಡಬೇಕಾಗಿದೆ. ಬುದ್ಧಿವಂತ ಮತದಾರರಿಂದ ಮಾತ್ರ ಸಮರ್ಥ ಸರ್ಕಾರ ಒಂದು ದೇಶ ಹೊಂದಲು ಸಾಧ್ಯವೆಂದರು.

ಬೀದರ ವಿಶ್ವವಿದ್ಯಾಲಯದ ವಿಶೇಷಾಧಿಕಾರಿ ಡಾ.ರವೀಂದ್ರನಾಥ ವಿ.ಗಬಾಡಿ ಮಾತನಾಡಿ, ಮತದಾರರಲ್ಲಿ ಅರಿವು ಮೂಡಿಸಲು ಯುವಕರ ಪಡೆ ಸಿದ್ಧಗೊಳ್ಳಬೇಕಾಗಿದೆ. ಅವರು ಪ್ರತಿಯೊಬ್ಬರಿಗೂ ಕಡ್ಡಾಯವಾಗಿ ಮತದಾನ ಮಾಡುವಂತೆ ಪ್ರೇರೇಪಿಸಬೇಕಾದ ಅನಿವಾರ್ಯತೆಯಿದೆ ಎಂದರು.

ಈ ಸಂದರ್ಭದಲ್ಲಿ ಡಾ.ಸಂತೋಷಿಮಾತಾ, ಡಾ.ಅಂಬರೀಶ ವೀರನಾಯಕ, ಡಾ.ಶಿವಕುಮಾರ ಹೂಗಾರ, ಬೀದರ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆಯ ಶಿಬಿರಾರ್ಥಿಗಳು, ವಿಶ್ವವಿದ್ಯಾಲಯದ ಶಿಕ್ಷಕ, ಶಿಕ್ಷಕೇತರ ಸಿಬ್ಬಂದಿವರ್ಗದವರು ಸೇರಿದಂತೆ ಇತರರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಬೀದರ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮ ಅಧಿಕಾರಿ ಡಾ.ರಾಮಚಂದ್ರ ಗಣಾಪೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ಗಣೇಶರವರು ಸ್ವಾಗತಿಸಿದರು, ವಾಣಿಶ್ರೀ ಪ್ರಾರ್ಥಿಸಿದರು, ಪಂಚಶೀಲಾ ಕಾರ್ಯಕ್ರಮವನ್ನು ನಿರೂಪಿಸಿದರು.

## ಚಾಲಕನಿಗೆ ಹೊಡೆದ ಜನ

ಅಲ್ಲದೇ, ಹೊಡೆದವರೇ ಹೋಗಿ ಚಾಲಕನ ಮೇಲೆ ದೂರು ನೀಡಿದ್ದಾರೆ. ಇನ್ನು ಮೂರ್ಚೆ ಹೋದ ಚಾಲಕನನ್ನ ನಿರ್ವಾಹಕ ವಿಜಯ್ ಕುಮಾರ್ ಅವರು ತಕ್ಷಣವೇ ದಾರಿಯಲ್ಲಿ ಬರುತ್ತಿದ್ದ ಬಸ್‌ವೊಂದನ್ನ ನಿಲ್ಲಿಸಿ, ಅದರಲ್ಲಿ ಮಲಗಿಸಿಕೊಂಡು ಕರೆದುಕೊಂಡು ಹೋಗಿ, ಆಸ್ಪತ್ರೆಗೆ ದಾಖಲಿಸಿದ್ದು, ಚಿಕಿತ್ಸೆ ಸರಿಯಾದ ಸಮಯಕ್ಕೆ

## ಇಂಧನ ನೀತಿ:ಪ್ರಿಯಾಂಕ್ ಖರ್ಗೆ

ಆಕರ್ಷಿಸಲು ಪೂರಕ ವಾತಾವರಣ ನಿರ್ಮಾಣ ಮಾಡುವ ಕುರಿತು ಸಮ್ಮೇಳನಗಳು, ಕಾರ್ಯಗಾರಗಳು, ವಸ್ತು ಪ್ರದರ್ಶನಗಳು ಹಾಗೂ ಹೂಡಿಕೆದಾರರ ಸಮಾವೇಶಗಳಲ್ಲಿ ಭಾಗವಹಿಸಿ ಮಾಹಿತಿ ಸಂಗ್ರಸಲಾಗಿದೆ ಹಾಗೂ ಮಂಡಳಿಗೆ ಕೈಗಾರಿಕಾ ಸಂಘಟನೆಗಳು, ಸಂಸ್ಥೆಗಳು, ವಿದೇಶದ ವಿಶ್ವವಿದ್ಯಾಲಯಗಳು ಮುಂತಾದ ಸಂಸ್ಥೆಗಳ ಪ್ರತಿನಿಧಿಗಳನ್ನು ಆಹ್ವಾನಿಸಿ ಚರ್ಚಿಸಲಾಗಿದೆ ಎಂಬ ಮಾಹಿತಿಯನ್ನು ನೀಡಿದ್ದಾರೆ. ರಾಜ್ಯದಲ್ಲಿನ ಜೈವಿಕ ಇಂಧನ ಬಯೋಬ್ರಿಕೆಟ್ಸ್, ಬಯೋಪಿಲೆಟ್ಸ್, ಬಯೋಚಾರ್, ಬಯೋಕೋಲ್. ಬಯೋಡೀಸೆಲ್, 2ಜಿ ಎಥನಾಲ್, ಗ್ರೀನ್ ಹೈಡ್ರೋಜನ್ ಕಾರ್ಯಯೋಜನೆಗಳಲ್ಲಿ ನಿರತರಾಗಿರುವ ಉದ್ದಿಮೆದಾರರುಗಳ ವಿಚಾರ ವಿನಿಮಯ ಸಭೆಯನ್ನು ತುಮಕೂರು ಹಾಗೂ ಬೆಂಗಳೂರು ಗಳಲ್ಲಿಆಯೋಜಿಸಲಾಗಿದ್ದು ಮಾಹಿತ ಸಂಗ್ರಹಿಸಲಾಗಿದೆ, ಶೀಘ್ರದಲ್ಲೇ ನೀತಿಯ ಕರಡು ಸಿದ್ಧಪಡಿಸಿ ಸಾರ್ವಜನಿಕರ ಅಭಿಪ್ರಾಯಕ್ಕಾಗಿ ಪ್ರಕಟಿಸಲಾಗುವುದು ಎಂದು ತಿಳಿಸಿದ್ದಾರೆ.ಅಭಿವೃದ್ಧಿ ಮಂಡಳಿ ಸಭೆಯಲ್ಲಿ ಕೃಷಿ ಸಚಿವ ಚೆಲುರಾಯಸ್ವಾಮಿ, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಸುಧೀಂದ್ರ ಎಸ್.ಇ.ಸುಧೀಂದ್ರ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಕಾರ್ಯದರ್ಶಿ ಸಮೀರ್ ಶುಕ್ಲಾ, ಆಯುಕ್ತೆ ಅರುಂಧತಿ ಚಂದ್ರಶೇಖರ್ ಹಾಗೂ ಮಂಡಳಿ ಸದಸ್ಯರು ಪಾಲ್ಗೊಂಡಿದ್ದರು.

## ಇಬ್ಬರು ಗುತ್ತಿಗೆ ನೌಕರರ ವಜಾ

ಮಾಡಲು ಮತ್ತು ಅಪ್‌ಲೋಡ್ ಮಾಡಲು ಈ ಇಬ್ಬರೂ ಜವಾಬ್ದಾರರು ಎಂದು ಆದೇಶದಲ್ಲಿ ತಿಳಿಸಲಾಗಿದೆ. ಆದೇಶದ ಪ್ರಕಾರ, ವಿಚಾರಣೆಯ ಸಮಯದಲ್ಲಿ, ಓಒಒಖ ಹಾಜರಾತಿ ನಮೂದುಗಳಲ್ಲಿ ಅಕ್ರಮಗಳು ಕಂಡುಬಂದಿವೆ, ಅಧಿಕಾರಿಗಳು ಹಾಜರಿಲ್ಲದ ಕಾರ್ಮಿಕರಿಗೆ ಹಾಜರಾತಿಯನ್ನು ನೀಡಿದ್ದಾರೆ. ಫೋಟೋಗಳಲ್ಲಿ ನಿಜವಾದ ಕಾರ್ಮಿಕರನ್ನು ನಕಲಿ ಜನರೊಂದಿಗೆ ಬದಲಾಯಿಸಿದ್ದಾರೆ ಎಂದು ತಿಳಿಸಲಾಗಿದೆ.ಆಪಾದಿತ ಅಕ್ರಮಗಳನ್ನು ವಿವರಿಸಲು ಇಬ್ಬರಿಗೂ ನೋಟಿಸ್ ನೀಡಿದಾಗ, ಹಾಜರಾತಿ ನಿರ್ವಹಣೆಯಲ್ಲಿನ ದೋಷಗಳನ್ನು ಇಬ್ಬರೂ ಒಪ್ಪಿಕೊಂಡಿದ್ದಾರೆನ್ನಲಾಗಿದೆ.

## ಅದ್ಭುತ ಸಾಧನೆ : ಪ್ರಧಾನಿ ಮೋದಿ ಶ್ಲಾಘನೆ

ಭಾರತದ ಬದ್ಧತೆ ಮತ್ತು ಪ್ರಯತ್ನವನ್ನು ಶ್ಲಾಘಿಸಿದ್ದಾರೆ.2030ಕ್ಕೂ ಮೊದಲೇ ಶೇ.50ರಷ್ಟು ಪಳೆಯುಳಿಕೆಯೇತರ ಇಂಧನ ಸ್ಥಾಪಿತ ಸಾಮರ್ಥ್ಯ ಸಾಧಿಸಿರುವುದು ಮಹತ್ವಾಕಾಂಕ್ಷೆ, ನಾವೀನ್ಯತೆ ಮತ್ತು ಸುಸ್ಥಿರ ಅಭಿವೃದ್ಧಿಯ ಬದ್ಧತೆಗೆ ಸಾಕ್ಷಿಯಾಗಿದೆ. 2030ರ ವೇಳೆಗೆ 500 ಉಘ ಪಳೆಯುಳಿಕೆಯೇತರ ಸಾಮರ್ಥ್ಯ ಮತ್ತು 2070ರ ವೇಳೆಗೆ ನಿವ್ವಳ–ಶೂನ್ಯ ಹೊರಸೂಸುವಿಕೆಯ ಗುರಿಯತ್ತ ದೇಶ ಮುನ್ನುಗ್ಗುತ್ತಿದ್ದು, ಮುಂದಿನ ಪೀಳಿಗೆಗೆ ಶುಭವಾಗಲಿದೆ ಎಂದು ಆಶಿಸಿದ್ದಾರೆ.ಸಚಿವ ಜೋಶಿ ಇಚ್ಛಾಶಕ್ತಿ ಶ್ಲಾಘಿಸಿ ಪ್ರಧಾನಿ ಟ್ವೀಟ್:ಸಚಿವ ಪ್ರಹ್ಲಾದ್ ಜೋಶಿ ಅವರ ನೇತೃತ್ವದಲ್ಲಿ ಭಾರತ ಇಂದು ಹಸಿರು ಮತ್ತು ಸುಸ್ಥಿರ ಇಂಧನ ಭವಿಷ್ಯದತ್ತ ಸಾಗುತ್ತಿದೆ. ಪಳೆಯುಳಿಕೆಯೇತರ ಇಂಧನ ಮೂಲಗಳಿಂದ ಸ್ಥಾಪಿತ ವಿದ್ಯುತ್ ಸಾಮರ್ಥ್ಯದ ಶೇ.50ರಷ್ಟನ್ನು ಸಾಧಿಸಿದ್ದು, ಅವರ ಇಚ್ಛಾಶಕ್ತಿ, ಕಾರ್ಯತತ್ಪರತೆಗೆ ಸಾಕ್ಷಿಯಾಗಿದೆ ಶ್ಲಾಘಿಸಿ ಪ್ರಧಾನಿ ಮೋದಿ ಟ್ವೀಟ್ ಮಾಡಿದ್ದಾರೆ.ಪಿಎಂ ಕುಸುಮ್, ಪಿಎಂ ಸೂರ್ಯಘರ್, ಸೋಲಾರ್ ಪಾರ್ಕ್ ಅಳವಡಿಕೆ–ಅಭಿವೃದ್ಧಿ, ಮತ್ತು ರಾಷ್ಟ್ರೀಯ ವಿಂಡ್–ಸೋಲಾರ್ ಹೈಬ್ರಿಡ್ ಪಾಲಿಸಿಯಂತಹ ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನ ಮೂಲಕ ನವೀಕರಿಸಬಹುದಾದ ಇಂಧನ ವಲಯಕ್ಕೆ ಬಲಿಷ್ಠ ಬುನಾದಿ ಹಾಕಿದ್ದಾರೆ. ಪಿಎಂ ಸೂರ್ಯ ಘರ್ ಮೂಲಕ 1 ಕೋಟಿ ಮನೆಗಳಿಗೆ ಸೌರಶಕ್ತಿ ಬೆಳಕು ನೀಡಿದ್ದಾರೆಂದು ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

## ಪಾಲಿಕೆ ಆಯುಕ್ತರಿಂದ ಡೈನಾಮಿಕ್ ಕ್ಯೂಆರ್ ಕೋಡ್‌ಗೆ ಚಾಲನೆ

ಕಲಬುರಗಿ,ಜು.16:ವಿಶ್ವಬ್ಯಾಂಕ ನೆರವಿನ ಕರ್ನಾಟಕ ನಗರ ನೀರು ಸರಬರಾಜು ಆಧುನೀಕರಣ ಯೋಜನೆಯ ಅಡಿಯಲ್ಲಿ ಕಲಬುರಗಿ ಮಹಾನಗರದಲ್ಲಿ 24ಥ7 ನಿರಂತರ ನೀರು ಸರಬರಾಜು ಯೋಜನೆಯ ಕಾಮಗಾರಿಗಳ ಅನುಷ್ಠಾನಗೊಳ್ಳುತ್ತಿದ್ದು, ಮನೆಯಿಂದಲೇ ನೇರವಾಗಿ ನೀರಿನ ಕರ ಪಾವತಿಸಲು ಅನುಕೂಲವಾಗುವಂತೆ ಡೈನಾಮಿಕ ಕ್ಯೂಆರ್ ಕೋಡ್ (ಆಥಿ–ಟಿಚಿಟುಛಿ ಕಿಖ ಅಠಜಜ) ಗೆ ಮಹಾನಗರ ಪಾಲಿಕೆಯ ಆಯುಕ್ತರಾದ ಅವಿನಾಶ ಸಿಂಧೆ ಅವರು ಕಲಬುರಗಿಯಲ್ಲಿ ಬುಧವಾರ ಚಾಲನೆ ನೀಡಿದರು.

ಪಾಲಿಕೆ ಆಯುಕ್ತರು ಗ್ರಾಹಕರ ಮನೆಗೆ ಭೇಟಿ ನೀಡಿ ಡೈನಾಮಿಕ್ ಕ್ಯೂಆರ್ ಕೋಡ್ ಹೇಗೆ ಕಾರ್ಯನಿರ್ವಹಿಸುತ್ತದೆ ಎಂಬುದನ್ನು ನೀರಿನ ಕರ ಪಾವತಿಯ ಪ್ರಕ್ರಿಯೆ ಪರಿಶೀಲಿಸಿ, ನಗರದ ಗ್ರಾಹಕರೆಲ್ಲರು ತಮ್ಮ ಮನೆಯಿಂದಲೆ ನೇರವಾಗಿ ಕ್ಯೂಆರ್ ಕೋಡ ಮೂಲಕ ನೀರಿನ ಕರ ಪಾವತಿ ಮಾಡಬೇಕೆಂದು ಮನವಿ ಮಾಡಿದರು. ನೀರು ಸರಬರಾಜು

ವ್ಯವಸ್ಥೆಯಲ್ಲಿ ಸುಧಾರಣೆ ತರುವ ಉದ್ದೇಶದಿಂದ ಹಾಗೂ ಗ್ರಾಹಕರ ದೂರುಗಳಿಗೆ ಬೇಗ ಪರಿಹಾರ ಒದಗಿಸುವ ಉದ್ದೇಶದಿಂದ ಮೆ॥ ಎಲ್ ಆಂಡ್ ಟಿ ಕಂಪನಿಯು ನಗರದಲ್ಲಿ ಗ್ರಾಹಕರಿಗೆ ಸರಳವಾಗಿ ಮಾಹಿತಿ ಒದಗಿಸುವ ಉದ್ದೇಶದಿಂದ ನಗರದ 3 ಸ್ಥಳಗಳಲ್ಲಿ ಹಳೆಯ ಎಸ್.ಪಿ. ಕಛೇರಿ, ಪಿ ಆಂಡ್ ಟಿ. ಕಾಲೋನಿ ಹಾಗೂ ರಫೀಕ ಚೌಕ್ ಹತ್ತಿರ ಗ್ರಾಹಕರ ಸೇವಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.

## ನ್ಯಾಯ ಸಂಹಿತೆ: ನ್ಯಾಯಮೂರ್ತಿ ಮಹಮ್ಮದ ನವಾಜ

ಸಂಯುಕ್ತ ಆಶ್ರಯದಲ್ಲಿ ಇಂದು ನಗರದ ಜಿಲ್ಲಾ ನ್ಯಾಯಾಲಯ ಆವರಣದಲ್ಲಿನ ವಕೀಲರ ಸಂಘದ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಭಾರತೀಯ ನ್ಯಾಯ ಸಂಹಿತೆ ಹಾಗೂ ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ ಕಾಯ್ದೆಗಳ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಈ ಎರಡೂ ಸಂಹಿತೆಗಳಲ್ಲಿ ನಾಗರೀಕರ ಹಕ್ಕು ಕಾಪಾಡುವದರ ಜೊತೆಯಲ್ಲಿ ಕಾನೂನಿನ ಪಾಲನೆಯನ್ನು ಸವಿವರವಾಗಿ ವಿವರಿಸಲಾಗಿದೆ ಎಂದರು. ಹೊಸದಾಗಿ ಜಾರಿಗೆ ಬಂದಿರುವ ಈ ಸಂಹಿತೆಗಳ ಅರಿವು ಎಲ್ಲರಿಗೂ ಇರಬೇಕಾದದ್ದು ಅತ್ಯವಶ್ಯಕ ಅದರಲ್ಲೂ ನ್ಯಾಯವಾದಿಗಳಿಗೆ ಅತಿ ಹೆಚ್ಚಿನ ಅರಿವಿನ ಅಗತ್ಯವಿದೆ. ನ್ಯಾಯಾದೀಶರ ಸಮಯ ಅಮೂಲ್ಯವಾದದ್ದು, ಇಂತಹ ಸಂದರ್ಭದಲ್ಲಿ ಸಹ ಕಚೇರಿ ಕೆಲಸದ ನಂತರ ಇಂತಹ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದು ಸಂತಸ ತಂದಿದೆ. ಬ್ರಿಟೀಷರ ಕಾಲದಲ್ಲಿನ ಕಾನೂನುಗಳನ್ನು ಕೈಬಿಟ್ಟು ಭಾರತೀಯ ನ್ಯಾಯ ಸಂಹಿತೆಯನ್ನು ಜಾರಿಗೆ ತರಲಾಗಿದೆ. ಈ ಸಂಹಿತೆಗಳನ್ನು ಯಾಕೆ ಜಾರಿಗೆ ತರಲಾಯಿತು ಎನ್ನುವುದಕ್ಕೆ ಮುಖ್ಯ ಕಾರಣ ನಾಗರಿಕರನ್ನು ಕೇಂದ್ರಿಕರಿಸಿರುವುದಾಗಿದೆ. ಈ ಹೊಸ ಕಾನೂನುಗಳು ಪರಿಣಾಮಕಾರಿಯಾಗಿ ಜಾರಿಗೆ ತರುವುದರಲ್ಲಿ ಪೊಲೀಸ್‌ರ ಜವಾಬ್ದಾರಿ ಹೆಚ್ಚಿದೆ. ಇವುಗಳಲ್ಲಿ ಬಹಳ ವಿವರವಾಗಿ ಎಲ್ಲವನ್ನೂ ವಿವರಿಸಲಾಗಿದ್ದು, ಜುಲೈ 2024 ರ ನಂತರದ ಪ್ರಕರಣಗಳು ಇದರಡಿಯಲ್ಲಿ ಬರುತ್ತವೆ. ಈ ಮುಂಚಿನ ಪ್ರಕರಣಗಳಿಗೆ ಸಂಬಂಧಿಸಿದಂತೆ ಐಪಿಸಿ ಹಾಗೂ ಭಾರತೀಯ ನ್ಯಾಯ ಸಂಹಿತೆ ಕುರಿತು ಯಾವುದೇ ಗೊಂದಲ ಬೇಡವೆಂದರು. ಇತ್ತೀಚಿನ ಲೋಕ ಅದಾಲತ್‌ನಲ್ಲಿ ಮಧ್ಯಸ್ಥಿಕೆಯ ಮೂಲಕ ದಾಖಲೆಯ ಪ್ರಮಾಣದ ಪ್ರಕರಣಗಳನ್ನು ಬಗೆಹರಿಸುವಲ್ಲಿ ನ್ಯಾಯಾದೀಶರ ಪಾತ್ರ ಅತ್ಯಂತ ಮುಖ್ಯವಾದದ್ದು ಮತ್ತು ನ್ಯಾಯವಾದಿಗಳ ಪಾತ್ರವನ್ನು ಸಹ ನಾನು ಗೌರವಿಸುತ್ತೇನೆ, ಸಹಕರಿಸಿದ ಎಲ್ಲರಿಗೂ ಎಂದು ಅಭಿನಂದನೆಗಳು. ಹೊಸ ಕಾನೂನುಗಳ ಮುನ್ನಡಿ ಕುರಿತು ವಿವರಿಸಿದ ಅವರು ನ್ಯಾಯವಾದಿಗಳಿಗೆ ಹಾಗೂನ್ಯಾಯಾಧೀಶರಿಗೆ ನಿರಂತರ ಓದು ಅತ್ಯಾವಶ್ಯಕ ಎಂದು ಹೇಳಿದರು. ಕರ್ನಾಟಕ ಉಚ್ಚ ನ್ಯಾಯಾಲಯ ಕಲಬುರಗಿ ಪೀಠದ ನ್ಯಾಯಮೂರ್ತಿ ವಿ ಶ್ರೀಶಾನಂದ ಅವರು ಈ ಎರಡು ಹೊಸ ಕಾಯ್ದೆಗಳ ಕುರಿತು ವಿಶೇಷ ಉಪನ್ಯಾಸ ನೀಡಿ ಮಾತನಾಡಿ ಬ್ರಿಟೀಷರ ಕಾಲದ ಬಹಳ ಹಳೆಯ ಕಾನೂನುಗಳು ಇಂದಿನ ಸನ್ನಿವೇಶದಲ್ಲಿ ಅನಗತ್ಯ ಎನ್ನುವ ಕಾನೂನುಗಳನ್ನು ತೆಗೆದು ಹಾಕಿ ಈ ಎರಡೂ ಹೊಸ ಸಂಹಿತೆಗಳಲ್ಲಿ ಗಮನಾರ್ಹವಾದ ಬದಲಾವಣೆಗಳನ್ನು ತರಲಾಗಿದೆ ಎಂದರು. ಅಪರಾಧಗಳಲ್ಲಿ ಲಿಂಗ ಸಮಾನತೆ ಜೊತೆಗೆ ತೃತೀಯ ಲಿಂಗವನ್ನು ಸಹ ಪರಿಗಣಿಸಲಾಗಿದೆ. ಪ್ರಸ್ತುತಕ್ಕೆ ಸಂಬಂಧಿಸಿದಂತೆ ಎಲೆಕ್ಟ್ರಾನಿಕ್ ಉಪಕರಣಗಳ ಸಾಕ್ಷಿ, ನ್ಯಾಯಾಲಯಗಳ ಡಿಜಿಟಲೀಕರಣ ಸೇರಿದಂತೆ ತ್ವರಿತ ನ್ಯಾಯಕ್ಕೆ ಅವಶ್ಯಕವಿರುವ ಅಂಶಗಳನ್ನು ಒಳಗೊಂಡಿದೆ. ನನ್ನಈ ವೃತ್ತಿಯಲ್ಲಿ ಕಲಬುರಗಿ ವಿಶೇಷ ಸ್ಥಾನ ಹೊಂದಿದೆ, ಕಲಬುರಗಿಯಲ್ಲಿ ನನ್ನ ವೃತ್ತಿ ಆರಂಭವಾಗಿದ್ದು, ಸಿವಿಲ್ ಕೇಸ್ ನ್ಯಾಯವಾದಿಯೊಬ್ಬ ನ್ಯಾಯಾದೀಶನಾಗಿ ಆಯ್ಕೆಯಾದಾಗ ಹಲವು ಅನುಭವಗಳು ಹೊಸತನ್ನು ಕಲಿಸಿವೆ. ಮೂರು ವರ್ಷ ಎರಡು ತಿಂಗಳು ನಾನು ಇಲ್ಲಿ ಕೆಲಸ ಮಾಡಿದ್ದೇನೆ.

## ಮಾದಕ ದ್ರವ್ಯ ಸಾಗಾಟ :ಕಾಂಗ್ರೆಸ್ ಮುಖಂಡನ ಸೆರೆ: ಸಿಬಿಐ ತನಿಖೆಗೆ ರೇವೂರ್ ಒತ್ತಾಯ




ಕಲಬುರಗಿ:ಜು.16:ಮಾದಕ ದ್ರವ್ಯಸಾಗಾಟ ಪ್ರಕರಣದಲ್ಲಿ ದಕ್ಷಿಣ ಕ್ಷೇತ್ರದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಲಿಂಗರಾಜ್ ಕಣ್ಣಿ ಎಂಬಾತನಿಗೆ ಮಹಾರಾಷ್ಟ್ರದ ಥಾಣೆ ಪೋಲಿಸರು ಬಂಧಿಸಿದ್ದಾರೆ. ಕಣ್ಣಿ ಪ್ರಭಾವಿ ರಾಜಕಾರಣಿಯಾಗಿರುವುದರಿಂದ ಇಡೀ ಪ್ರಕರಣವನ್ನು ಮುಚ್ಚಿ ಹಾಕಲು ಕಾಂಗ್ರೆಸ್ ಪಕ್ಷವು ಯತ್ನಿಸುತ್ತಿದೆ. ಹಾಗಾಗಿ ಪ್ರಕರಣವನ್ನು ಸಿಬಿಐ ತನಿಖೆಗೆ ಒಪ್ಪಿಸಬೇಕು ಎಂದು ಮಾಜಿ ಶಾಸಕ ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಮಾಜಿ ಅಧ್ಯಕ್ಷ ದತ್ತಾತ್ರೇಯ ಪಾಟೀಲ್ ರೇವೂರ್ ಅವರು ಒತ್ತಾಯಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆರೋಪಿ ಲಿಂಗರಾಜ್ ಕಣ್ಣಿ ವಿರುದ್ಧ ಆಂದೋಲಾ ಶ್ರೀಗಳು ಈಗಾಗಲೇ ಪ್ರಸ್ತಾಪಿಸಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್ ಅವರ ರಾಜೀನಾಮೆಗೆ ಒತ್ತಾಯಿಸಿದ್ದು ಸಮರ್ಥನೀಯವಾಗಿದೆ.ಬದಲಾಗಿ ಶಾಸಕ ಅಲ್ಲಮಪ್ರಭು ಪಾಟೀಲ್ ಅವರು ಆಂದೋಲಾ ಶ್ರೀಗಳಿಗೆ ಕಾವಿ ಕಳಚಿ ರಾಜಕೀಯಕ್ಕೆ ಬರಲು ಆಗ್ರಹಿಸಿದ್ದು ಸರಿಯಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ದಕ್ಷಿಣ ಕ್ಷೇತ್ರದಲ್ಲಿ ಲಿಂಗರಾಜ್ ಕಣ್ಣಿ ಸುಮಾರು 20 ಕೋಟಿ ರೂ.ಗಳ ರಸ್ತೆ ಕಾಮಗಾರಿಯನ್ನು ಕೈಗೊಂಡಿದ್ದಾನೆ. ಆ ಕಾಮಗಾರಿ ಕೊಡಲು ಯಾರು ಕಾರಣ–ರು? ಎಂಬುದರ ಕುರಿತು ಶಾಸಕ ಅಲ್ಲಮಪ್ರಭು ಪಾಟೀಲ್ ಉತ್ತರಿಸಬೇಕು. ಇಡೀ ಕಾಂಗ್ರೆಸ್ ಪಕ್ಷದವರೇ ಅಕ್ರಮ ಮಾದಕ ದ್ರವ್ಯ ಸಾಗಾಟದಲ್ಲಿ ತೊಡಗಿದ್ದು, ಜಿಲ್ಲೆಯಲ್ಲಿ ಕಳೆದ ಆರು ತಿಂಗಳಲ್ಲಿ ಇದು ಹೆಚ್ಚು ಪ್ರಮಾಣದಲ್ಲಿ ಮಾರಾಟವಾಗುತ್ತಿದೆ. ಹೀಗಾಗಿ ಲಿಂಗರಾಜ್ ಕಣ್ಣಿ ಪ್ರಕರಣದಲ್ಲಿ ಶಾಸಕ ಅಲ್ಲಮಪ್ರಭು ಪಾಟೀಲ್ ಅವರು ರಾಜಕೀಯ ನಿವೃತ್ತಿ ಬದಲು ಶಾಸಕ ಸ್ಥಾನಕ್ಕೆ ರಾಜೀನಾಮೆ ಕೊಡಲಿ ಎಂದು ಅವರು ಒತ್ತಾಯಿಸಿದರು.

ಈ ಮುನ್ನ ವರ್ಷಕ್ಕೆ ಜಿಲ್ಲೆಯಲ್ಲಿ ಮಾದಕ ದ್ರವ್ಯ ಸಾಗಾಟದ 15–16 ಪ್ರಕರಣಗಳು ಮಾತ್ರ ದಾಖಲಾಗುತ್ತಿದ್ದವು. ಕಳೆದ ಆರು ತಿಂಗಳಲ್ಲಿ ಅದೂ ನಗರ ಪೋಲಿಸ್ ಆಯುಕ್ತಾಲಯದ ವ್ಯಾಪ್ತಿಯಲ್ಲಿ 60 ಪ್ರಕರಣಗಳು ದಾಖಲಾಗಿವೆ. ಇದಕ್ಕೆ ಯಾರು ಹೊಣೆ? ಎಂದು ಅವರು ಖಾರವಾಗಿ ಪ್ರಶ್ನಿಸಿದರು.

ವ್ಯಸನಮುಕ್ತ ಜಿಲ್ಲೆಯನ್ನಾಗಿಸಲು ಕಾಂಗ್ರೆಸ್ ಸರ್ಕಾರ ಘೋಷಣೆ ಮಾಡಿದೆ. ಈಗ ನೋಡಿದರೆ ಎಲ್ಲಿ ನೋಡಿದಲ್ಲಿ ವ್ಯಸನಗಳ ಪ್ರಕರಣಗಳು ಸಂಭವಿಸುತ್ತಿವೆ. ಹೀಗಾಗಿ ಯುವಕರು ಅಡ್ಡದಾರಿ ಹಿಡಿಯುವುದನ್ನು ತಪ್ಪಿಸಲು ಸಂಪೂರ್ಣ ಜಾಲವನ್ನು ಬೇಧಿಸಲು ಪ್ರಕರಣವನ್ನು ಸಿಬಿಐ ತನಿಖೆಗೆ ಒಪ್ಪಿಸಬೇಕು ಎಂದು ಅವರು ಆಗ್ರಹಿಸಿದರು.

ಬಿಜೆಪಿ ನಗರ ಜಿಲ್ಲಾಧ್ಯಕ್ಷ ಚಂದು ಪಾಟೀಲ್ ಅವರು ಮಾತನಾಡಿ, ಜಿಲ್ಲೆಯಲ್ಲಿ ಕೊಲೆ, ಸುಲಿಗೆ, ಹಾಡುಹಗಲೇ ಚಿನ್ನದಂಗಡಿ ದರೋಡೆ ಪ್ರಕರಣ ಮುಂತಾದವುಗಳಿಂದ ಇಡೀ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕುಸಿದುಬಿದ್ದಿದೆ. ಇಂತಹ ಸಂದರ್ಭದಲ್ಲಿ ಪ್ರಭಾವಿ ಕಾಂಗ್ರೆಸ್ ಮುಖಂಡ ಡ್ರಗ್ಸ್ ಮಾಫಿಯಾದಲ್ಲಿ ಬಂಧಿಯಾಗಿದ್ದಾನೆ. ಆತನ ಪ್ರಕರಣವನ್ನು ಸಿಬಿಐಗೆ ಒಪ್ಪಿಸಲು ನಾವು ನಿಯೋಗದಲ್ಲಿ ಮಹಾರಾಷ್ಟ್ರ ರಾಜ್ಯ ಸರ್ಕಾರ–ಕ್ಕೆ ಭೇಟಿ ಮಾಡಿ ಮನವಿ ಸಲ್ಲಿಸುತ್ತೇವೆ ಎಂದರು.

ಜಿಲ್ಲೆಯ ಎಲ್ಲ ಸಿಪಿಐಗಳು ಕಾಂಗ್ರೆಸ್ ಗುಲಾಮಗಿರಿಯಂತೆ ವರ್ತಿಸುತ್ತಿದ್ದಾರೆ. ಹೀಗಾಗಿ ಎಲ್ಲಿ ನೋಡಿದಲ್ಲಿ ಇಂತಹ ಘಟನೆಗಳು ಸಂಭವಿಸುತ್ತಿದ್ದು, ಪೋಲಿಸ್ ಆಯುಕ್ತರು ಹಾಗೂ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳ ಬದಲು ಜಿಲ್ಲೆಯ ಎಲ್ಲ ವೃತ್ತ ನಿರೀಕ್ಷಕರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

ಆಂದೋಲಾ ಶ್ರೀಗಳು ಬಿಜೆಪಿಯ ನಿಷ್ಕ್ರೀಯತೆ ಕುರಿತು ಮಾಡಿದ ಆರೋಪದ ಕುರಿತು ಸುದ್ದಿಗಾರರು ಪ್ರಶ್ನಿಸಿದಾಗ, ಅದು ಅವರ ವೈಯಕ್ತಿಕ ಹೇಳಿಕೆ ಎಂದರು. ಹಿಂದೂ ಬಾಲಕಿ ಮೇಲಿನ ಅತ್ಯಾಚಾರ ಪ್ರಕರಣದ ವಿರುದ್ಧ ಸರ್ವ ಹಿಂದೂ ಸಮಾಜದವರು ಹಮ್ಮಿಕೊಂಡ ಪ್ರತಿಭಟನೆಯಲ್ಲಿ ಬಿಜೆಪಿ ನಾಯಕರು ಪಾಲ್ಗೊಂಡಿಲ್ಲ ಎಂಬ ಮತ್ತೊಂದು ಪ್ರಶ್ನೆಗೆ ಚಂದು ಪಾಟೀಲ್ ಅವರು ಉತ್ತರಿಸಿ, ಎಲ್ಲ ಹೋರಾಟಗಳಲ್ಲೂ ಭಾಗವಹಿಸಬೇಕಿಲ್ಲ ಎಂದರು. ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಅಶೋಕ ಬಗಲಿ, ರಾಜ್ಯ ವಿಧಾನ ಪರಿಷತ್ ಮಾಜಿ ಸದಸ್ಯ ಅಮರನಾಥ ಪಾಟೀಲ್, ರಾಜು ವಾಡೇಕರ್, ಶಿವಯೋಗಿ ನಾಗನಹಳ್ಳಿ, ಸಂತೋಷ ಹಾದಿಮನಿ, ಉಮೇಶ ಪಾಟೀಲ್ ಮುಂತಾದವರು ಉಪಸ್ಥಿತರಿದ್ದರು.

## 18ರಿಂದ 3 ದಿನ ಬಿಟೇಕ್-2025 ಕಾರ್ಯಕ್ರಮ: ಹಾವಶೆಟ್ಟಿ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 16 : ಬಿಲ್ಡ್ ಟೆಕ್ 2025 ಕ್ರೆಡೈ ಬೀದರ, ಇಂಡಿಯನ್ ಇಂಸ್ಟುಟ್ ಆಫ್ ಕಾಂಕ್ರೀಟ್ ಮತ್ತು ಯುಎಸ್ ಕಮ್ಯೂನಿಕೇಶನ್ ಸಹಯೋಗದೊಂದಿಗೆ ಬೀದರ ನಗರದ ಹೊಸ ಬಸ್ಟಾಂಡ್ ಎದುರಿಗಿನ ಜೀರಾ ಕಲ್ಯಾಣ ಮಂಟಪದಲ್ಲಿ ಇದೇ ತಿಂಗಳು 18,19,20 ಮೂರು ದಿನಗಳ ಕಾಲ ವಸ್ತು ಪ್ರದರ್ಶನ ಏರ್ಪಡಿಸಿದ್ದೇವೆ. ಕಟ್ಟಡ ಕಟ್ಟುವ ಉದ್ದೇಶ ಹೊಂದಿರುವ ಸಾರ್ವಜನಿಕರಿಗೆ ಮತ್ತು ಈಗಾಗಲೇ ಮನೆ ಕಟ್ಟುತ್ತಿರುವವರಿಗೆ ಕಟ್ಟಡ ಸಾಮಗ್ರಿಗಳ ಬಗ್ಗೆ ಸವಿವರ ಮಾಹಿತಿ ಒದಗಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಇಂಡಿಯನ್ ಕಾಂಕ್ರಿಟ್ ಇನಸ್ಟಿಟ್ಯುಟ್ ಅಧ್ಯಕ್ಷರಾದ ಇಂಜಿನಿಯರ್ ಹಾವಶೆಟ್ಟಿ ಪಾಟೀಲ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಬುಧವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಲಾಭರಹಿತ ಸಂಸ್ಥೆಯಾಗಿರುವ ಈ ಸಂಸ್ಥೆ ಕಾಂಕ್ರೀಟ್ ಕುರಿತು ಜ್ಞಾನವನ್ನು ಪ್ರಸಾರ ಮಾಡುವುದು, ಕಾಂಕ್ರೀಟ್ ತಂತ್ರಜ್ಞಾನ ಮತ್ತು ನಿರ್ಮಾಣವನ್ನು ಉತ್ತೇಜಿಸುವುದು ಮತ್ತು ಕಾಂಕ್ರೀಟ್‌ನ ಸಂಶೋಧನಾ ಅಗತ್ಯಗಳನ್ನು ಪರಿಹರಿಸಲು ಇದು ಸಮರ್ಪಿತವಾಗಿದೆ ಎಂದರು. ಬಿಲ್ಡ್ ಟೆಕ್ 2025, ಕಟ್ಟಡ ಸಾಮಗ್ರಿಗಳ, ಒಳ ಹೊರ ವಿನ್ಯಾಸ ಮತ್ತು ಪಿಟೋಪಕರಣಗಳ ಅತಿ ದೊಡ್ಡ ವಸ್ತು ಪ್ರದರ್ಶನ ಒಂದೇ ಸೂರಿನಡಿ 70 ಮಳಿಗೆಗಳನ್ನು ಹೊಂದಿರುತ್ತವೆ. ಸಮಗ್ರ ಕಟ್ಟಡ ಕಟ್ಟುವ ಸಾಮಗ್ರಿಗಳ ಪ್ರದರ್ಶನ ಮತ್ತು ಮಾಹಿತಿ ಒದಗಿಸಲಿಕ್ಕಿದೆ. ಸಾಮಾನ್ಯ ಕಟ್ಟಡ ಸಾಮಗ್ರಿಗಳಾದ ಸಿಮೆಂಟ್, ಬ್ರಿಕ್ಸ್, ಅಗ್ರಿ ಗೇಟ್ ಎಂ ಸೆಂಡ್, ಸ್ಟೀಲ್, ಪ್ಲಂಬಿಂಗ್, ಟೈಲ್ಸ್, ಪ್ಲೈವುಡ್, ಇಂಟೀರಿಯರಿಗೆ ಸಂಬಂಧಪಟ್ಟ ಪರಿಕರಗಳು, ಎರಿಯರ್ ಉತ್ಪನ್ನಗಳು, ಸೋಲಾರ್ ಮತ್ತು ಎಲೆಕ್ಟ್ರಿಕಲ್ ಉತ್ಪನ್ನಗಳು ಅತ್ಯಾಧುನಿಕ ಗುಣಮಟ್ಟದ ಸೆಕ್ಯೂರಿಟಿ ಉತ್ಪನ್ನಗಳು ಯುಪಿವಿಸಿ ಡೋರ್ಸ್ ಮತ್ತು ವಿಂಡೋಸ್ ಪೈಂಟ್ ಮತ್ತು ಅದೆಸಿವ್, ವಾಟರ್ ಪ್ರೂಫಿಂಗ್ ಹೀಗೆ ಹತ್ತು ಹಲವಾರು ಉತ್ಪನ್ನಗಳು ವಿವಿಧ ನವ ನವೀನ ಕೆಲ ವಿನ್ಯಾಸಗಳು ನೋಡಲು ಸಿಗುತ್ತವೆ. ಸಾರ್ವಜನಿಕರು ಮುಕ್ತವಾಗಿ ಬಂದು ಕಟ್ಟಡ ಕಾಮಗರಿಗಳನ್ನು ವೀಕ್ಷಿಸಿ ತಮ್ಮ ತಮ್ಮ ಸಮಸ್ಯೆಗಳನ್ನು ಕಂಪನಿ ಪದಾಧಿಕಾರಿಗಳಿಗೆ ಮತ್ತು ಸ್ಥಳೀಯ ಡೀಲರ್ಸ್‌ಗಳ ಜೊತೆ ಮುಕ್ತವಾಗಿ ಸಮಾಲೋಚಿಸಬಹುದು. ಶುಕ್ರವಾರ ಶನಿವಾರ ಮತ್ತು ಭಾನುವಾರ ಬೆಳಗ್ಗೆ 10:30 ಗಂಟೆಯಿಂದ ಸಾಯಂಕಾಲ 8:30 ಗಂಟೆವರೆಗೆ ಕಾರ್ಯಕ್ರಮ ನಿರಂತರವಾಗಿ ನಡೆಯುತ್ತದೆ. ಕಟ್ಟಡ ಕಟ್ಟುವವರಿಗೆ ಮತ್ತು ಇತರೆ ಎಲ್ಲ ಸಾರ್ವಜನಿಕರಿಗೆ, ವಿದ್ಯಾರ್ಥಿಗಳಿಗೆ ಈ ಕಾರ್ಯಕ್ರಮದಲ್ಲಿ ಮುಕ್ತ ಪ್ರವೇಶ ನೀಡಲಾಗಿದೆ. ದಯವಿಟ್ಟು ಈಗ ಕಾರ್ಯಕ್ರಮದ ಸವಿದ್ದೇಶವನ್ನು ಸಾರ್ವಜನಿಕರು ಪಡೆಯಬೇಕೆಂದು ಕರೆ ನೀಡಿದರು. ರಾಮಕೃಷ್ಣ ವಿವೇಕಾನಂದ ಆಶ್ರಮದ ಪೂಜ್ಯ ಜ್ಯೋತಿರ್ಮಯಾನಂದ ಸ್ವಾಮಿಜಿ ಸಾನಿಧ್ಯ ವಹಿಸಲಿರುವ ಕಾರ್ಯಕ್ರಮವನ್ನು ಸಂಸದ ಸಾಗರ ಖಂಡ್ರೆ ಉದ್ಘಾಟಿಸುವರು. ಕಲಬುರಗಿ ಈಶಾನ್ಯ ವಲಯದ ಲೋಕೊಪಯೋಗಿ ಇಲಾಖೆಯ ಮುಖ್ಯ ಇಂಜಿನಿಯರ್ ಶರಣಪ್ಪ ಸುಲಗುಂಟೆ, ಬೀದರ್ ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರ ಶಿವಶಂಕರ ಕಾಮಶೆಟ್ಟಿ, ರಾಜೂರಿ ಸ್ಟೀಲ್‌ನ ನಿರ್ದೇಶಕ ಸಂತೋಷ ಮುಂದಾಡ, ಕರ್ನಾಟಕ ವೃತ್ತಿಪರ ಸಿವಿಲ್ ಇಂಜಿನಿಯರ್‌ಗಳ ಮಂಡಳಿ ಸದಸ್ಯ ಮುರಲಿಧರ.ಜಿ.ಕೆ, ಕ್ರೆಡಾಯಿ ಅಧ್ಯಕ್ಷ ರವಿಂದ್ರನಾಥ ಮುಲಗೆ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ತಾನು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವುದಾಗಿ ಪಾಟೀಲ ತಿಳಿಸಿದರು.ಯು.ಎಸ್ ಕಮ್ಯುನಿಕೇಶನ್ ಮುಖ್ಯಸ್ಥರಾದ ಉಮಾಪತಿ ಮಾತನಾಡಿ, ಯು. ಎಸ್ ಸಂಸ್ಥೆ, ಸುಮಾರು 25 ವರ್ಷಗಳಿಂದ ಕರ್ನಾಟಕ ರಾಜ್ಯಾದ್ಯಂತಾ ಕಟ್ಟಡ ಕಟ್ಟುವ ಉತ್ಪನ್ನಗಳ ಹೊಸ ಹೊಸ ರೂಪಗಳನ್ನು ಪರಿಚಯಿಸುತ್ತ ಬಂದಿದೆ. ಕಟ್ಟಡ ಸಾಮಗ್ರಿ ಮತ್ತು ಅದಕ್ಕೆ ಸಹಾಯಿಕ ಉತ್ಪಾದನಾ ಕ್ಷೇತ್ರದಲ್ಲಿರುವ ಎಲ್ಲಾ ಕಂಪನಿಗಳು ಯು.ಎಸ್ ಕಮ್ಯುನಿಕೇಶನ್ ಸಂಸ್ಥೆಯ ಸಹಾಯದಿಂದ ಇಂಜಿನಿಯರ್ಸ್, ಅರ್ಕಿಟೆಕ್ಚರ್ಸ್,ಗಳನ್ನು ತಲುಪುತ್ತಿವೆ ಎಂದರು. ಕ್ರೆಡಾಯ್ ಅಧ್ಯಕ್ಷರಾದ ರವಿಂದ್ರನಾಥ ಮೂಲಗೆ ಮಾತನಾಡಿ, ಇದು ಭಾರತದಲ್ಲಿನ ರಿಯಲ್ ಎಸ್ಟೇಟ್ ಡೆವಲಪರ್‌ಗಳ ಒಂದು ಪ್ರಮುಖ ಸಂಘಟನೆಯಾಗಿದೆ. ಇದು 230 ನಗರಗಳಲ್ಲಿ 13,000 ಕ್ಕಿಂತ ಹೆಚ್ಚು ಡೆವಲಪರ್‌ಗಳನ್ನು ಒಗ್ಗೂಡಿಸುತ್ತದೆ. ಕ್ರೆಡಾಯ್ ಉದ್ಯಮವನ್ನು ಸಂಘಟಿತ ಮತ್ತು ಪ್ರಗತಿಪರವಾಗಿಸಲು ಕೆಲಸ ಮಾಡುತ್ತದೆ ಮತ್ತು ಸರ್ಕಾರ, ನೀತಿ ನಿರೂಪಕರು, ಹೂಡಿಕೆದಾರರು ಮತ್ತು ಗ್ರಾಹಕರೊಂದಿಗೆ ನಿಕಟವಾಗಿ ಕಾರ್ಯನಿರ್ವಹಿಸುತ್ತದೆ ಎಂದವರು ಹೇಳಿದರು.

ರಾಜೂರಿ ಸ್ಟೀಲ್ಸ್ ಅಧಿಕಾರಿ ಪ್ರದೀಪ ಕುಲಕರ್ಣಿ ಮಾತನಾಡಿ, ಇದು ಸ್ಥಿರವಾದ ಉತ್ಪನ್ನವನ್ನು ಖಚಿತಪಡಿಸಿಕೊಳ್ಳಲು ಮತ್ತು ಗ್ರಾಹಕರಲ್ಲಿ ನಂಬಿಕೆಯನ್ನು ಪ್ರೇರೇಪಿಸಲು ರಾಜೂರಿ ಸ್ಟೀಲ್,ಥರ್ಮೆಕ್ಸ್ ಜರ್ಮನಿಯ ಕೈನ್ನಿಂಗ್ ಮತ್ತು ಟೆಂಪರಿಂಗ್ ತಂತ್ರಜ್ಞಾನವನ್ನು ಅಳವಡಿಸಿಕೊಂಡಿಡಿದೆ. ಇದು ಸುಧಾರಿತ ಗುಣಮಟ್ಟದ ನಿರ್ವಹಣಾ ವ್ಯವಸ್ಥೆಯನ್ನು ನಿರ್ಮಿಸಿದೆ ಮತ್ತು ಅದರ ನಾಯಕತ್ವವನ್ನು ಕ್ರೋಢೀಕರಿಸುವ ದೃಷ್ಟಿಯಿಂದ ರಾಜೂರಿ ಸ್ಟೀಲ್ಸ್ ತನ್ನ ಮಾರುಕಟ್ಟೆಯನ್ನು ಮತ್ತಷ್ಟು ನಿರ್ಮಿಸಲು ಗಣನೀಯ ಸಾಮರ್ಥ್ಯದ ತಂಡವನ್ನು ನೇಮಿಸಿಕೊಳ್ಳುವ ಮತ್ತು ತರಬೇತಿ ನೀಡುವತ್ತ ಗಮನಹರಿಸಿದೆ. ಘನ ನಾಯಕತ್ವವು ಬಹು ಆಯಾಮದ ಸ್ವಭಾವವನ್ನು ಹೊಂದಿದೆ ಮತ್ತು ರಾಜೂರಿ ಸ್ಟೀಲ್ಸ್‌ನಲ್ಲಿ ನಾವು ಯಾವಾಗಲೂ ಡೊಮೇನ್‌ಗಳು, ಪ್ರದೇಶಗಳು ಮತ್ತು ಉತ್ಪನ್ನಗಳಾದ್ಯಂತ ನಮ್ಮ ಸಾಮರ್ಥ್ಯಗಳನ್ನು ಬಲಪಡಿಸುತ್ತಿದ್ದೇವೆ ಎಂದರು.

ರಾಜೂರಿ ಸ್ಟೀಲ್ ಕಳೆದ ಹತ್ತು ವರ್ಷಗಳಿಂದ ಬಿಲ್ಡ್ ಟೆಕ್ ಬಿಲ್ ಟೆಕ್ ಕಾರ್ಯಕ್ರಮಗಳಿಗೆ ಬೆನ್ನೆಲುಬಾಗಿ ನಿಂತು ಪ್ರೇರೇಪಿಸುತ್ತಾ ಬಂದಿರುತ್ತದೆ. ಸಾರ್ವಜನಿಕರಿಗೆ ಕಟ್ಟಡ ಸಾಮಗ್ರಿಗಳ ಬಗ್ಗೆ ಮಾಹಿತಿ ಕೊಡುವ ನಿಟ್ಟಿನಲ್ಲಿ ಆರ್ಥಿಕವಾಗಿ ಇಂಜಿನಿಯರ್ಸ್‌ಗಳಿಗೆ ಆರ್ಕಿಟೆಕ್ಟ್‌ಗಳಿಗೆ ಮತ್ತು ಈ ಪ್ರಕಾರ ಬಿಲ್ ಟೆಕ್ ಕಾರ್ಯಕ್ರಮಗಳಿಗೆ ಜೊತೆಯಾಗಿ ನಿಲ್ಲುತ್ತಾ ಸಾರ್ವಜನಿಕರಿಗೆ ಸ್ನೇಹಿ ಆಗಿರುತ್ತದೆ ಎಂದರು. ರಾಜೂರಿ ಸ್ಟೀಲ್ ಮಾಲಿಕರಾದ ಸುಧೀರ ಅಗ್ರವಾಲ, ಕ್ರೆಡಾಯ್ ಕಾರ್ಯದರ್ಶಿ ಅನಿಲ ಖೇಣಿ, ಇತರೆ ಇಂಜಿನಿಯರ್‌ಗಳಾದ ಸೋಮಶೇಖರ ಪಾಟೀಲ, ಸತೀಶ ನೌಬಾದೆ ಪತ್ರಿಕಾಗೋಷ್ಠಿಯಲ್ಲಿದ್ದರು.

# ಯುವನಿಧಿ: ಪ್ರತಿ ತಿಂಗಳು ಸ್ವಯಂ ಘೋಷಣೆ ಕಡ್ಡಾಯ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಜುಲೈ.16–ಕರ್ನಾನಟಕ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಯವನಿಧಿ ಯೋಜನೆಯಲ್ಲಿ ನೋಂದಣೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಆಧಾರ ಸೀಡೆಡ್ ಬ್ಯಾಂಕ ಖಾತೆ ಹೊಂದಿರಬೇಕು. ಸೇವಾ ಸಿಂಧೂ ವೆಬ್‌ಸೈಟ್ https;//sevasindhugs.karnataka.gov.inನಲ್ಲಿತಮ್ಮ ಅರ್ಜಿಯು ಯಾವ ಹಂತದಲ್ಲಿದೆ ಎಂಬುದನ್ನುಪರಿಶೀಲಿಸಿಕೊಂಡು ಹಾಗೂ ಪರಿಶೀಲನೆಗೆ ಬಾಕಿ ಉಳಿದಿರುವ ಅಭ್ಯರ್ಥಿಗಳು ಮಾತ್ರ ಸೂಚಿಸಲ್ಪಟ ಇಲಾಖೆಯ ಕಛೇರಿಗಳಿಗೆ ತಮ್ಮ ಮೂಲ ಅಂಕಪಟ್ಟಿ ಹಾಗೂ ಇತರೆ ಪ್ರಮಾಣ ಪತ್ರಗಳೊಂದಿಗೆ ಖುದ್ದಾಗಿ ಭೇಟಿ ನೀಡಿ, ಪರಿಶೀಲಿಸಿ ಶೀಘ್ರವಾಗಿ ದೃಢೀಕರಿಸಿಕೊಳ್ಳುವಂತೆ ಸೂಚಿಸಲಾಗಿದೆ.

ಹಾಗೂ ಈಗಾಗಲೇ ನೋಂದಾಯಿಸಿಕೊಂಡ ಹಣ ಪಡೆಯುತ್ತಿರುವ ಫಲಾನುಭವಿಗಳು ಪ್ರತಿ ಮೂರು ತಿಂಗಳಿಗೊಮ್ಮೆ 25ನೇ ತಾರೀಕಿನೊಳಗೆ ಸ್ವಯಂ–ಘೋಷಣೆಯನ್ನು ಮಾಡಿಕೊಳ್ಳಬೇಕಾಗಿರುತ್ತದೆ. ಜೂನ್, ಜುಲೈ, ಆಗಸ್ಟ್, ತಿಂಗಳಿನ 25ನೇ ದಿನಾಂಕದೊಳಗೆ ಸ್ವಯಂ–ಘೋಷಣೆಯನ್ನು ಮಾಡಿಕೊಳ್ಳಬೇಕೆಂದು ಬೀದರ ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಆವರಣ, ಕುಂಬಾರವಾಡಾ ಕ್ರಾಸ, ಮನ್ನಳ್ಳಿ ರೋಡ, ಬೀದರ ಅಥವಾ ಮೊಬೈಲ್ ಸಂಖ್ಯೆ: 9901563260, 8867200358 ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಭಾವಸಾರ ಕ್ಷತ್ರಿಯ ಸಮಾಜ ವತಿಯಿಂದ ಆಷಾಢ ಮಾಸ; ದೇವಿಗೆ ವಿಶೇಷ ಪೂಜೆ




ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್:ಆಷಾಢಮಾಸದ ಪವಿತ್ರಸಂದರ್ಭವನ್ನುಗುರುಮಠಕಲ್ ಪಟ್ಟಣದ ಭಾವಸಾರ ಕ್ಷತ್ರಿಯ ಸಮಾಜದವರು ಭಕ್ತಿಭಾವದಿಂದ ಹಾಗೂ ಸಂಭ್ರಮದೊಂದಿಗೆ ಆಚರಿಸಿದರು. ಈ ಸಂದರ್ಭದಲ್ಲಿ ಭಾವಾನಿ ಮಾತೆಗೆ ವಿಶೇಷ ಪೂಜೆ ಸಲ್ಲಿಸಲಾಯಿತು.

ಧಾರ್ಮಿಕ ವಿಧಿವಿಧಾನಗಳೊಂದಿಗೆ ಪ್ರಾರಂಭವಾದ ಕಾರ್ಯಕ್ರಮದಲ್ಲಿ ಸಮಾಜದ ಹಿರಿಯರು ಹಾಗೂ ಯುವಕರು ಸಮಾನವಾಗಿ ಭಾಗವಹಿಸಿದರು. ಮಹಿಳಾ ಸದಸ್ಯರ ಸಕ್ರಿಯ ಪಾಲ್ಗೊಳ್ಳುವಿಕೆ ಹಾಗೂ ಭಕ್ತಿಭಾವದ ಅಲಂಕಾರ, ದೇವಿಯ ಮಂಟಪದ ವಿನ್ಯಾಸ ಎಲ್ಲರ ಗಮನ ಸೆಳೆದವು.

ಪಟ್ಟಣದ ಭಾವಸಾರ ಕ್ಷತ್ರಿಯ ಸಮಾಜ ಭವನ ಆವರಣದಲ್ಲಿ ಭಾವಸಾರ ಕ್ಷತ್ರಿಯ ಸಮಾಜ ಬಾಂಧವರು ರವಿವಾರ ಆಷಾಡ ಮಾಸದ ಸಾಮೂಹಿಕ ಭೋಜನ ಏರ್ಪಡಿಸಿದ್ದರು. ಮೊದಲಿಗೆ ಭಾವಸಾರ ಕ್ಷತ್ರಿಯ ಸಮಾಜದ ಮುಖಂಡತ ನೇತೃತ್ವದಲ್ಲಿ ಭವಾನಿ ಮಾತೆಗೆ ಪೂಜೆ ಪುನಸ್ಕಾರ, ನೈವೇದ್ಯ ಸಮರ್ಪಣೆಗಳು ನಡೆದವು.

ಸಮಾಜದಲ್ಲಿ ಸಂಬಂಧಗಳು ಗಟ್ಟಿಯಾಗಿ ನೆಲಯೂರಿದಾಗ ಮಾತ್ರ ಒಗ್ಗಟ್ಟು ಪ್ರದರ್ಶನ ತೋರಲು ಸಾಧ್ಯ. ನಮ್ಮ ದೇಶದ ಸಂಸ್ಕೃತಿಯಲ್ಲಿ ಅನೇಕ ಹಬ್ಬ ಹರಿದಿನಗಳ ಅಚರಣೆಗಳು ವಿಶೇಷತೆ ಹೊಂದಿದ್ದು, ಅವುಗಳ ಅಚರಣೆಯಿಂದ ಸಮಾಜದಲ್ಲಿ ಸಾಮರಸ್ಯ ಐಕ್ಯತೆ ಮೂಡಿಸುತ್ತದೆ ಎನ್ನುವ ದಿಸೆಯಲ್ಲಿ ಆಷಾಡ ಮಾಸದ ಅಂಗವಾಗಿ ಇಲ್ಲಿನ ಸಮಾಜ ಕ್ಷತ್ರಿಯ ಸಮಾಜದ ಬಾಂಧವರು ವಿಶೇಷ ಸಮಾರಂಭವನ್ನು ಹಮ್ಮಿಕೊಂಡಿದ್ದರು.

ಸಮಾಜದಲ್ಲಿ ಒಗ್ಗಟ್ಟು ಬೆಳಸಲು ಇಲ್ಲಿನ ಭಾವಸಾರ ಕ್ಷತ್ರಿಯ ಸಮಾಜ ಬಾಂಧವರು ಹಿಂದಿನಿಂದಲೂ ಆಷಾಢ ಮಾಸದಲ್ಲಿ ಒಂದೆಡೆ ಕುಳಿತು ಸಾಮೂಹಿಕವಾಗಿ ಊಟ ಸವಿಯುವ ಆಚರಣೆ ಮಾಡಿಕೊಂಡು ಬರುವ ರೂಢಿಯನ್ನು ನಡೆಸಿಕೊಂಡು ಬಂದಿದ್ದಾರೆ. ಆಷಾಢ ತಿಂಗಳಲ್ಲಿ ಎಲ್ಲೆಡೆ ಗಾಳಿ ಹೆಚ್ಚಾಗಿ ಬೀಸುತ್ತಿದ್ದು ಈ ಗಾಳಿ, ಮಳೆಯಿಂದ ರೈತರ ಬೆಳೆ, ಫಸಲು ಹಾಳಾಗಬಾರದು, ರೈತನ ಬದುಕು ಚೆನ್ನಾಗಿದ್ದರೆ ಎಲ್ಲರೂ ಚೆನ್ನಾಗಿರುತ್ತಾರೆ, ಗಾಳಿ ನಿಯಂತ್ರಣಕ್ಕೆ ನಮ್ಮ ಜನಾಂಗದವರು ಈ ಸಂದರ್ಭದಲ್ಲಿ ದೇವರಿಗೆ ಮೊರೆ ಹೋಗುತ್ತಾರೆ ಎಂದು ಭಾವಸಾರ ಕ್ಷತ್ರಿಯ ನೂತನ ಅಧ್ಯಕ್ಷ ಹನುಮಂತರಾವ್ ಢಗೆ ಹೇಳಿದರು.

ದರ್ಜೆ, ದಲ್ಲಾಳಿ, ಬಟ್ಟೆ ಅಂಗಡಿ, ಕೃಷಿ ಇತರೆ ಕಾರ್ಯಕ್ರಮದಲ್ಲಿ ತೊಡಗಿಸಿ ಕೊಂಡಿರುವ ಈ ಸಮುದಾಯದವರಿಗೆ ರೈತಾಪಿ ವರ್ಗದವರೆ ಆಸರೆ, ರೈತ ನಕ್ಕರೆ ಜಗವೆಲ್ಲ ನಗುತ್ತದೆ, ರೈತನ ಬದುಕು ಹಸನಾಗಬೇಕಾದರೆ ಆತ ಬೆಳೆದ ಬೆಳೆಗೆ ಅತಿ ಹೆಚ್ಚಿನ ಮಳೆಯಿಂದ ರೋಗ ರುಜಿನಗಳು ತಗುಲಬಾರದು. ಗಾಳಿಯ ಕಾಟ, ಪ್ರವಾಹ ಭೀತಿ ಇರಬಾರದು ಎಂಬ ಕಾರಣಕ್ಕೆ ಮೊದಲಿಗೆ ಭವಾನಿ ಮಾತ ಪೂಜೆ ಸಲ್ಲಿಸಿ ನಂತರ ದೇವಿಗೆ ನೈವೇದ್ಯ ಮಾಡಲಾಯಿತು. ಸಮಾಜದವರು ಗುಗ್ಗರಿ, ಖರೀದ ಪದಾರ್ಥಗಳನ್ನು ಬುಟ್ಟಿಯಲ್ಲಿ ಮಿಶ್ರಣ ಮಾಡಿ ಎಲ್ಲಾರಿಗೂ ಹಂಚಿ ಸಮಾನತೆ ಸಾರಲಾಯಿತು. ಮಹಿಳೆಯರು ಆರುತಿ ಬೆಳಗಿ ಧಾರ್ಮಿಕ ಕಾರ್ಯಕ್ರಮ ಮುಗಿದ ನಂತರ ಊಟ ಸವಿಯನ್ನು ಸೇವಿಸಿದರೆ.

ಪೂಜೆಯ ನಂತರ ನಡೆದ ಸಮೂಹಿಕ ಭೋಜನ ಕಾರ್ಯಕ್ರಮದಲ್ಲಿ ನೂರಾರು ಸಮಾಜಬಾಂಧವರು ಭಾಗವಹಿಸಿ ಆಧ್ಯಾತ್ಮಿಕ ತೃಪ್ತಿಯ ಜೊತೆಗೆ ಸಾಮೂಹಿಕ ಏಕತೆಯ ಅನುಭವವನ್ನು ಹಂಚಿಕೊಂಡರು.

ಸಮಾಜದ ಮುಖಂಡರು ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಿದ ಎಲ್ಲಾ ಸದಸ್ಯರಿಗೆ ಕೃತಜ್ಞತೆ ಸಲ್ಲಿಸಿದರು ಹಾಗೂ ಈ ಆಚರಣೆ ಮುಂದಿನ ವರ್ಷಗಳಲ್ಲೂ ಇನ್ನಷ್ಟು ಭಕ್ತಿ ಮತ್ತು ಭರವಸೆಯಿಂದ ನಡೆಯಲಿ ಎಂದು ಆಶಯಪಟ್ಟರು.

ಈ ಸಂದರ್ಭದಲ್ಲಿ ಭಾವಸಾರ ಕ್ಷತ್ರಿಯ ಹಿರಿಯ ಮುಖಂಡರು, ಯುವಕರು, ಮಹಿಳೆಯರು ಸೇರಿದಂತೆ ಸಮಾಜಬಾಂಧವರು ಇತರರು ಇದ್ದರೂ.

# ನಾಯಿಗಳಿಗೆ ತಪ್ಪದೆ ಲಸಿಕೆ ಹಾಕಿಸಿ: ಡಾ. ಕುಲಕರ್ಣಿ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ರಾಷ್ಟ್ರೀಯ ಸೇವಾ ಯೋಜನೆ ಘಟಕದ ಅಡ್ಡಿಯಲ್ಲಿ ಹಾಗೂ (ಡಬ್ಲ್ಯೂ ಎಚ್‌ಓ ಭಾರತ ಸರ್ಕಾರ ಆರೋಗ್ಯ ಇಲಾಖೆ ಅಡ್ಡಿಯಲ್ಲಿ ತಾಲೂಕಿನ ನಿರ್ಣಾ ಗ್ರಾಮದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳಿಗೆ ಪಶು ಪಾಲನಾ ಇಲಾಖೆಯಿಂದ ಬುಧವಾರ ಪಶು ವೈದ್ಯಾಧಿಕಾರಿ ಡಾ. ಸಮುದ್ರ ಕುಲಕರ್ಣಿ ಅವರು, ನಾಯಿಗಳಲ್ಲಿ ಹುಚ್ಚುರೋಗ ತಡೆಗಟ್ಟಲು ಪ್ರತಿಬಂಧಕ ಲಸಿಕೆ ಹಾಕಿಸುವ ಕುರಿತು ಜಾಗೃತಿ ಮೂಡಿಸಿದರು. ಈ ವೇಳೆ ಮಾತನಾಡಿದ ಅವರು, ಸಾಕು ನಾಯಿಗಳಿಗೆ ಹುಚ್ಚುನಾಯಿ ಕಚಿ–ದಾಗ ರೋಗ ಎಡತಾಕದಂತೆ ಮುಂಜಾಗ್ರತಾ ಕ್ರಮವಾಗಿ ರೋಗ ನಿರೋಧಕ ಲಸಿಕೆ ನೀಡಲಾಗುತ್ತದೆ. ಮಾಲೀಕರು ತಪ್ಪದೆ ತಮ್ಮ ಸಾಕು ನಾಯಿಗಳಿಗೆ ಲಸಿಕೆ ಹಾಕಿಸಬೇಕು. ಲಸಿಕೆ ಪಡೆದುಕೊಂಡಿರುವ ನಾಯಿ ಮನುಷ್ಯರಿಗೆ ಕಚ್ಚಿದರೂ ತಕ್ಷಣ ರೋಗ ನಿರೋಧಕ ಲಸಿಕೆಯನ್ನು ಆಸ್ಪತ್ರೆಯಲ್ಲಿ ಪಡೆದುಕೊಳ್ಳಬೇಕು ಎಂದರು. ರೋಗ ಮಾರಕವಾಗಿದ್ದು, ಅದು ಉಲ್ಬಣವಾದರೆ ಸಾವು ಖಚಿತ. ಇಲಾಖೆಯಿಂದ ನಾಯಿಗಳಿಗೆ ಉಚಿತವಾಗಿ ಲಸಿಕೆ ಹಾಕಲಾಗುತ್ತದೆ ಎಂದು ತಿಳಿಸಿದರು. ವಿದ್ಯಾರ್ಥಿಗಳು ತಮ್ಮ ಸಾಕು ನಾಯಿಗಳೊಂದಿಗೆ ಆಟವಾಡುವುದು, ಕೈ ತೊಳೆಯದೆ ಊಟ ಮಾಡಬಾರದು. ನಾಯಿ ಜೊಲ್ಲಿನಲ್ಲೂ ಸೋಂಕು ಹರಡುವ ಸಾಧ್ಯತೆ ಇರುತ್ತವೆ. ಕೆಲವರು, ನಾಯಿ ಎತ್ತಿ ಮುದ್ದಾಡುವಾಗ ಅದರ ಕೂದಲು ಬಟ್ಟೆಗಳಿಗೆ ಅಂಟಿಕೊಂಡು, ಆಹಾರ ಸೇವನೆ ವೇಳೆ ದೇಹ ಸೇರಿ ಕಾಯಿಲೆ ತರುತ್ತದೆ. ಈ ಬಗ್ಗೆ ವಿದ್ಯಾರ್ಥಿಗಳು ಎಚ್ಚರಿಕೆಯಿಂದ ಇರಬೇಕು ಎಂದು ತಿಳಿಸಿದರು. ಬೀದಿನಾಯಿಗಳಿಗೆ ರೇಬೀಸ್ ತಡೆ ಲಸಿಕೆ ಹಾಕುವುದು ಅಸಾಧ್ಯವಾಗಿರುವ ಕಾರಣ, ಅವು ಕಚ್ಚಿದರೆ, ರೋಗವು ಗಂಭೀರ ಸ್ವರೂಪವಾಗಿರುತ್ತದೆ. ರಸ್ತೆಗಳಲ್ಲಿ ಹೋಗುವಾಗ ಮಲಗಿರುವ ನಾಯಿಗಳಿಗೆ ಕಲ್ಲು ಹೊಡೆಯುವುದು, ಅವುಗಳನ್ನು ರೇಗಿಸುವುದನ್ನು ಮಾಡಬಾರದು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಕಾಲೇಜಿನ ಪ್ರಾಂಶುಪಾಲ ಶಿವರಾಜ್ ಬಿರಾದಾರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ರಾಷ್ಟ್ರೀಯ ಸೇವೆ ಯೋಜನಾಧಿಕಾರಿ ಸಂತೋಷ ಕೆ. ನಿರೂಪಿಸಿ ವಂದಿಸಿದರು. ಈ ಸಂದರ್ಭದಲ್ಲಿ ಕಾಲೇಜಿನ ಉಪನ್ಯಾಸರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಬಸವಣ್ಣನವರು ನಡೆಸಿದ ಆಡಳಿತ ಮತ್ತು ತತ್ವ ಸಿದ್ಧಾಂತದ ಕುರಿತು

# ಸಂಶೋಧನೆ ಮಾಡಲು ಸೂಚಿಸಿರುವುದರಿಂದ ಅನೇಕರ ಅಭಿನಂದನೆಗಳು.




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜು 16 ಭಾರತ ಸರ್ಕಾರದ ಶಿಕ್ಷಣ ಮಂತ್ರಿಗಳಾದ ಧರ್ಮೇಂದ್ರ ಪ್ರಧಾನ್ ಅವರು ಎಐಸಿಟಿಇಗೆ ಮಾಡಿದ ಮಾರ್ಗದರ್ಶನದಂತೆ ಅಮಿತ್ ದತ್ತಾ ಅವರು ಕೆಲವು ಡಿಮ್ಡ್ ವಿಶ್ವವಿದ್ಯಾಲಯಗಳಿಂದ ಮತ್ತುತಾಂ ತ್ರಿಕ ಶಿಕ್ಷಣ ಮಹಾವಿದ್ಯಾಲಯಗಳಿಗೆ ಅನುಭವ ಮಂಟಪದ ಮೂಲಕ ಬಸವಣ್ಣನವರ ನಡೆಸಿದ ಆಡಳಿತ ಮತ್ತು ತತ್ವ ಸಿದ್ಧಾಂತದ ಕುರಿತು ಸಂಶೋಧನೆ ಮಾಡಲು ಸೂಚಿಸಿರುವುದು ಅನೇಕ ಬಸವಾಭಿಮಾನಿಗಳಿಗೆ ಸಂತೋಷ ಹಾಗೂ ಹೆಮ್ಮೆಯ ವಿಷಯ ಆದರಿಂದ ಈ ಮೂಲಕ ಕೇಂದ್ರ ಶಿಕ್ಷಣ ಸಚಿವರಿಗು ಹಾಗೂ ತಾಂತ್ರಿಕ ಶಿಕ್ಷಣದ ನಿರ್ದೇಶಕರಿಗು ನಮ್ಮೆಲ್ಲರ ವತಿಯಿಂದ ಅಭಿನಂದನೆಗಳು ಸಲ್ಲಿಸುತ್ತೇವೆಂದು ಬಸವೇಶ್ವರ ದೇವಸ್ಥಾನ ಪಂಚ ಕಮಿಟಿಯ ಅಧ್ಯಕ್ಷರಾದ ಬಸವರಾಜ ಕೊರಕೆ. ಉಪಾಧ್ಯಕ್ಷರಾದ ಮಲ್ಲಿಕಾರ್ಜುನ ಚಿರಡೆ. ಖಜಾಂಚಿಗಳಾದ ರಾಜಕುಮಾರ ಹೊಳಕುಂದೆ. ಸಹಕಾರ್ಯದರ್ಶಿ ವಿವೇಕಾನಂದ ಹೊದಲೂರೆ. ನಿರ್ದೇಶಕರಾದ ಕಾಶಪ್ಪ ಸಕ್ಕರಬಾವಿ. ಜಗನ್ನಾಥ ಖೂಬಾ. ವಿಶ್ವಸ್ಥ ಸಮಿತಿಯ ಉಪಾಧ್ಯಕ್ಷರಾದ ಡಾ. ಜಿ. ಎಸ್. ಭುರಳೆ. ಕಾರ್ಯದರ್ಶಿ ನಾಗಯ್ಯಾ ಸ್ವಾಮಿ. ವಿಶ್ವಸ್ಥ ಮಲ್ಲಿನಾಥ ಮಂಠಾಳೆ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಕನ್ನಡ ಸೇನೆಯ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆಯಾಗಿ ಸಾಕ್ಷಿ ಹಿರೇಮಠ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಪಟ್ಟಣದಲ್ಲಿ ಬುಧವಾರ ಕನ್ನಡ ಸೇನೆ ಕರ್ನಾಟಕ ಸಂಘಟನೆಯ ಸಭೆಯಲ್ಲಿ ಕನ್ನಡ ಸೇನೆ ಕರ್ನಾಟಕ ಸಂಘಟನೆಗೆ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆಯಾಗಿ ಸಾಕ್ಷಿ ಆರ್. ಹಿರೇಮಠ ಇವರನ್ನು ನೇಮಕ ಮಾಡಲಾಗಿದೆ ಎಂದು ಕನ್ನಡ ಸೇನೆ ಕರ್ನಾಟಕ ಸಂಘಟನೆಯ ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಸುಭಾಷ ಕೆನಡೆ, ತಾಲೂಕಾಧ್ಯಕ್ಷ ಪವನ್ ಪೂಜಾರಿ ಉಪಸ್ಥಿತರಿದ್ದರು.

ಅಂಚೆ ವಿಭಾಗೀಯ ಶ್ರೇಷ್ಠತಾ ಪುರಸ್ಕಾರ ಸಮಾರಂಭ:

# ಜನಸಾಮಾನ್ಯರಲ್ಲಿ ಉಳಿತಾಯದ ಮನೋಭಾನ ಹೆಚ್ಚಿಸಿ–ಸುಶೀಲ ಕುಮಾರ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.16–ಅಂಚೆ ಕಛೇರಿಗಳು ಜನ ಸಾಮಾನ್ಯರಿಗೆ ಸಣ್ಣ ಉಳಿತಾಯದ ಮಹತ್ವಗಳನ್ನು ತಿಳಿಸಿ ಅವರಲ್ಲಿ ಉಳಿತಾಯ ಮನೋಭಾವವನ್ನು ಹೆಚ್ಚಿಸಬೇಕು ಎಂದು ಅಂಚೆ ಇಲಾಖೆಯ ಉತ್ತರ ಕರ್ನಾಟಕ ವಲಯದ ಪೋಸ್ಟ್ ಮಾಸ್ಟರ್ ಜನರಲ್ ಕರ್ನಲ್ ಸುಶೀಲ್ ಕುಮಾರ ಹೇಳಿದರು.

ಮಂಗಳವಾರ ಕಲಬುರಗಿ ನಗರದ ಕನ್ನಡ ಭವನದಲ್ಲಿ ಕಲಬುರಗಿ ವಿಭಾಗದ ಅಂಚೆ ಅಧೀಕ್ಷಕರ ಕಚೇರಿಯಿಂದ ಆಯೋಜಿಸಿದ 2024–25ನೇ ಸಾಲಿನ ಅಂಚೆ ವಿಭಾಗೀಯ ಶ್ರೇಷ್ಠತಾ ಪುರಸ್ಕಾರ ಪ್ರದಾನ ಸಮಾರಂಭ ಕಾರ್ಯಕ್ರಮ ಉದ್ಘಾಟಿಸಿದಲ್ಲದೆ ಅಂಚೆ ಸಿಬ್ಬಂದಿಗಳಿಗೆ ಶ್ರೇಷ್ಠತಾ ಪುರಸ್ಕಾರ ಪ್ರದಾನ ಮಾಡಿ ಮಾತನಾಡಿದರು.

ಅಧುನಿಕ ಜಗತ್ತಿಗೆ ಹೊಂದಿಕೊಂಡು ಜನಸಮಾನ್ಯರ ಅನುಕೂಲವಾಗುವ ರೀತಿಯಲ್ಲಿ ಅಂಚೆ ಇಲಾಖೆಯು ಕಾರ್ಯನಿರ್ವಹಿಸಬೇಕಿದೆ. ಹೀಗಾಗಿ ಅಂಚೆ ಕಚೇರಿಗಳು ಎಲ್ಲಾ ಸೇವೆಗಳನ್ನು ಒದಗಿಸುವ ಏಕೀಕೃತ ಕೇಂದ್ರವಾಗಬೇಕಿದೆ ಎಂದ ಅಭಿಪ್ರಾಯಪಟ್ಟ ಅವರು, ಅಂಚೆ ಸಿಬ್ಬಂದಿಗಳು ಸಹ ಉತ್ತಮ ಜೀವನ ಶೈಲಿ ಅಳವಡಿಸಿಕೊಂಡು ಆರೋಗ್ಯ ಕಡೆ ಹೆಚ್ಚಿನ ಗಮನ ಹರಿಸಬೇಕು ಎಂದರು.

ಕಾರ್ಯಕ್ರಮ ಅಧ್ಯಕ್ಷತೆ ವಹಿಸಿದ್ದ ಕಲಬುರಗಿ ವಿಭಾಗದ ಅಂಚೆ ಅಧೀಕ್ಷಕ ಆರ್. ಅಶೋಕ ಮಾತನಾಡಿ, ಸಣ್ಣ–ಸಣ್ಣ ಧನಾತ್ಮಕ ಬದಲಾವಣೆಗಳಿಂದ ಜನಸಾಮಾನ್ಯರಿಗೆ ಉತ್ತಮ ಸೇವೆಗಳನ್ನು ಒದಗಿಸಲು ಸಾಧ್ಯ. ಇಂದು ವಿತರಿಸಿದ ಪ್ರಶಸ್ತಿ ಪತ್ರ ಹಾಗೂ ನೆನಪಿನ ಕಾಣಿಕೆಗಳು ಸಿಬ್ಬಂದಿಯವರಲ್ಲಿ ಸ್ಪರ್ಧಾತ್ಮಕ ಮನೋಭಾವ ಬೆಳೆಸಲಿದೆ. ಇಲಾಖೆಯ ಉನ್ನತಿಗಾಗಿ ಎಲ್ಲರೂ ಸಮನ್ವಯತೆಯಿಂದ ಶ್ರಮಿಸಬೇಕು ಎಂದು ಕರೆ ನೀಡಿದರು.

ಸ್ಥಾನಿಕ ಸಹಾಯಕ ಅಂಚೆ ಅಧೀಕ್ಷಕ ಆರ್.ಕೆ. ಉಮರಾಣೆ ಅವರು ಪ್ರಾಸ್ತವಿಕ ಮಾತನಾಡಿದರು. ಇದೇ ಸಂದರ್ಭದಲ್ಲಿ ಅಂಚೆ ಇಲಾಖೆಯ ವಿವಿಧ ಸೇವೆ ಒದಗಿಸುವಲ್ಲಿ ಗಮನಾರ್ಹ ಸಾಧನೆ ಮಾಡಿದ ಕಲಬುರಗಿ ಜಿಲ್ಲೆಯ 52 ಜನ ಅಂಚೆ ಸಿಬ್ಬಂದಿಗಳಿಗೆ ಶ್ರೇಷ್ಠತಾ ಪುರಸ್ಕಾರ ಪ್ರದಾನ ಮಾಡಲಾಯಿತು

ಕಾರ್ಯಕ್ರಮದಲ್ಲಿ ಐ.ಪಿ.ಪಿ.ಬಿ ಸೀನಿಯರ್ ಮ್ಯಾನೇಜರ್ ಪ್ರಕಾಶ್ ನಾಯಕ್, ಸಹಾಯಕ ಅಂಚೆ ಅಧೀಕ್ಷಕ ಎಂ.ಎಲ್.ಭಾಗವಾನ್, ಅಂಚೆ ನಿರೀಕ್ಷಕರಾದ ಮಲ್ಲಿಕಾರ್ಜುನ ಕಲಶೆಟ್ಟಿ, ವಿಜಯಕುಮಾರ್, ಶಿವಾನಂದ ಬಡಗಿ, ಅಂಚೆ ಪಾಲಕರಾದ ಶಾಂತಕುಮಾರ ವಾಗಾ, ವಿದ್ಯಾಧರ ಗೋಟೂರ, ನಬಿಸಾಬ್, ಅಂಚೆ ಚೀಟಿ ಸಂಗ್ರಹಕಾರರ ಸುಶಾಂತ ಭಟ್ ಸೇರಿದಂತೆ ಅಂಚೆ ಇಲಾಖೆಯ ಇತರೆ ಅಧಿಕಾರಿಗಳ, ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು. ಶಹಾಬಾದ ಅಂಚೆ ನೀರಿಕ್ಷಕ ನವೀನ್ ಸಿಂಗ್ ಸ್ವಾಗತಿಸಿದರು. ಕಾಳಗಿ ಅಂಚೆ ನೀರಿಕ್ಷಕ ಸುರೇಶ ಅಂಚೆ ವಂದಿಸಿದರು. ಅಶ್ವಿನಿ ಹಾಗೂ ಚಂದ್ರಕಾಂತ ಸಾಲೋಟಗಿ ನಿರೂಪಿಸಿದರು.

# ಎಸ್.ಸಿ–ಎಸ್.ಟಿ ದೌರ್ಜನ್ಯ ಮೇಲುಸ್ತುವಾರಿ ಸಮಿತಿ ಸಭೆ:

# ದೌರ್ಜನ್ಯ ಪ್ರಕರಣದಲ್ಲಿ ವಿಳಂಬವಿಲ್ಲದೆ ಪರಿಹಾರ ನೀಡಬೇಕು:ಬಿ.ಫೌಜಿಯಾ ತರನ್ನುಮ್



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜುಲೈ.16– ಪರಿಶಿಷ್ಟ ಜಾತಿ–ಪರಿಶಿಷ್ಟ ಪಂಗಡ ದೌರ್ಜನ್ಯ ಪ್ರಕರಣದಲ್ಲಿ ಕುಟುಂಬದ ಅವಲಂಬಿತ ಸದಸ್ಯರಿಗೆ ವಿಳಂಬ ಮಾಡದೆ ತ್ವರಿತಗತಿಯಲ್ಲಿ ಪರಿಹಾರ ಒದಗಿಸಬೇಕು ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಸೂಚಿಸಿದರು. ಬುಧುವಾರ ಇಲ್ಲಿನ ಡಿ.ಸಿ.ಕಚೇರಿ ಸಭಾಂಗಣದಲ್ಲಿ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ (ದೌರ್ಜನ್ಯ ನಿಯಂತ್ರಣ) ನಿಯಮಗಳು–1995 ರನ್ವಯ ಜಿಲ್ಲಾ ಜಾಗೃತ ಮತ್ತು ಮೇಲುಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ದೌರ್ಜನ್ಯ ಪ್ರಕರಣಗಳ ಕುರಿತು ಪರಿಶೀಲನೆ ನಡೆಸಿ ಮಾತನಾಡಿದರು. ಪ್ರಕರಣದಲ್ಲಿ ಉದ್ಯೋಗಕ್ಕೆ ಬಾಕಿ ಇರುವ ಕಡತಗಳನ್ನು ಒಂದು ವಾರದಲ್ಲಿ ಪ್ರಸ್ತಾವನೆ ಸಲ್ಲಿಸಬೇಕು. ಪ್ರಸಕ್ತ ಸಾಲಿನಲ್ಲಿ ಪರಿಹಾರಕ್ಕೆ ಅನುದಾನ ಅವಶ್ಯಕತೆ ಇದ್ದಲ್ಲಿ ತಮಗೆ ತಿಳಿಸಿದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಜೊತೆ ಮಾತನಾಡಿ ಅನುದಾನ ತರಿಸಿಕೊಳ್ಳಿ ಎಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಪ್ರೀತಿ ಅವರಿಗೆ ಡಿ.ಸಿ. ಸೂಚಿಸಿದರು.

ಕಮಲಾಪೂರ ತಾಲ್ಲೂಕಿನ ಸ್ವಂತ ಗ್ರಾಮದ ಸರ್ವೆ ನಂ. 323 ಭೋವಿ ಜನಾಂಗದವರು ವಾಸಿಸುವ ಜಮೀನಿನ ಸರ್ವೆ ಕುರಿತು ಕಮಲಾಪೂರ ತಹಶೀಲ್ದಾರರಿಂದ ಜಿಲ್ಲಾಧಿಕಾರಿಗಳು ಮಾಹಿತಿ ಪಡೆದುಕೊಂಡರು ಇದಕ್ಕೆ ಪ್ರತಿಕ್ರಿಯಿಸಿದ ಕಮಲಾಪೂರ ತಹಶೀಲ್ದಾರ ಭೂವಿ ಜನಾಂಗದವರು ತಮ್ಮ ಮನೆಗಳು ವಾಸಿಸಲು ಯಾವುದೇ ತೊಂದರೆ ನೀಡುತ್ತಿಲ್ಲ ಸದರಿ ಮನೆಗಳನ್ನು ಸಕ್ರಮಗೊಳಿಸಲು ಸರ್ಕಾರ 94 ಸಿ ಅಡಿಯಲ್ಲಿ ಅರ್ಜಿ ಸಲ್ಲಿಸಲು ಕಾಲಾವಕಾಶ ನೀಡಿ ಭೂವಿ ಜನಾಂಗದವರಿಂದ ಅರ್ಜಿಯನ್ನು ಪಡೆದು ಸಕ್ರಮಗೊಳಿಸಲು ಕ್ರಮಕೈಗೊಳ್ಳಲಾಗುವುದು ಎಂದು. ಕಮಲಾಪೂರ ತಹಶೀಲ್ದಾರ ಮಹ್ಮದ್ ಮೊಸಿನ್ ಸಭೆಯ ಗಮನಕ್ಕೆ ತಂದರು. 07 ದಿನಗಳ ಒಳಗಾಗಿ ಈ ಸಂಬಂಧ ಸೂಕ್ತ ಕ್ರಮವಹಿಸಲು ಜಿಲ್ಲಾಧಿಕಾರಿಯವರು ಕಮಲಾಪುರ ತಹಶೀಲ್ದಾರರವರಿಗೆ ಸೂಚಿಸಿದರು. ಮತ್ತು ಸಾರ್ವಜನಿಕರು ಸಮಿತಿ ಸದಸ್ಯರನ್ನು ಸಮಾಜ ಕಲ್ಯಾಣ ಇಲಾಖೆ. ಎಲ್ಲ ನಿಗಮಗಳ ಜಿಲ್ಲಾ ವ್ಯವಸ್ಥಾಪಕರನ್ನು ಆಹ್ವಾನಿಸಿ ಜಿಲ್ಲಾಮಟ್ಟದ ಕಾರ್ಯಕ್ರಮವನ್ನು ಮಾಡಬೇಕೆಂದು ಹೇಳಿದರು.

ಸಮಿತಿ ಸದಸ್ಯ ಚನ್ನಪ್ಪ ಸುರಪೂರಕರ ಅವರು ಮಾತನಾಡಿ, ಮತ್ತು ಎಸ್.ಟಿ. ಜನಾಂಗದವರೆಗೆ ಎಸ್.ಸಿ. ಮತ್ತು ಎಸ್.ಟಿ. ಜನಾಂದವರಿಗೆ ಸಿಗುವ ಸೌಲಭ್ಯಗಳು ಮತ್ತು ಅಸ್ಪಶ್ಯತೆ ನಿವಾರಣೆಗೆ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮಗಳ ನೀಡಬೇಕೆಂದರು.

ಇದಕ್ಕೆ ಪ್ರತಿಕ್ರಿಯಿಸಿದ ಜಂಟಿ ನಿರ್ದೇಶಕರು ಅಪರ ಜಿಲ್ಲಾಧಿಕಾರಿ ನೇತೃತ್ವದಲ್ಲಿ ಹತ್ತು ಸಂಘ ಸಂಸ್ಥೆಗಳು ಆಯ್ಕೆ ಮಾಡಲಾಗುತ್ತದೆ. ಈಗಾಗಲೇ ಜಿಲ್ಲೆಯಲ್ಲಿ ತಾಲೂಕು ಮತ್ತು ಹೊಬಳ್ಳಿ ಕೇಂದ್ರಗಳಲ್ಲಿ ಕಾರ್ಯಕ್ರಮ ನಡೆಸಲಾಗಿದೆ ಎಂದು ಹೇಳಿದರು.

ಜಿಲ್ಲಾಧಿಕಾರಿಗಳು ಮಾತನಾಡಿ, ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳ ಕುರಿತು ಅನುಸೂಚಿತ ಜಾತಿ ಅನುಸೂಚಿತ ಪಂಗಡ ಅಡಿಯಲ್ಲಿ ದಾಖಲಾದ್ದ ಪ್ರಕರಣಗಳು ನೀಡಿದ ಪರಿಹಾರ ಕುರಿತು ಮಾಹಿತಿ ಪಡೆದುಕೊಂಡರು.

ಈ ಕಾಯ್ದಿ ಅಡಿಯಲ್ಲಿ ಜಿಲ್ಲೆಯಲ್ಲಿ ಒಟ್ಟು 253 ಪ್ರಕರಣಗಳು ದಾಖಲಾಗಿದ್ದು, ಒಂದು ಪ್ರಕರಣದಲ್ಲಿ ಆರೋಪಿಯ ಶಿಕ್ಷೆಯಾಗಿದ್ದು, ಒಟ್ಟು 6 ಪ್ರಕರಣಗಳು ತನಿಖಾ ಹಂತದಲ್ಲಿ ಇವೆ ಮತ್ತು ಒಟ್ಟು 7 ಪ್ರಕರಣಗಳು ವಿಲೇವಾರಿ ಮಾಡಲಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಮಾಹಿತಿ ನೀಡಿದರು.

ಕಲಬುರಗಿ ನಗರದ ಉಪವಿಭಾಗಗಳಲ್ಲಿ ತನಿಖೆಯಲ್ಲಿರುವ ಅನುಸೂಚಿತ ಜಾತಿ, ಅನುಸೂಚಿತ ಪಂಗಡ ದೌರ್ಜನ್ಯ ಪ್ರಕರಣಗಳ ಮಾಹಿತಿ ಕಲಬುರಗಿ ದಕ್ಷಿಣ ಉಪವಿಭಾಗದಲ್ಲಿ ಎರಡು ಪ್ರಕರಣಗಳು ದಾಖಲಾಗಿ ತನಿಖಾ ಹಂತದಲ್ಲಿ ಇವೆ. ಕಲಬುರಗಿ ಸಬ್ ಅರ್ಬನ್ ಉಪ ವಿಭಾಗದಲ್ಲಿ 4 ಪ್ರಕರಣ ದಾಖಲಾಗಿದ್ದು ಪ್ರಕರಣಗಳು ತನಿಖಾ ಹಂತದಲ್ಲಿವೆ ಸಂಬಂಧಪಟ್ಟ ಅಧಿಕಾರಿಗಳು ಮಾಹಿತಿ ನೀಡಿದರು.

ಜಿಲ್ಲಾಧಿಕಾರಿ ಮಾತನಾಡಿ, ಬಾಕಿ ಉಳದ ಪ್ರಕರಣಗಳಿಗೆ ಪೊಲೀಸ್ ಇಲಾಖೆಯವರು ವರದಿ ಪಡೆದು ಪರಿಹಾರ ಧನ ಮಂಜೂರಿಸುವ ಕ್ರಮಕೈಗೊಳ್ಳು ಸಭೆಯಲ್ಲಿ ಹಾಜರಿದ್ದ ಜಂಟಿ ನಿರ್ದೇಶಕಿ ಪ್ರೀತಿ ದೊಡ್ಡಮನಿ ಅವರಿಗೆ ಸೂಚನೆ ನೀಡಿದರು..

ಸಭೆಯಲ್ಲಿ ಜಿಲ್ಲಾಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ ಸಿಂಗ್ ಮೀನಾ, ಸಮಾಜ ಕಲ್ಯಾಣ ಇಲಾಖೆ, ಜಂಟಿ ನಿರ್ದೇಶಕಿ ಪ್ರೀತಿ ದೊಡ್ಡಮನಿ ಡಿಯುಡಿಸಿ. ಯೋಜನಾ ನಿರ್ದೇಶಕ ಮುನ್ನವರ ದೌಲ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಸಮದ್ ಪಟೇಲ್, ಪೋಲಿಸ್ ಇಲಾಖೆ ಅಧಿಕಾರಿಗಳು ಸಮಿತಿ ಸದಸ್ಯರು ಉಪಸ್ಥಿತರಿದ್ದರು.

# ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 16– ಇಲ್ಲಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಜಿಲ್ಲೆಯ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ನಂತರ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ 2025–26ನೇ ಸಾಲಿನಲ್ಲಿ ಹೊಸದಾಗಿ ಪ್ರವೇಶಕ್ಕೆ ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಪ್ರವರ್ಗ–1, ಎಸ್.ಸಿ &ಎಸ್.ಟಿ ಜನಾಂಗದ ವಿದ್ಯಾರ್ಥಿಗಳಿಗೆ 2.50 ಲಕ್ಷ ಹಾಗೂ ಪವರ್ಗ–2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗ ಹಾಗೂ ಇತರೆ ವರ್ಗಗದ ವಿದ್ಯಾರ್ಥಿಗಳಿಗೆ 1.00 ಲಕ್ಷರೂ.ಗಳ ಪೋಷಕರ ವಾರ್ಷಿಕ ಆದಾಯ ಮಿತಿ ಇರಬೇಕು.

ಆಸಕ್ತ ವಿದ್ಯಾರ್ಥಿಗಳು ಇಲಾಖೆಯ ವೆಬ್‌ಸೈಟ್ ವಿಳಾಸ: https://shp.karnataka.gov.in ಅನ್ನು ಸಂಪರ್ಕಿಸಿ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಬೇಕು. ಆನ್‌ಲೈನ್ ಮೂಲಕ ಅರ್ಜಿಯನ್ನು ಆಗಸ್ಟ್ 14ರೊಳಗಾಗಿ ಸಲ್ಲಿಸಬಹುದಾಗಿದೆ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆ ವೆಬ್‌ಸೈಟ್ ವಿಳಾಸ: https://bcwd.karnataka.gov.inನ್ನು ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwd.hostels@karnataka.gov.in ಇ–ಮೇಲ್ ಮುಖಾಂತರ ಅಥವಾ ಜಿಲ್ಲಾ/ ತಾಲ್ಲೂಕು ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದಾಗಿದೆ.

ಸಹಾಯವಾಣಿ ಸಂಖ್ಯೆ:8050770005 ಅಥವಾ 8050770004 ಗೆ ಸಂಪರ್ಕಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗಡಿಯಲ್ಲಿ ವಿಶೇಷ ಆರ್ಥಿಕ ವಲಯ ಸ್ಥಾಪನೆಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಜು.16:ಕರ್ನಾಟಕ ಗಡಿಭಾಗದ ಲಾತೂರ್/ ಓಸ್ಮಾನಾಬಾದ್ ಸಮೀಪ ವಿಶೇಷ ಆರ್ಥಿಕ ವಲಯ (SEZ) ಸ್ಥಾಪನೆ ಹಾಗೂ "ಮಹಾತ್ಮ ಬಸವೇಶ್ವರ" ಹೊಸ ರೈಲು ಮಾರ್ಗದ ಅನುಮೋದನೆಗಾಗಿ ದಿನಾಂಕ 15–07–2025 ರಂದು ಮಹಾರಾಷ್ಟ್ರ ವಿಧಾನ ಸಭೆಯಲ್ಲಿ ಮುಖ್ಯಮಂತ್ರಿಗಳಾದ ದೇವೇಂದ್ರ ಫಡ್ನವಿಸ್ ಅವರಿಗೆ ಜಿಲ್ಲಾ ಬಿಜೆಪಿ ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ ಅವರ ನೇತೃತ್ವದ ನಿಯೋಗದಿಂದ ಮನವಿ ಪತ್ರ ಸಲ್ಲಿಸಲಾಯಿತು.

ಮನವಿ ಪತ್ರದಲ್ಲಿ ವಿಶೇಷ ಆರ್ಥಿಕ ವಲಯ (SEZ) ಸ್ಥಾಪನೆ ಮತ್ತು ಈ ಪ್ರದೇಶದಲ್ಲಿ ಆಗಾಗ್ಗೆ ಬರಡು ಹವಾಮಾನ ಮತ್ತು ಮಳೆ ಕೊರತೆಯಿಂದಾಗಿ ಕೃಷಿಕರು ಮುಂಬೈ, ಪುಣೆ, ಬೆಂಗಳೂರು ಮತ್ತು ಹೈದರಾಬಾದ್ ಮೊದಲಾದ ನಗರಗಳಿಗೆ ಕೆಲಸದ ಹುಡುಕಾಟದಲ್ಲಿ ವಲಸೆ ಹೋಗುತ್ತಾರೆ. ಲಾತೂರ್ ಅಥವಾ ಓಸ್ಮಾನಾಬಾದ್ ಬಳಿ ಕರ್ನಾಟಕ ಗಡಿಗೆ ಸಮೀಪದ ಖಇಚ ಸ್ಥಾಪನೆಯಿಂದ ಸ್ಥಳೀಯ ಉದ್ಯೋಗ ಸೃಷ್ಟಿಯಾಗುತ್ತಿದ್ದು, ವಲಸೆ ತಗ್ಗಿಸಿ, ಪ್ರಾದೇಶಿಕ ಅಭಿವೃದ್ಧಿಗೆ impetus ನೀಡುತ್ತದೆ–ಇದು ತೆಲಂಗಾಣದ ಜಹೀರಾಬಾದ್‌ನ ರಾಷ್ಟ್ರೀಯ ಹೂಡಿಕೆ ಮತ್ತು ತಯಾರಿಕಾ ವಲಯ (NIMZ) ನಿಂದ ಕಂಡಿರುವಂತಹ ಧನಾತ್ಮಕ ಪರಿಣಾಮವನ್ನೇ ನೀಡಬಹುದು.

ಮಹಾತ್ಮ ಬಸವೇಶ್ವರ ರೈಲು ಮಾರ್ಗಕ್ಕೆ ಅನುಮೋದನೆ: ಲಾತೂರ್ ಜಂಕ್ಷನ್ ನಿಂದ ಬಸವಕಲ್ಯಾಣ ಮಾರ್ಗವಾಗಿ ನಿಲಂಗಾ ಮೂಲಕ ನಡೆಸಬೇಕೆಂಬ ಪ್ರಸ್ತಾವಿತ ರೈಲು ಮಾರ್ಗದ ಅನುಮೋದನೆಗಾಗಿ ನಿಮ್ಮ ಬೆಂಬಲವನ್ನು ನಾವು ಬೇಡಿಕೊಳ್ಳುತ್ತೇವೆ. ಈ ಬಗ್ಗೆ ಈಗಾಗಲೇ ಮಾನ್ಯ ರೈಲ್ವೆ ಸಚಿವ ವಿ. ಸೋಮಣ್ಣ ಅವರಿಗೆ ವಿನಂತಿಸಲಾಗಿದ್ದು, ಈ ರೈಲು ಮಾರ್ಗವು ಮರಾಠವಾಡಾ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶಗಳಲ್ಲಿ ಸಂಪರ್ಕ ಸುಧಾರಿಸಿ, ಅಭಿವೃದ್ಧಿಗೆ ದ್ರುತಗತಿ ನೀಡಲಿದೆ ಎಂದು ಬೀದರ ಬಿಜೆಪಿ ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಹಾರಾಷ್ಟ್ರದ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಅವರಿಗೆ ಭೇಟಿಯಾದ ನಿಯೊಗದಲ್ಲಿ ಶಾಸಕರುಗಳಾದ ಪ್ರಭು ಚವ್ಹಾಣ, ಡಾ.ಶೈಲೇಂದ್ರ ಬೆಲ್ದಾಳೆ, ಶರಣು ಸಲಗಾರ, ಡಾ. ಸಿದ್ದಲಿಂಗಪ್ಪ ಪಾಟೀಲ, ಮಹಾರಾಷ್ಟ್ರದ ಔಸ ಕ್ಷೇತ್ರದ ಶಾಸಕರಾದ ಅಭಿಮನ್ಯು ಪವಾರ ಉಪಸ್ಥಿತರಿದ್ದರು.



ಕಮಲನಗರ: ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ನಾರಿ ಶಕ್ತಿ ಯೋಜನೆಯಡಿ 500 ಕೋಟಿ ಮಹಿಳೆಯರಿಗೆ ರಾಜ್ಯ ಸಾರಿಗೆ ಸಂಸ್ಥೆ ಬಸಗಳಲ್ಲಿ ಉಚಿತ ಪ್ರಯಾಣ ಸಾಧನೆ ಪ್ರಯುಕ್ತ ಸೋಮವಾರ ಕಮಲನಗರ್ ಮಿನಿ ಬಸ್ ನಿಲ್ದಾಣದ ಮುಂಭಾಗದಲ್ಲಿ ತಾಲೂಕ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯಿಂದ ಸಂಭ್ರಮಿಸಲಾಯಿತು.

# ಇ – ಪೌತಿ ಅಭಿಯಾನ ಲಾಭ ಪಡೆದುಕೊಳ್ಳಿ:ಅಮಿತಕುಮಾರ ಕುಲಕರ್ಣಿ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜು.16:ರೈತರ ಅನೂಕೂಲಕ್ಕಾಗಿ ರಾಜ್ಯ ಸರ್ಕಾರವು ಇ – ಪೌತಿ ಅಭಿಯಾನ( ವಾರಸ್ಸುದಾರರ ಹಕ್ಕುಬದಲಾವಣೆ)ಆಂದೋಲನ ಜಾರಿಗೆ ತಂದಿದ್ದು ರೈತರು ಸದುಪಯೋಗಪಡೆದುಕೊಳ್ಳಬೇಕು. ಮರಣ ಹೊಂದಿದ ಪಟ್ಟೆದಾರರ ಹೆಸರನ್ನು ತೆಗೆದು ಅವರ ಕಾನೂನುಬದ್ಧ ವಾರಸ್ಸುದಾರರ ಹೆಸರನ್ನು ಸೇರಿಸಲು ಅವಕಾಶ ಕಲ್ಪಿಸಲಾಗಿದೆ.

ಆದ್ದರಿಂದ ಕಮಲನಗರ ತಾಲೂಕಿನ ಎಲ್ಲಾ ರೈತ ಬಾಂಧವರು ಮೃತ ಪಟ್ಟೆದಾರರ ಮರಣ ಪ್ರಮಾಣ ಪತ್ರ, ಕುಟುಂಬದ ವ್ಯಂಶ ವೃಕ್ತ ಪ್ರಮಾಣ ಪತ್ರ, ಆಧಾರ ಕಾರ್ಡ ಪಹಣಿಯೊಂದಿಗೆ ಸಂಬಂಧಿಸಿದ ಗ್ರಾಮ ಆಡಳಿತ ಅಧಿಕಾರಿಗಳನ್ನು ಸಂಪರ್ಕಿಸಬೇಕು. ಮರಣ ಹೊಂದಿದ ಪಟ್ಟೆದಾರರ ಹೆಸರು ಪಹಣಿಯಲ್ಲಿ ಮುಂದುವರೆದರೆ ಬ್ಯಾಂಕ ಸಾಲ, ಬೆಳೆ ವಿಮೆ ಪರಿಹಾರ, ಬೆಳೆ ಹಾನಿ ಪರಿಹಾರ, ಪಿ ಎಂ ಕಿಸಾನ ಯೋಜನೆ ಲಾಭ ಬೀಜ, ರಸ ಗೊಬ್ಬರ ಮತ್ತು ಇತ್ಯಾದಿ ಸೌಲಭ್ಯಗಳಿಂದ ವಂಚಿತರಾಗುವದನ್ನು ತಪ್ಪಿಸಲು ಇಂದೇ ಇ–ಪೌತಿ ಅಭಿಯಾನ ( ವಾರಸ್ಸುದಾರರ ಹಕ್ಕು ಬದಲಾವಣೆ) ಆಂದೋಲನದ ಲಾಭ ಪಡೆದುಕೊಳ್ಳಬೇಕು ಎಂದು ಕಮಲನಗರ ತಾಲೂಕಿನ ಎಲ್ಲಾ ಸಾರ್ವಜನಿಕರು ಇದರ ಲಾಭ ಪಡೆದು ಕೊಳ್ಳಬೇಕು ತಹಸೀಲ್ದಾರ ಅಮಿತಕುಮಾರ ಕುಲಕರ್ಣಿ ಪ್ರಕಟಣೆಗೆ ತಿಳಿಸಿದ್ದರು.

# ಜನಪದ ಕಲೆಗಳ ಉಳಿವು ಅಗತ್ಯ




ಬೀದರ. ಜು. 16 : ಜನಪದ ಕಲೆಗಳ ಉಳಿವು ಅಗತ್ಯವಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಲಬುರಗಿ ವಿಭಾಗದ ಜಂಟಿ ನಿರ್ದೇಶಕ ಬಸವರಾಜ ಹೂಗಾರ್ ಹೇಳಿದರು.

ತಾಲ್ಲೂಕಿನ ಘೋಡಂಪಳ್ಳಿ ಗ್ರಾಮದ ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆ ಹಾಗೂ ಪದವಿ ಪೂರ್ವ ಕಾಲೇಜಿನಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಹಮ್ಮಿಕೊಳ್ಳಲಾದ ಜಾನಪದ ನೃತ್ಯ ಕಲಾ ಪ್ರಕಾರದ ಆರು ತಿಂಗಳ ತರಬೇತಿ ಕಾರ್ಯಕ್ರಮವನ್ನು ಮಂಗಳವಾರ ಉದ್ಘಾಟಿಸಿ ಅವರು ಮಾತನಾಡಿದರು.

ಜನಪದ ಕಲೆಗಳು ಬಹಳ ಶ್ರೇಷ್ಠವಾಗಿವೆ. ಹೀಗಾಗಿ ಅವುಗಳನ್ನು ಯುವ ಪೀಳಿಗೆಗೆ ಕಲಿಸಬೇಕಾಗಿದೆ ಎಂದು ತಿಳಿಸಿದರು.

ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಸಂಜೀವಕುಮಾರ ಅತಿವಾಳೆ ಮಾತನಾಡಿ, ವಿದ್ಯಾರ್ಥಿಗಳು ಶಿಕ್ಷಣದ ಜತೆಗೆ ವಿವಿಧ ಕಲೆಗಳನ್ನೂ ಕಲಿಯಬೇಕು. ನೃತ್ಯ ತರಬೇತಿಯ ಸದುಪಯೋಗ ಪಡೆಯಬೇಕು ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಶರಣಪ್ಪ ಬಿರಾದಾರ ಮಾತನಾಡಿ, ಜಾನಪದ ನೃತ್ಯ ಶ್ರೀಮಂತ ಕಲೆಯಾಗಿದೆ. ಈ ಕಲೆ ಹಾಗೂ ಕಲಾವಿದರನ್ನು ಪ್ರೋತ್ಸಾಹಿಸಬೇಕಿದೆ ಎಂದು ಹೇಳಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ ಪ್ರಾಸ್ತಾವಿಕವಾಗಿ ಮಾತನಾಡಿದರು.

ಪಂಡಿತ, ಮಹಾಂತಪ್ಪ ದೊಡ್ಡಮನಿ, ಸವಿತಾ ಗೋಡಬೋಲೆ, ನೃತ್ಯ ತರಬೇತುದಾರರಾದ ಅಜೀತಕುಮಾರ, ಕ್ಲೆಮೆಂಟಿನಾ, ಯೋಗೇಶ್ ಮಠದ್, ಜಾನ್ ವೆಸ್ಲಿ ಉಪಸ್ಥಿತರಿದ್ದರು. ದೇವಿದಾಸ ಜೋಶಿ ನಿರೂಪಿಸಿದರು.

# ಧನ್ನೂರ(ಎಚ್): ಗುರು ವಂದನೆ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 16 : ಭಾಲ್ಕಿ ತಾಲ್ಲೂಕಿನ ಧನ್ನೂರ(ಎಚ್) ಗ್ರಾಮದ ಬಾಲಯೋಗಿನಿ ಸುವರ್ಣಾ ಮಾತೆ ತಪೋ ಮಂದಿರದಲ್ಲಿ ಬುಧವಾರ ಗುರು ವಂದನೆ ಕಾರ್ಯಕ್ರಮ ನಡೆಯಿತು.

ಭಕ್ತರು ಸುವರ್ಣಾ ಮಾತೆ ಅವರ ಪಾದ ಪೂಜೆ ಮಾಡಿ, ಶಾಲು ಹೊದಿಸಿ ಗೌರವಿಸಿದರು.

ಭಕ್ತರು ಸನ್ಮಾರ್ಗದಲ್ಲಿ ಸಾಗಬೇಕು ಎಂದು ತಪೋ ಮಂದಿರದ ಸುವರ್ಣಾ ಮಾತೆ ಹೇಳಿದರು.

ಮೈಸೂರಿನ ಉರಿಲಿಂಗ ಪೆದ್ದಿ ಮಠದ ಜ್ಞಾನಪ್ರಕಾಶ್ ಸ್ವಾಮೀಜಿ ಮಾತನಾಡಿದರು. ಬೇಲೂರಿನ ಉರಿಲಿಂಗ ಪೆದ್ದಿ ಮಠದ ಪಂಚಾಕ್ಷರಿ ಸ್ವಾಮೀಜಿ, ಬೇನ್‌ಚಿಂಚೋಳಿಯ ಶಿವಯೋಗಿ ಸ್ವಾಮೀಜಿ, ಕಲ್ಯಾಣ ಕರ್ನಾಟಕ ಪ್ರೌಢಶಾಲಾ ಶಿಕ್ಷಕರ ಸಂಘದ ಜಿಲ್ಲಾ ಅಧ್ಯಕ್ಷ ಪಾಂಡುರಂಗ ಬೆಲ್ದಾರ್, ಪ್ರಮುಖರಾದ ತುಕಾರಾಮ ಬೆಲ್ದಾರ್, ಇದ್ರಕಾಂತ ದೊಡ್ಡಿ ಡಾಕುಳಗಿ, ಮನೋಹರ ಮಾಳಗೆ, ಮಾರುತಿ ಸಿಂಧೆ ಬಾಬಳಿ, ಸಂಜುಕುಮಾರ ಮಿತ್ರ, ದೇವರಾಜ ದೊಡ್ಡಿ, ಜಗದೇವಿ ಚಿದ್ರಿ, ಜಗನ್ನಾಥ ಗಣಪತಿ, ಗಂಗಾಧರ ಸಚಿನ್ ಧನ್ನೂರ, ತುಕಾರಾಮ ಬೇನ್‌ಚಿಂಚೋಳಿ, ಜೈಪ್ರಕಾಶ್, ಕರ್ಮವೀರ ಧನ್ನೂರ ಪಾಲ್ಗೊಂಡಿದ್ದರು.

# ಆರ್ಥಿಕ ಸಬಲತೆಗೆ ಕೃಷಿ, ಉಪ ಕಸುಬು ಅಗತ್ಯ: ಪ್ರೊ.ಕೆ.ಸಿ.ವೀರಣ್ಣ



ಬೀದರ. ಜು. 16 : 'ರೈತರು ಕೃಷಿಯೊಂದನ್ನೇ ನೆಚ್ಚಿಕೊಳ್ಳದೆ ಅದರೊಂದಿಗೆ ಇತರೆ ಉಪ ಕಸುಬು ಮಾಡಿದರೆ ಆರ್ಥಿಕವಾಗಿ ಸಬಲರಾಗಬಹುದು' ಎಂದು ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಕೆ.ಸಿ.ವೀರಣ್ಣ ತಿಳಿಸಿದರು. ಕಟ್ಟಿತೂಗಾಂವ್ ಜಾನುವಾರು ಸಂಶೋಧನೆ ಮತ್ತು ಮಾಹಿತಿ ಕೇಂದ್ರ (ದೇವಣಿ), ಪಶು ವೈದ್ಯಕೀಯ ಕಾಲೇಜಿನ ಸಹಯೋಗದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರು ಹಾಗೂ ಪಶುಪಾಲಕರಿಗೆ ಏರ್ಪಡಿಸಿದ್ದ 'ವೈಜ್ಞಾನಿಕ ಪಶುಪಾಲನೆಯಿಂದ ಆರ್ಥಿಕ ಅಭಿವೃದ್ಧಿ ಮತ್ತು ಸುಸ್ಥಿರತೆ' ಕುರಿತ ನಾಲ್ಕು ದಿನಗಳ ತರಬೇತಿ ಕಾರ್ಯಕ್ರಮಕ್ಕೆ ವಿವಿಯಲ್ಲಿ ಮಂಗಳವಾರ ಚಾಲನೆ ನೀಡಿ ಮಾತನಾಡಿದರು. 'ವೈಜ್ಞಾನಿಕ ಪಶು ಪಾಲನೆಗೆ ರೈತರು ಮುಂದಾಗಬೇಕು. ಇದರಿಂದ ಆರ್ಥಿಕವಾಗಿ ಸದೃಢರಾಗಬಹುದು. ಕೃಷಿಯಲ್ಲಿ ಏನೇ ಏರುಪೇರಾದರೂ ಇದು ಕೈಹಿಡಿಯುತ್ತದೆ. ಪಶು ಪಾಲನೆ ಹೇಗೆ ಮಾಡಬೇಕು? ಅದ–ರಿಂದ ಕೈತುಂಬ ಹಣ ಹೇಗೆ ಗಳಿಸಬಹುದು ಎಂಬುದನ್ನು ತಜ್ಞರು ಹೇಳುತ್ತಾರೆ. ಅವರ ಸಲಹೆ ಪಡೆದು ಮುಂದುವರಿಯಬೇಕು' ಎಂದು ಸಲಹೆ ನೀಡಿದರು. 'ಪಶು ಪಾಲನೆಯಲ್ಲಿ ತೊಡಗಿಸಿಕೊಂಡ ಹೆಚ್ಚಿನ ರೈತರು ಆರ್ಥಿಕವಾಗಿ ಸದೃಢರಾಗಿದ್ದಾರೆ. ಈ ವಲಯದಲ್ಲಿ ರೈತರು ಆತ್ಮಹತ್ಯೆ ಮಾಡಿಕೊಂಡ ನಿದರ್ಶನಗಳಿಲ್ಲ. ಇದು ರೈತರಲ್ಲಿ ಆತ್ಮವಿಶ್ವಾಸ ಬೆಳೆಸುತ್ತದೆ. ಆದಕಾರಣ ಪಶು ಪಾಲನೆಯಲ್ಲಿ ಹೆಚ್ಚಾಗಿ ತೊಡಗಿಸಿಕೊಳ್ಳಬೇಕು. ಇದ–ಕ್ಕೆ ನೆರವು ನೀಡಲು ಅನೇಕ ತಜ್ಞರಿದ್ದಾರೆ. ಇದರ ಪ್ರಯೋಜನ ಪಡೆಯಬೇಕು' ಎಂದು ಪಶುಸಂಗೋಪನೆ ಹಾಗೂ ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ.ನರಸಪ್ಪ ಡಿ. ತಿಳಿಸಿದರು.

ನಾಲ್ಕು ದಿನಗಳ ಅವಧಿಯಲ್ಲಿ ತಜ್ಞರು, ರೈತರಿಗೆ ಹೈನುರಾಸುಗಳ ಆಯ್ಕೆ, ಕಡಿಮೆ ಖರ್ಚಿನಲ್ಲಿ ಹಸಿ ಮೇವು ಹಾಗೂ ಪಶು ಆಹಾರ ತಯಾರಿಸುವುದು, ಜಾನುವಾರುಗಳ ಆರೋಗ್ಯ ರಕ್ಷಣೆ, ಪ್ರಸೂತಿ ಹಾಗೂ ಸಂತಾನೋತ್ಪತ್ತಿಯ ಸಮಸ್ಯೆಗಳು, ಬೇಸಿಗೆಯಲ್ಲಿ ಜಾನುವಾರುಗಳ ನಿರ್ವಹಣೆ, ಹಾಲಿನ ವಿವಿಧ ಉತ್ಪನ್ನಗಳು ಹಾಗೂ ಮಾರುಕಟ್ಟೆಯ ಕುರಿತು ಸಲಹೆ ನೀಡುವರು. ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯ ಯೋಜನಾ ಎಂಜಿನಿಯರ್ ಗಂಗಾಧರಪ್ಪ, ಪಶು ವಿವಿ ಸಂಶೋಧನಾ ನಿರ್ದೇಶಕ ಡಾ.ಬಿ.ವಿ.ಶಿವಪ್ರಕಾಶ, ವಿಸ್ತರಣಾ ನಿರ್ದೇಶಕ ಡಾ.ಬಸವರಾಜ ಅವಟಿ, ಪ್ರಭಾರ ಡೀನ್ ಡಾ.ಆರ್. ಜಿ.ಬಿಜುರಕರ್, ಸಹ ಪ್ರಾಧ್ಯಾಪಕ ಡಾ.ಪ್ರಕಾಶಕುಮಾರ ರಾಠೋಡ್, ಸಹಾಯಕ ಪ್ರಾಧ್ಯಾಪಕರಾದ ಡಾ.ವಿದ್ಯಾಸಾಗರ, ಡಾ. ಕೊಟ್ರೇಶ ಪ್ರಸಾದ ಇದ್ದರು.

# ಪಿ.ಇ.ಟಿ.ಸಿ ತರಬೇತಿ ಕೇಂದ್ರಕ್ಕೆ ಡಿ.ಸಿ. ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.16: ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಮಂಗಳವಾರ ಕಲಬುರಗಿ ನಗರದ ಅಟಲ್ ಬಿಹಾರಿ ವಾಜಪೇಯಿ ಬಡಾವಣೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಿರ್ಮಿಸಲಾಗುತ್ತಿರುವ ಸ್ಪರ್ಧಾತ್ಮಕ ಪರೀಕ್ಷಾ ಪೂರ್ವ ತರಬೇತಿ ಕೇಂದ್ರಕ್ಕೆ (ನೈಸ್ ಅಕಾಡೆಮಿ) ಭೇಟಿ ನೀಡಿ, ಕಾಮಗಾರಿಯ ಅಂತಿಮ ಹಂತದ ಕೆಲಸ ಕಾರ್ಯಗಳನ್ನು ಪರಿಶೀಲಿಸಿದರು.

ಉಳಿದ ಕಾಮಗಾರಿಗಳನ್ನು ಬೇಗ ಮುಗಿಸುವಂತೆ ಗುತ್ತಿಗೆದಾರರಿಗೆ ಸೂಚಿಸಿದ ಜಿಲ್ಲಾಧಿಕಾರಿಗಳು, ಕಾಮಗಾರಿ ಪೂರ್ಣಗೊಂಡಲ್ಲಿ ಇದನ್ನು ಲೋಕಾರ್ಪಣೆಗೊಳಿಸಿ ಪ್ರದೇಶದ ಯುವಕರಿಗೆ ಪರೀಕ್ಷಾ ಪೂರ್ವ ತರಬೇತಿ ಪಡೆಯಲು ಸಹಾಯವಾಗಲಿದೆ ಎಂದರು.

ಸುಮಾರು 10 ಕೋಟಿ ರೂ. ವೆಚ್ಚದಲ್ಲಿ ತರಬೇತಿ ಕೇಂದ್ರ ನಿರ್ಮಾಣವಾಗುತ್ತಿದೆ. ತರಬೇತಿ ಕೇಂದ್ರದಲ್ಲಿ ಪ್ರಾರಂಭಿಕ 500ರಿಂದ ಆರಂಭಿಸಿ ಗರಿಷ್ಠ ವಾರ್ಷಿಕ 2,000 ಜನ ವಿದ್ಯಾರ್ಥಿಗಳಿಗೆ ಐ.ಎ.ಎಸ್, ಐ.ಪಿ.ಎಸ್, ಕೆ.ಎ.ಎಸ್, ಬ್ಯಾಂಕಿಂಗ್ ಸೇರಿದಂತೆ ಇತರೆ ಪರೀಕ್ಷೆಗಳ ಪರೀಕ್ಷಾ ಪೂರ್ವ ತರಬೇತಿ ಇಲ್ಲಿ ನೀಡಲಾಗುತ್ತಿದೆ. ಸಕಲ ಸೌಲಭ್ಯವುಳ್ಳ ಉತ್ತಮ ಬೋಧನಾ ಕೊಠಡಿ, ಕಂಪ್ಯೂಟರ್ ಕೋಣೆ, ವಸತಿ ನಿಲಯಗಳನ್ನು ಇದು ಒಳಗೊಂಡಿದೆ. ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್‌ಸಿಂಗ್ ಮೀನಾ, ಸಮಾಜಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪ್ರೀತಿ ದೊಡ್ಡಮನಿ, ಕಲಬುರಗಿ ತಹಶೀಲ್ದಾರ ಕೆ. ಆನಂದಶೀಲ ಸೇರಿದಂತೆ ಇತರೆ ಅಧಿಕಾರಿಗಳು ಇದ್ದರು.

# ಅನಧಿಕೃತ ಅಂಗಡಿ ತೆರವುಗೊಳಿಸಿ

ಬೀದರ. ಜು. 16 : ನಗರದ ನೌಬಾ???ನ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮುಂಭಾಗದಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ಅಂಗಡಿಯನ್ನು ಕೂಡಲೇ ತೆರವುಗೊಳಿಸಬೇಕು ಎಂದು ಸಮೃದ್ಧಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕೂಲಿ ಕಾರ್ಮಿಕರ ಸಂಘ ಆಗ್ರಹಿಸಿದೆ. ನಗರಸಭೆಗೆ ಅನೇಕ ಬಾರಿ ಮನವಿ ಪತ್ರ ಸಲ್ಲಿಸಿದರೂ ಈವರೆಗೆ ಅಂಗಡಿ ತೆರವಿಗೆ ಕ್ರಮ ಕೈಗೊಂಡಿಲ್ಲ ಎಂದು ಸಂಘದ ಅಧ್ಯಕ್ಷ ಗಣಪತಿ ಹಾಲೆಪುರ್ಗೆ ಆರೋಪಿಸಿದ್ದಾರೆ. ನಗರಸಭೆಗೆ ಸೇರಿದ ಸ್ಥಳದಲ್ಲಿ ನಿರ್ಮಿಸಿದ ಅಂಗಡಿಯನ್ನು ಕೂಡಲೇ ತೆರವುಗೊಳಿಸದಿದ್ದರೆ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

# ನಗರದಲ್ಲಿ ರಾಜಾರೋಷವಾಗಿ ಮಟ್ಕಾ ದಂಧೆ ಕಣ್ಣು ಮುಚ್ಚಿರುವ ಪೊಲೀಸ್ ಇಲಾಖೆ!




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ನಗರದ ಹಳೆ ಬಸ್ ನಿಲ್ದಾಣ ಪಕ್ಕದ ಪ್ರದೇಶದಲ್ಲಿ ಕಳೆದ ಹಲವಾರು ತಿಂಗಳಿನಿಂದ ಮಟ್ಕಾ ಎಂಬ ಜೂಜಾಟ ದಂಧೆ ರಾಜಾರೋಷವಾಗಿ ನಡೆಯುತ್ತಿದ್ದು, ಸ್ಥಳೀಯರು ಈ ಬಗ್ಗೆ ಆತಂಕ ವ್ಯಕ್ತಪಡಿಸಿದ್ದಾರೆ. ನಗರ ಪೊಲೀಸ್ ಇಲಾಖೆ ಈ ಅಕ್ರಮ ಚಟುವಟಿಕೆಗೆ ಕಣ್ಣು ಮುಚ್ಚಿರುವುದು ಆಶ್ಚರ್ಯಕ್ಕೆ ಕಾರಣವಾಗಿದೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಾಗಿ ಪೃಥ್ವಿ ಶಂಕರ್ ಅವರು ಕೆಲವು ದಿನಗಳ ಕಾಲ ನಗರ ಪ್ರವಾಸ ನಡೆಸಿದಾಗ ಈ ದಂಧೆ ಸಂಪೂರ್ಣವಾಗಿ ನಿಂತಿತ್ತು. ಆದರೆ ಈಗ ಮತ್ತೆ ಈ ದಂಧೆ ಪುನಶ್ಚೇತನಗೊಂಡಿದ್ದು, ಇದರ ಹಿಂದೆ ಬಲವಾದ ಹಾಗೂ ಪ್ರಭಾವಶಾಲಿ ವ್ಯಕ್ತಿಗಳ ಬೆಂಬಲವಿದೆ ಎಂಬುದು ಸಾರ್ವಜನಿಕರ ಅನುಮಾನ ವ್ಯಕ್ತಪಡಿಸುತ್ತಿದ್ದಾರೆ.

ಸ್ಥಳೀಯರು ಕೇಳುತ್ತಿರುವ ಪ್ರಶ್ನೆ ಏನೆಂದರೆ – "ಪೊಲೀಸರು ಈ ಅಕ್ರಮದ ಬಗ್ಗೆ ಗೊತ್ತಿಲ್ಲವೇ? ಅಥವಾ ಈ ದಂಧೆಗೆ ಇವರೇನೇನಾದರೂ ಸಂಬಂಧಿತವಾಗಿದೆಯೇ?" ಎಂಬುದು. ಇನ್ನಾದರೂ ಪೊಲೀಸ್ ಅಧಿಕಾರಿಗಳು ಎಚ್ಚೆತ್ತುಕೊಳ್ಳುತ್ತಾರೆ ಎಂದು ಕಾದು ನೋಡಬೇಕು.

ಸಮಾಜದ ಶಿಸ್ತು ಮತ್ತು ಕಾನೂನು ಸುವ್ಯವಸ್ಥೆ ಕಾಯ್ದುಕೊಳ್ಳಬೇಕಾದ ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ನಿರ್ಲಕ್ಷಿಸುವುದರಿಂದ ಯುವಜನತೆ ದಾರಿತಪ್ಪುವ ಸಾಧ್ಯತೆ ಇದೆ.

# ಯುವಕರು ಸರ್ಕಾರದ ಸ್ವಯಂ ಉದ್ಯೋಗದಿಂದ ಸ್ವಾವಲಂಬಿಗಳಾಗಬೇಕು:ಅಮ್ಜದ್ ಪಟೇಲ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯುವಕರು ಸರ್ಕಾರದ ಸ್ವಯಂ ಉದ್ಯೋಗದ ಯೋಜನೆಗಳನ್ನು ಬಳಸಿಕೊಂಡು ಸ್ವಾವಲಂಬಿಗಳಾಗಬೇಕು ಎಂದು ಕೊಪ್ಪಳ ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್ ಅವರು ಹೇಳಿದರು.

ಕೊಪ್ಪಳ ತಾಲೂಕಿನ ಬಸಾಪುರ ಗ್ರಾಮದ ಹತ್ತಿರ ಕೃಷಿ ಇಲಾಖೆಯ ಪ್ರಧಾನ ಮಂತ್ರಿ ಕಿರು ಆಹಾರ ಉದ್ದಿಮೆಗಳ ಔಪಚಾರೀಕರಣ ಯೋಜನೆಯಡಿ (ಕಿಒಈಒಇ) ಸ್ಥಾಪಿತವಾದ ಡಿ.ಬಿ ಮಶ್ರೂಮ್ ಅವರ ಭೀಮಾ ನ್ಯಾಚುರಲ್ಸ ಅಣಬೆ ಕೃಷಿ ಘಟಕ ಮತ್ತು ಮೌಲ್ಯವರ್ಧಿತ ಉತ್ಪನ್ನಗಳ ಘಟಕವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಜಂಟಿ ಕೃಷಿ ನಿರ್ದೇಶಕರಾದ ಟಿ.ಎಸ್.ರುದ್ರೇಶಪ್ಪ ಅವರು, ಈ ಯೋಜನೆಯಡಿ ಜಿಲ್ಲೆಯಲ್ಲಿ ಆಹಾರ ಸಂಸ್ಕರಣೆಯಲ್ಲಿ ತೊಡಗಿಸಿಕೊಂಡ 178 ಕ್ಕೂ ಹೆಚ್ಚು ಜನ ಫಲಾನುಭವಿಗಳಿದ್ದು, ಸ್ವಯಂ ಉದ್ಯೋಗ ಕಂಡುಕೊಂಡಿದ್ದಾರೆ. ಈ ಯೋಜನೆಯು ತರಬೇತಿ, ಬ್ಯಾಂಕ್ ಸಾಲ, ಯೋಜನಾ ವೆಚ್ಚದ ಶೇ.50 ರಷ್ಟು ಅಥವಾ ಗರಿಷ್ಟ 15 ಲಕ್ಷಗಳ ವರೆಗೆ ಸಹಾಯಧನದ ಜೊತೆಗೆ ಪ್ಯಾಕಿಂಗ್, ಬ್ರಾಂಡಿಂಗ್ ಬಗ್ಗೆ ಮಾಹಿತಿ ನೀಡುವ ಎಲ್ಲಾ ಸೌಲಭ್ಯಗಳನ್ನು ಒಳಗೊಂಡಿದ್ದು, ಆಹಾರ ಸಂಸ್ಕರಣೆ ಉದ್ಯಮದಲ್ಲಿ ತೊಡಗಿಸಿಕೊಳ್ಳಲು ಇಚ್ಛಿಸುವವರು ಯೋಜನೆಯ ಲಾಭ ಪಡೆದುಕೊಳ್ಳಲು ಜಂಟಿ ಕೃಷಿ ನಿರ್ದೇಶಕರ ಕಛೇರಿಯನ್ನು ಸಂಪರ್ಕಿಸಬಹುದು ಎಂದು ತಿಳಿಸಿದರು.

ಅಣಬೆ ಕೃಷಿ ಮತ್ತು ಉತ್ಪನ್ನಗಳ ಘಟಕ ಸ್ಥಾಪಿಸಿದ ಭೀಮಪ್ಪ ಶಿವಪ್ಪ ಕೊರವರ ಅವರು ಮಾತನಾಡಿ, ನನ್ನ ಪದವಿಯ ನಂತರ ಜೀವನ ನಿರ್ವಹಣೆಗೆ ಉದ್ಯೋಗದ ಯೋಚನೆಯಲ್ಲಿದ್ದ ನನಗೆ ಈ ಯೋಜನೆಯ ಮಾಹಿತಿ ಸಿಕ್ಕತಕ್ಷಣ ಬೆಂಗಳೂರಿನ ಐಐಎಚ್‌ಆರ್ ಮತ್ತು ಮೈಸೂರಿನ ಸಿಎಫ್‌ಟಿಆರ್‌ಐ ನಂತಹ ಪ್ರತಿಷ್ಠಿತ ಸಂಸ್ಥೆಗಳಲ್ಲಿ ತರಬೇತಿ ಪಡೆದುಕೊಂಡೆನು. ನಂತರ ಈ ಯೋಜನೆ ಮುಖಾಂತರ ಬ್ಯಾಂಕ್ ಸಾಲ ಮತ್ತು ಸಹಾಯಧನ ಪಡೆದುಕೊಂಡು ಅಣಬೆಯಿಂದ ಉಪ್ಪಿನಕಾಯಿ, ಬಿಸ್ಕೆಟ್ ಮತ್ತು ಪೌಡರ್ ಗಳನ್ನು ತಯಾರಿಸಿದೆ. ಮಾರುಕಟ್ಟೆಯಲ್ಲಿ ಈ ಉತ್ಪನ್ನಗಳಿಗೆ ಹೆಚ್ಚಿನ ಬೇಡಿಕೆ ಇದ್ದು, ನಾನು ಮಾಸಿಕವಾಗಿ ಸುಮಾರು 30 ರಿಂದ 40 ಸಾವಿರದವರೆಗೆ ಆದಾಯ ಗಳಿಸಿ ಸ್ವಾವಲಂಬಿ ಜೀವನ ನಡೆಸುತ್ತಿದ್ದೇನೆ ಎಂದು ತಮ್ಮ ಅನುಭವ ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ಮೀನುಗಾರಿಕೆ ಇಲಾಖೆಯ ಉಪನಿರ್ದೇಶಕರಾದ ಶ್ರೀನಿವಾಸ ಕುಲಕರ್ಣಿ, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರಾದ ಶಿವಶೇಖರ್ ಪಾಟೀಲ್, ಅಯೋಧ್ಯಾ ಕ್ರಾಪ್ಸ್ ಅಕಾಡೆಮಿ ಸಂಸ್ಥಾಪಕರಾದ ಎಮ್.ಬಿ ಪಾಟೀಲ್, ಕೃಷಿ ಇಲಾಖೆಯ ಜಿಲ್ಲಾ ಅನುಷ್ಠಾನ ಸಮಿತಿಯ ನಳಿನಿ, ಆತ್ಮ ಯೋಜನೆಯ ಶಿವಪ್ಪ ನಾಯಕ ಹಾಗೂ ಸಂಪನ್ಮೂಲ ವ್ಯಕ್ತಿಗಳಾದ ರಾಘವೇಂದ್ರ ಗೊಂದಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಯುವನಿಧಿ ಯೋಜನೆಯ ವಿಶೇಷ ನೋಂದಣಿ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಜುಲೈ.16 –ಘನತೆವೆತ ಕರ್ನಾಟಕ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಯವನಿಧಿ ಯೋಜನೆಯಲ್ಲಿ 2023–24ನೇ, 2024–25ನೇ ಮತ್ತು 2025–26ನೇ ಸಾಲಿನಲ್ಲಿ ಸ್ನಾತಕ ಪದವಿ/ಸ್ನಾತಕೋತ್ತರ ಪದವಿ ಮತ್ತು ಡಿಪ್ಲೋಮಾ ಪದವಿಯಲ್ಲಿ ತೇರ್ಗಡೆಯಾಗಿ ಉದ್ಯೋಗ ಸಿಗದ ಅರ್ಹ ಅಭ್ಯರ್ಥಿಗಳು ಃಣಣಠಿ;//ಜಠಿಭಿಟಿಜ಼ುಣಾಠಿ.ಇಚಿಡಿಟಿಚಿಣಚಿಞಚಿ.ರಠಡ.ಟಿ ನಿರುದ್ಯೋಗ ಸೇವಾಸಿಂಧು ವೆಬ್ ಪೋರ್ಟಲನಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ದಿನಾಂಕ 07–07–2025 ರಿಂದ 07–08–2025 ರವರೆಗೆ ವಿಶೇಷ ನೋಂದಣಿ ಅಭಿಯಾನವನ್ನು ಉದ್ಯೋಗ ವಿನಿಮಯ ಕಛೇರಿ ಬೀದರನಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಬೀದರ ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಹ ಫಲಾನುಭವಿಗಳು ಈ ಸದಾವಕಾಶವನ್ನು ಉಪಯೋಗಿಸಿಕೊಂಡು ಇದರ ಪ್ರಯೋಜನವನ್ನು ಪಡೆದುಕೊಳಬಹುದಾಗಿದೆ. ಪದವಿಧರರಿಗೆ ಪ್ರತಿ ತಿಂಗಳು 3000 ರೂ. ಹಾಗೂ ಡಿಪ್ಲೋಮಾ ಪದವಿಧರರಿಗೆ 1500 ರೂ. ನಿರುದ್ಯೋಗಿ ಭೃತೆಯನ್ನು ನೀಡಲಾಗುತ್ತದೆ. ಪಲಿತಾಂಶದ ನಂತರ ನಿರುದ್ಯೋಗಿಗಳಾಗಿ 180 ದಿವಸಗಳು ಪೂರೈಸಿ ಹೆಸರನ್ನು ನೊಂದಾಯಿಸಿಕೊಂಡ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುತ್ತಿದೆ. ನಂತರ ಪ್ರತಿ ತಿಂಗಳು ಯುವನಿಧಿ ಯೋಜನೆಯ ಪ್ರಯೋಜನವನ್ನು ಪಡೆಯಬೇಕಿದರೆ ಸೇವಾ ಸಿಂದು ಪೋರ್ಟಲನಲ್ಲಿ ಮಾಹೆಯಾನ್ನ ತಾನು ನಿರುದ್ಯೋಗಿ ಎಂದು ಉನ್ನತ ವ್ಯಾಸಂಗ ಮುಂದುವರೆಸುತಿಲ್ಲವೆಂದು ಹಾಗೂ ಸ್ವಯಂ ಉದ್ಯೋಗಿಯಲ್ಲವೆಂದು ಪ್ರತಿ ಮೂರು ತಿಂಗಳ 25ನೇ ತಾರಿಖಿನೊಳಗಾಗಿ ಸ್ವಯಂ ಘೋಷಣೆಯನ್ನು ಮಾಡಬೇಕಾಗಿರುವುದು ಕಡ್ಡಾಯವಾಗಿರುತ್ತದೆ. ಸ್ವಯಂ ಘೋಷಣೆ ಆಧಾರದ ಮೇಲೆ ಅಭ್ಯರ್ಥಿಗಳು ಮುಂದಿನ ಪಾವತಿಯನ್ನು ಸ್ವೀಕರಿಸಲಾಗುವುದು.

ಅಭ್ಯರ್ಥಿಗಳು ಗ್ರಾಮ ಒನ್, ಕರ್ನಾಟಕ ಒನ್ ಮತ್ತು ಬಾಪೂಜಿ ಕೇಂದ್ರಗಳಲ್ಲಿ ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಕಡ್ಡಾಯವಾಗಿ ಆಧಾರ ಸೀಡೆಡ್ ಬ್ಯಾಂಕ ಖಾತೆ ಹಾಗೂ ಆಧಾರ ಲಿಂಕ್ಡ್ ಮೊಬೈಲ್ ನಂಬರನ್ನು ಹೊಂದಿರತಕ್ಕದ್ದು ಅರ್ಜಿ ಸಲ್ಲಿಸಿದ ನಂತರ ಸೇವಾ ಸಿಂಧು ಪೋರ್ಟಲ್‌ನಲ್ಲಿ ತಮ್ಮ ಅರ್ಜಿ ಯಾವ ಹಂತದಲ್ಲಿದೆ ಎಂಬುದನ್ನು ಪರಿಶೀಲಿಸಿಕೊಂಡು, ಒಂದು ವೇಳೆ ಅರ್ಜಿಯು ಅಪ್ರೂವ್ ಆಗದ ಸಂದರ್ಭದಲ್ಲಿ ಸೂಚಿಸಲ್ಪಟ್ ಇಲಾಖೆಯ ಕಛೇರಿಗಳಿಗೆ ತಮ್ಮ ಎಲ್ಲಾ ಮೂಲ ಅಂಕಪಟ್ಟಿ ಹಾಗೂ ಇತರೆ ಪ್ರಮಾಣ ಪತ್ರಗಳೊಂದಿಗೆ ಖುದ್ದಾಗಿ ಭೇಟಿ ನೀಡಿ ಅಪ್ರೂವ್ ಮಾಡಿಸಿಕೊಳ್ಳಬೇಕಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಉದ್ಯೋಗಾಧಿಕಾರಿ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ಬೀದರನ್ನು ಸಂಪರ್ಕಿಸಲು ಅವರು ತಿಳಿಸಿದ್ದಾರೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

# ಒಂದೇ ತಿಂಗಳಿಗೆ ಕಿತ್ತು ಬಂದ ಡಾಂಬರು ರಸ್ತೆ? 40% ಸ್ಕೀಮ್ ಎಂದು ಸ್ಥಳೀಯರ ಆಕ್ರೋಶ...!

(ಎಂ.ರಫೀಕ್ ಪಟೇಲ್)

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ।ಡಾಂಬರೀಕರಣ ಮಾಡಿ 1 ತಿಂಗಳೊಳಗೆ ರಸ್ತೆ ಕಿತ್ತು ಬರುತ್ತಿದ್ದು, ಸಾಮಾಜಿಕ ಜಾಲತಾಣದಲ್ಲಿ ಕಳಪೆ ಕಾಮಗಾರಿಯ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.



ಗುರುಮಿಟ್ಕಲ್ ಮತಕ್ಷೇತ್ರದ, ಕೋಟಗೆರ ಗ್ರಾಮದಿಂದ ಸೇಡಂ ಕಡೆಗೆ ಹೋಗುವ ರಸ್ತೆಗೆ ಕಳೆದ 1 ತಿಂಗಳ ಹಿಂದೆ ಡಾಂಬರೀಕರಣ ಮಾಡಲಾಗಿತ್ತು. ಜನರು ಸಹ ಖುಷಿಯಾಗಿದ್ದರು. ಇಷ್ಟು ದಿನ ಗುಂಡಿ ಬಿದ್ದ ರಸ್ತೆಯಲ್ಲಿ ಓಡಾಡಿ ಓಡಾಡಿ ಸುಸ್ತಾಗಿದ್ದ ವಾಹನ ಸವಾರರು, ನಮ್ಮ ಸಮಸ್ಯೆಗೆ ಮುಕ್ತಿ ಸಿಕ್ತಲ್ಲ ಎಂದು ಸಮಾಧಾನದಲ್ಲಿದ್ದರು. ಆದರೆ 1 ತಿಂಗಳಲ್ಲೇ ಅಸಲಿ ಬಣ್ಣ ಬಯಲಾಗಿದೆ ಎಂದು ತಿಳಿದು ಬಂದಿದೆ.

ಈಗ ಜನರು ಸಹ ಹೆಸರು ಹೇಳದೆ ಕೆಲವರ ಜನಪ್ರತಿನಿಧಿಗಳ ವಿರುದ್ಧ 40% ಕಮಿಷನ್ ಆರೋಪ ಮಾಡುತ್ತಿದ್ದಾರೆ.

**2.00 ಕೋಟಿ ವೆಚ್ಚದಲ್ಲಿ ಡಾಂಬರೀಕರಣ, ಒಂದೇ ತಿಂಗಳಿಗೆ ಕಿತ್ತು ಬರುತ್ತಿದ್ದು ರಸ್ತೆ ಡಾಂಬರು ಕಳಪೆ ಕಾಮಗಾರಿ ವಿರುದ್ಧ ಆಕ್ರೋಶ?**

ಅಧಿಕಾರಿಗಳು ಹಾಗೂ ಗುತ್ತಿಗೆದಾರರ ಕಳ್ಳಾಟದ ವಿರುದ್ಧ ಸ್ಥಳೀಯರು ಸಿಡಿದೆದ್ದಿದ್ದಾರೆ. ಸ್ವತಃ ಇಲ್ಲಿಯ ಜನರೇ ರಿಯಾಲಿಟಿ ಚೆಕ್ ನಡೆಸಿದ್ದು, ಕಳಪೆ ಕಾಮಗಾರಿ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

3 ಕಿಲೋ ಮೀಟರ್ ರಸ್ತೆ.. ಅಂದಾಜು 2.ಕೋಟಿ ವೆಚ್ಚ. ಕೋಟಗೆರ ಗ್ರಾಮದಿಂದ ಕೆ ಹೊಸಳ್ಳಿ ವರೆಗೆ ಹೋಗುವ ಮಾರ್ಗದಲ್ಲಿ ಕೇವಲ ಮೂರು ಕಿಲೋ ಮೀಟರ್ ಮಾತ್ರ ಡಾಂಬರೀಕರಣ ಮಾಡಲಾಗಿದೆ. ಇದಕ್ಕೆ ಹಾಕಿದ್ದ ಹಣ ಮಾತ್ರ ಕೋಟಿ ಕೋಟಿ. ಅಂದಾಜು 2.00 ಕೋಟಿ ವೆಚ್ಚದಲ್ಲಿ ಡಾಂಬರೀಕರಣ ಮಾಡಲಾಗಿದೆ. ಇದೇ ಮಾರ್ಗವಾಗಿ ಸೇಡಂ ತಾಲೂಕಿಗೆ ಸಂಪರ್ಕ ಕಲ್ಪಿಸಲಾಗುತ್ತೆ. ಆದರೆ ಇಲ್ಲಿನ ಪರಿಸ್ಥಿತಿ ನೋಡಿದರೆ ಹೇಳೋರಿಲ್ಲ, ಕೇಳುವವರಿಲ್ಲ ಎನ್ನುವಂತಾಗಿದೆ. ಜನರ ಕಣ್ಣೊರೆಸೋದಕ್ಕೆ ನೆಪಕ್ಕೆ ಮಾತ್ರ ಡಾಂಬರ್ ಹಾಕಿದ್ದು, ಎಲ್ಲೆಂದರಲ್ಲಿ ಕಿತ್ತು ಬರುತ್ತೆ. ಜೋರಾಗಿ ಕಾಲಲ್ಲಿ ಒದ್ದರೆ ಡಾಂಬರ್ ಎಲ್ಲಾ ಮೇಲೇಳುತ್ತಿದೆ.

ಬುಸೇನ ನಿಗಮ ಕಾಮಗಾರಿ ನಡೆಸಿದ್ದು, ಇದರಲ್ಲೂ ಗೋಲ್ಮಾಲ್ ನಡೆದಿದೆ ಅನ್ನೋ ಆರೋಪ ಕೇಳಿ ಬರುತ್ತಿದೆ. ಇದು 40% ರಸ್ತೆ ಅಂತಾ ಹೆಸರು ಹೇಳಲ ಇಚ್ಚಿಸದ ಇಲ್ಲಿಯ ಜನರೇ ರಸ್ತೆ ಕಾಮಗಾರಿ ಬಗ್ಗೆ ಸ್ಥಳೀಯ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮಲ್ಲಮ್ಮ ನುಡಿ ಪತ್ರಿಕೆಯ ಜಿಲ್ಲಾ ವರದಿಗಾರ ಭೂ ಸೇನಾ ನಿಗಮ (ಎ ಈ ಈ) ಅವರಿಗೆ ಕರೆ ಮುಖಾಂತರ ಕಳಪೆ ಕಾಮಗಾರಿ ಬಗ್ಗೆ ಮಾತನಾಡಿದಾಗ, ಇಲಾಖೆ ಅಧಿಕಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ ಎಂದು ತಿಳಿಸಿದರು. ಕಣ್ಣೆದು–ರೇ ರಸ್ತೆ ಕಿತ್ತು ಬರುತ್ತಿದ್ದರೂ ಅಧಿಕಾರಿಗಳು ಮಾತ್ರ ತುಂಡು ಗುತ್ತಿಗೆದಾರನ ಪರವಾಗಿಯೇ ಇದ್ದಂತೆ ಮಾತನಾಡುತ್ತಿದ್ದಾರೆ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಅಧಿಕಾರಿಗಳ ಮುಂದೆಯೇ ರಸ್ತೆಗೆ ಹಾಕಿದ್ದ ಡಾಂಬರ್ನ್ನ ಕಿತ್ತು ತೋರಿಸಿದರು ನಂಬೋದಕ್ಕೆ ರೆಡಿ ಇಲ್ಲ. ಇದಕ್ಕೂ ಹತ್ತು ಹಲವು ಕಾರಣ ನೀಡುತ್ತಿದ್ದಾರೆ. ಯಾವಾಗ ಸ್ಥಳೀಯರ ಆಕ್ರೋಶ ಹೆಚ್ಚಾಯಿತೋ, ತುಂಡು ಗುತ್ತಿಗೆದಾರರ ಮೇಲೆ ಕ್ರಮ ಕೈಗೊಳ್ಳುತ್ತೇವೆ, ರಸ್ತೆ ಸರಿಯಾಗಿ ಮಾಡದೆ ಇದ್ದಲ್ಲಿ ಮತ್ತೊಮ್ಮೆ ರಸ್ತೆ ಕಾಮಗಾರಿ ಮಾಡಿಸುತ್ತೇವೆ ಎಂದಿದ್ದಾರೆ.

# ಜಯ ಮೃತ್ಯುಂಜಯ ಶ್ರೀಗಳ ಮಾರ್ಗದರ್ಶನದಲ್ಲಿ ಸಮಾಜ ಕಟ್ಟುತ್ತೇನೆ : ವಿಶ್ವನಾಥ ಮರಿಬಸಪ್ಪನವರ.



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ವೀರ ರಾಣಿ ಕಿತ್ತೂರು ಚೆನ್ನಮ್ಮನವರ ಒಗ್ಗಟ್ಟಿನ ಮಂತ್ರ, ಪಂಚಮಸಾಲಿ ಜಯಮೃತ್ಯುಂಜಯ ಶ್ರೀಗಳ ಮಾರ್ಗದರ್ಶನದಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಸಮಾಜ ಕಟ್ಟುವ ಪ್ರಾಮಾಣಿಕ ಕೆಲಸ ಮಾಡುತ್ತೇನೆ ಎಂದು ಪಂಚ ಸೇನಾ ಕೊಪ್ಪಳ ಜಿಲ್ಲಾಧ್ಯಕ್ಷ ವಿಶ್ವನಾಥ ಮರಿಬಸಪ್ಪನವರ ಹೇಳಿದರು.

ಮಂಗಳೂರು ಗ್ರಾಮದ ತಮ್ಮ ನಿವಾಸದಲ್ಲಿ ಸುದ್ದಿಗಾರರೊಂದಿಗೆ ವಿಶ್ವನಾಥ ಮರಿಬಸಪ್ಪನವರ ಮಾತನಾಡಿ, ರಾಷ್ಟ್ರ ಮಾತೇ, ವೀರರಾಣಿ ಕಿತ್ತೂರು ಚೆನ್ನಮ್ಮನವರ ವಂಶಸ್ಥರು ಇಡೀ ರಾಷ್ಟ್ರದ ತುಂಬಾ ಇದ್ದಾರೆ. ರಾಜ್ಯ ಮತ್ತು ಪ್ರತೀ ಜಿಲ್ಲೆಯಲ್ಲಿ ಪಂಚಮಸಾಲಿ ಸಮುದಾಯದ ಒಗ್ಗಟ್ಟಿಗೆ ಕೂಡಲ ಸಂಗಮ ಪೀಠದ ಜಯ ಮೃತ್ಯುಂಜಯ ಶ್ರೀಗಳು ಶ್ರಮಿಸುತ್ತಿದ್ದಾರೆ. ಈ ಸಮುದಾಯಕ್ಕೆ 2 ಎ ಮೀಸಲಾತಿ ದೊರಕಿಸಿಕೊಡಬೇಕೆಂಬುದು ಶ್ರೀಗಳ ಮುಖ್ಯ ಉದ್ದೇಶವಾಗಿದ್ದು ಈ ನಿಟ್ಟಿನಲ್ಲಿ ಕೊಪ್ಪಳ ಜಿಲ್ಲೆಯಿಂದಲೂ ಸಮಾಜದಿಂದ ಒಗ್ಗಟ್ಟಿನ ಹೋರಾಟದೊಂದಿಗೆ ಶ್ರೀಗಳ ಮಾರ್ಗದರ್ಶನದಲ್ಲಿ ನಡೆಯುತ್ತವೆ ಎಂದು ವಿಶ್ವನಾಥ ಮರಿಬಸಪ್ಪನವರ ಹೇಳಿದರು.

ರಾಷ್ಟ್ರೀಯ ಅಧ್ಯಕ್ಷ ಬಿ ಎಸ್. ಪಾಟೀಲ ಮತ್ತು ರಾಜ್ಯಾಧ್ಯಕ್ಷ ರುದ್ರಗೌಡ್ರ ಸೊಲಬಗೌಡ್ರ ಹಾಗೂ ಪರಮಪೂಜ್ಯ ಜಯಮೃತ್ಯುಂಜಯ ಶ್ರೀಗಳು ನನಗೆ ಜಿಲ್ಲಾಧ್ಯಕ್ಷ ಸ್ಥಾನದ ದೊಡ್ಡ ಜವಾಬ್ದಾರಿ ನೀಡಿದ್ದು, ಪಂಚಮಸಾಲಿ ಸಮಾಜದ ಋಣ ತೀರಿಸಲು ಇತರ ಸಮಾಜದೊಂದಿಗೆ ಸಹೋದರತ್ವ ಭಾವನೆಯೊಂದಿಗೆ ಪಂಚಮಸಾಲಿ ಸಮಾಜದಲ್ಲಿ ಒಗ್ಗಟ್ಟಿನೊಂದಿಗೆ 2 ಎ ಮೀಸಲಾತಿ ಪಡೆಯಲು ಹಾಗೂ ಸಮಾಜದ ಪ್ರತಿಭಾವಂತರನ್ನು ಪುರಸ್ಕರಿಸುವ ಕಾರ್ಯವನ್ನು ಮಾಡುತ್ತೇನೆ ಎಂದು ಪಂಚಮ ಸೇನಾ ಕೊಪ್ಪಳ ಜಿಲ್ಲಾಧ್ಯಕ್ಷ ವಿಶ್ವನಾಥ ಮರೀಬಸಪ್ಪನವರ ಹೇಳಿದರು.

ಈ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕ ಮಾಧ್ಯಮ ವಕ್ತಾರ ರವೀಂದ್ರನಾಥ ತೋಟದ, ಅನಿಲ ಕಲ್ಲಭಾವಿ, ಪ್ರಸನ್ನ ಅರಳಲೆಹಿರೇಮಠ ಇದ್ದರು.

# ಹಿಂದುಳಿದ ಹಾಗೂ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳಿಗೆ ಅನುದಾನ ನೀಡದ ಶಾಸಕ : ಕೋನನಗೌಡ್ರ ಆರೋಪ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯಲಬುರ್ಗಾ ವಿಧಾನಸಭಾ ಕ್ಷೇತ್ರದಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಬಾಲಕರ ಮತ್ತು ಬಾಲಕಿಯರ 15 ವಸತಿ ನಿಲಯಗಳಿದ್ದು ವಿದ್ಯಾರ್ಥಿ ವಿದ್ಯಾರ್ಥಿನಿಯರು ವಸತಿ ನಿಲಯಗಳಿಗೆ ಪ್ರವೇಶ ಪಡೆಯಲು ಒಟ್ಟು 3100 ಅರ್ಜಿ ಸಲ್ಲಿಕೆಯಾಗಿದ್ದು 600 ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಪ್ರವೇಶವಕಾಶ ವಿರುತ್ತದೆ.

ಇನ್ನೂ 2500 ಕ್ಕೂ ಹೆಚ್ಚು ವಿದ್ಯಾರ್ಥಿಗಳು ವಸತಿ ನಿಲಯಗಳ ಪ್ರವೇಶ ಪಡೆಯುವಲ್ಲಿ ನಿರಾಶೆಯಾಗಿದೆ ಎಂದು ಜೆಡಿಎಸ್ ಜಿಲ್ಲಾ ವಕ್ತಾರ ಮಲ್ಲನಗೌಡ ಕೋನನಗೌಡ್ರ ಬುಧವಾರ ಮಲ್ಲಮ್ಮ ನುಡಿ ಕನ್ನಡ ದಿನ ಪತ್ರಿಕೆ ಯೊಂದಿಗೆ ಮಾತನಾಡಿದ ಅವರು. ಸಮಾಜ ಕಲ್ಯಾಣ ಇಲಾಖೆಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳ 15 ವಸತಿ ನಿಲಯಗಳಿದ್ದು ಒಟ್ಟು 1488 ಅರ್ಜಿಗಳು ಸಲ್ಲಿಕೆಯಾಗಿವೆ ಅದರಲ್ಲಿ ಶೇಕಡಾ 15 ರಷ್ಟು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಕಾಯ್ದಿರಿಸಲಾಗಿದ್ದು ಇನ್ನೂಳಿದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ವಸತಿ ನಿಲಯಗಳ ಪ್ರವೇಶದಿಂದ ವಂಚಿತರಾಗಿದ್ದಾರೆ. ಶಾಸಕರಾಗಿ ಎರಡು ವರ್ಷ ಕಳೆದರೂ ಕೂಡಾ ಕ್ಷೇತ್ರದ ಸತಿನಿಲಯಗಳಿಗೆ ಹೆಚ್ಚುವರಿ ಕೊಠಡಿಗಳ ಮೂಲಭೂತ ಸೌಕರ್ಯ ಕಲ್ಪಿಸುವಲ್ಲಿ ವಿಫಲರಾಗಿದ್ದಾರೆ.

ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ವಸತಿ ನಿಲಯಗಳಿಗೆ ಹೆಚ್ಚುವರಿಯಾಗಿ ಪ್ರವೇಶ ಪಡೆಯಲು ಕಾರ್ಯೋನ್ಮುಖರಾಗಬೇಕು

ವಸತಿ ನಿಲಯಗಳ ಮೂಲಭೂತ ಸೌಕರ್ಯ ಮತ್ತು ಹೆಚ್ಚುವರಿ ಕೊಠಡಿಗಳಿಗೆ ಶಾಸಕ ಮತ್ತು ಸಚಿವರು ಗಮನಹರಿಸಿ ಕೂಡಲೆ ಹೆಚ್ಚುವರಿ ಕೊಠಡಿಗಳನ್ನ ನಿರ್ಮಿಸಿ ವಸತಿ ನಿಲಯಗಳ ಪ್ರವೇಶ ಪಡೆಯುವಲ್ಲಿ ವಂಚಿತರಾದ ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಿ ಕೊಡಬೇಕೆಂದು ಮಲ್ಲನಗೌಡ ಕೋನನಗೌಡ್ರ ಆಗ್ರಹಿಸಿದರು.

# ಕೃಷಿ ಅಭಿವೃದ್ಧಿಯಾದರೆ ದೇಶ ಅಭಿವೃದ್ಧಿಯಾಗುತ್ತದೆ– ಸಿಇಓ ವರ್ಣಿತ್ ನೇಗಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಕೃಷಿ ಅಭಿವೃದ್ಧಿಯಾದರೆ ದೇಶದ ಅಭಿವೃದ್ಧಿಯಾಗುತ್ತದೆ ಹಾಗಾಗಿ ಕೃಷಿ ಪರಿಕರ ಮಾರಾಟಗಾರರಾದ ತಾವೇ ರೈತರ ಸಂಪೂರ್ಕದಲ್ಲಿ ಹೆಚ್ಚಾಗಿ ಇರುವುದರಿಂದ ತರಬೇತಿ ಅವಧಿಯಲ್ಲಿ ತಾವು ಕಲಿತ ವಿಷಯಗಳ ಮಾಹಿತಿಯನ್ನು ರೈತರಿಗೆ ಸರಿಯಾಗಿ ತಿಳಿಸಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಹೇಳಿದರು.

ಅವರು ಬುಧವಾರ ಕೊಪ್ಪಳ ಜಿಲ್ಲಾ ಪಂಚಾಯತ್ ಜೆ. ಪಟೇಲ್ ಸಭಾಂಗಣದಲ್ಲಿ ಮ್ಯಾನೇಜ ಹೈದ್ರಾಬಾದ್ ಸಮೇತಿ (ಉತ್ತರ) ಕೃಷಿ ವಿಶ್ವವಿದ್ಯಾಲಯ ಧಾರವಾಡ. ಕೃಷಿ ಇಲಾಖೆ ಕೊಪ್ಪಳ. ಕೃಷಿ ತಂತ್ರಜ್ಞರ ಸಂಸ್ಥೆ ಕೊಪ್ಪಳ ಮತ್ತು ಜಿಲ್ಲಾ ಕೃಷಿ ತರಬೇತಿ ಕೇಂದ್ರ ಗಂಗಾವತಿ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಕೃಷಿ ಪರಿಕರ ಮಾರಾಟಗಾರರಿಗೆ ಕೃಷಿ ವಿಸ್ತಾರಣಾ ಸೇವೆಗಳ ಡಿಪ್ಲೊಮಾ ಕೋರ್ಸ್ ಪ್ರಮಾಣ ಪತ್ರ ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ರೈತರು ಕೃಷಿ ವಿಜ್ಞಾನಿಗಳು ಹಾಗೂ ಕೃಷಿ ಅಧಿಕಾರಿಗಳಲ್ಲಿ ಬಂದು ಮಾಹಿತಿ ಕೇಳುವುದಕ್ಕಿಂತ ಹೆಚ್ಚಾಗಿ ಕೃಷಿ ಪರಿಕರಗಳ ಮಾರಾಟಗಾರರಿಂದಲೆ ಅವರು ಮಾಹಿತಿ ಪಡೆಯುತ್ತಾರೆ ಆದ್ದರಿಂದ ಅವರಿಗೆ ಎಷ್ಟು ಪ್ರಮಾಣದಲ್ಲಿ ಹೊಲಗಳಿಗೆ ಬೀಜ. ಗೊಬ್ಬರ ಹಾಗೂ ಕೀಟನಾಶಕಗಳನ್ನು ಉಪಯೋಗಿಸಬೇಕು ಎನ್ನುವ ಕುರಿತು ಸರಿಯಾದ ಮಾಹಿತಿ ನೀಡಬೇಕು ಎಂದು ಹೇಳಿದರು.

ಪ್ರಾಧ್ಯಾಪಕರು ಹಾಗೂ ರಾಜ್ಯ ನೋಡಲ್ ಅಧಿಕಾರಿಗಳು ಸಮೇತಿ ಉತ್ತರ. ಕೃಷಿ ವಿಶ್ವವಿದ್ಯಾಲಯ ಧಾರವಾಡದ ಡಾ. ಎಸ್. ಎನ್. ಜಾಧವ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ 2025– 26 ನೇ ಸಾಲಿನಲ್ಲಿ ಉತ್ತರ ಕರ್ನಾಟಕದ 14 ಜಿಲ್ಲೆಗಳಲ್ಲಿ ದೇಶಿ ಪ್ರಮಾಣ ಪತ್ರಗಳನ್ನು ಕೊಡುವ ಕೆಲಸ ಮಾಡಿದ್ದೆವೆ. ಈ ತರಬೇತಿ ಅವಧಿಯಲ್ಲಿ ಕೃಷಿ. ತೋಟಗಾರಿಕೆ ಸೇರಿದಂತೆ ಇತರೆ ಸಮಗ್ರ ಬೆಳೆಗಳ ಮಾಹಿತಿ ತಾವೆಲ್ಲರೂ ಪಡೆದಿದ್ದಿರಿ. ಪ್ರಮಾಣ ಪತ್ರ ಪಡೆದ ನಂತರ ತಮ್ಮ ಜವಾಬ್ದಾರಿ ಇನ್ನೂ ಹೆಚ್ಚಾಗಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರದ ಯೋಜನೆಗಳನ್ನು ರೈತರಿಗೆ ಮುಟ್ಟಿಸುವ ಕೆಲಸ ತಾವು ಮಾಡಬೇಕೆಂದು ಹೇಳಿದರು.

ವಿಸ್ತಾರಣಾ ನಿರ್ದೇಶಕರು ಮತ್ತು ನಿರ್ದೇಶಕರು ಸಮೇತಿ ಉತ್ತರ ಕೃಷಿ ವಿಶ್ವವಿದ್ಯಾಲಯ ಧಾರವಾಡದ ಡಾ. ಎಂ.ವಿ ಮಂಜುನಾಥ ಅವರು ಮಾತನಾಡಿ, 48 ವಾರಗಳ ದೇಶಿ ತರಬೇತಿ ಕಾರ್ಯಕ್ರಮ ಯಶಸ್ವಿಯಾಗಿ ಪೂರೈಸಿ ಪ್ರಮಾಣ ಪತ್ರ ಪಡೆಯುತ್ತಿದ್ದಿರಾ ತರಬೇತಿ ಅವಧಿಯಲ್ಲಿ ಮಣ್ಣಿನ ಫಲವತ್ತತೆ. ಸಮಗ್ರ ಕೃಷಿ ಪದ್ಧತಿ ಜಾನುವಾರುಗಳು. ತೋಟಗಾರಿಕೆ ಬೆಳೆಗಳು. ಹನಿ ನೀರಾವರಿ ಸೇರಿದಂತೆ ಇತರೆ ಹಲವಾರು ಮಾಹಿತಿಗಳನ್ನು ತಮಗೆ ನೀಡಲಾಗಿದೆ. ರೈತರಿಗೆ ಉತ್ತಮ ಗುಣಮಟ್ಟದ ಪರಿಕರಗಳನ್ನು ನೀಡುವುದರ ಜೊತೆಗೆ ಅವರ ಸಮಸ್ಯೆಗಳನ್ನು ಆಲಿಸಿ ಗೊತ್ತಾದರೆ ಅವರಿಗೆ ಸರಿಯಾದ ಮಾಹಿತಿ ನೀಡಿ ಒಳ್ಳೆಯ ಹೆಸರು ತರುವ ಕೆಲಸ ಮಾಡಬೇಕೆಂದು ಹೇಳಿದರು.

ಕೃಷಿ ತಂತ್ರಜ್ಞರ ಸಂಸ್ಥೆ ಕೊಪ್ಪಳ ಉಪಾಧ್ಯಕ್ಷರಾದ ವೀರಣ್ಣ ಕಮತರ ಮಾತನಾಡಿ, ಕೃಷಿ ಇಲಾಖೆ, ವಿಶ್ವವಿದ್ಯಾಲಯ ರೈತರ ಕೊಂಡಿಯಾಗಿ ಕೆಲಸ ನಿರ್ವಹಿಸಲು ಈ ಅದ್ದೂರಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸತತ 4 ವರ್ಷಗಳ ಬಿಎಸ್ಸಿಯಲ್ಲಿ ಕಲಿತ ವಿಷಯಗಳನ್ನು ತಮಗೆ 48 ವಾರಗಳಲ್ಲಿ ಉಣಬಡಿಸಲಾಗಿದೆ. ರೈತರ ನೆಮ್ಮದಿ ಜೀವನಕ್ಕೆ ನಮ್ಮೆಲ್ಲರ ಚಿಂತನೆ ಇರಬೇಕು. ಪ್ಯಾರಾ ವಿಸ್ತರಣಾ ವೃತ್ತಿಪರರು ಎಂದು ತಮಗೆ ಪ್ರಮಾಣ ಪತ್ರ ನೀಡಲಾಗುತ್ತಿದೆ. ರೈತರ ಜೊತೆಗೆ ತಮ್ಮೆಲ್ಲರ ಜವಾಬ್ದಾರಿ ಅತ್ಯಮೂಲ್ಯವಾಗಿದೆ ಎಂದು ಹೇಳಿದರು.

ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಹಾಗೂ ಅಧ್ಯಕ್ಷರು ಕೃಷಿ ತಂತ್ರಜ್ಞರ ಸಂಸ್ಥೆ ಕೊಪ್ಪಳದ ಟಿ.ಎಸ್. ರುದ್ರೇಶಪ್ಪ ಅವರು ಮಾತನಾಡಿ, ಮ್ಯಾನೇಜ ಸಂಸ್ಥೆ ಗ್ರಾಮೀಣ ಅಭಿವೃದ್ಧಿ, ಬ್ಯಾಂಕಿಂಗ್, ಕೃಷಿಗೆ ತರಬೇತಿ ನೀಡುವ ದೇಶದ ಅತಿದೊಡ್ಡ ಸಂಸ್ಥೆಯಾಗಿದೆ ಕೃಷಿ ಪರಿಕರಗಳ ಮಾರಾಟಗಾರರಿಗೆ 48 ದಿನಗಳಲ್ಲಿ 2 ಬ್ಯಾಚಗಳಿಗೆ ತರಬೇತಿ ನೀಡಲಾಗಿದೆ. ತಾವು ರೈತರು ಹಾಗೂ ಇಲಾಖೆಯ ಕೊಂಡಿಯಾಗಿ ಕೆಲಸ ಮಾಡಬೇಕು. ಕೃಷಿಯಲ್ಲಿ ತಮ್ಮ ಸೇವೆ ಅತ್ಯವಶ್ಯಕವಾಗಿದೆ. ಜಿಲ್ಲೆಯಲ್ಲಿ ತಮ್ಮ ಮೂಲಕ ರೈತರಿಗೆ ರಸಗೊಬ್ಬರ, ಬೀಜ, ಕೀಟನಾಶಕಗಳ ನಿರ್ವಹಣೆ ಕುರಿತು ಸರಿಯಾದ ಮಾಹಿತಿ ರೈತರಿಗೆ ಸಿಕ್ಕರೆ ತಮಗೂ ಒಳ್ಳೆಯ ಹೆಸರು ಬರುತ್ತದೆ ಎಂದು ಹೇಳಿದರು.

48 ದಿನಗಳ ತರಬೇತಿ ಪಡೆದ 80 ಕೃಷಿ ಪರಿಕರಗಳ ಮಾರಾಟಗಾರರಿಗೆ ಪ್ರಮಾಣ ಪತ್ರಗಳನ್ನು ನೀಡಿ. ಪ್ರಮಾಣ ವಚನ ಬೋಧಿಸಲಾಯಿತು.

ಕಾರ್ಯಕ್ರಮದಲ್ಲಿ ಕೃಷಿ ಇಲಾಖೆ ಉಪನಿರ್ದೇಶಕರಾದ ಸಿದ್ದೇಶ್ವರ ಎಲ್., ಮೀನುಗಾರಿಕೆ ಇಲಾಖೆಯ ಉಪನಿರ್ದೇಶಕರಾದ ಡಾ. ಶ್ರೀ ನಿವಾಸ ಕುಲಕರ್ಣಿ, ಕೃಷಿ ತರಬೇತಿ ಕೇಂದ್ರ ಗಂಗಾವತಿ ಸಹಾಯಕ ಕೃಷಿ ನಿರ್ದೇಶಕರಾದ ಡಾ. ಚಂದ್ರಕಾಂತ ನಾಡಗೌಡ, ಫೆಸಿಲಿಟೇಟರ್ ಜಂಬಣ್ಣ ಐಲಿ, ಮಹೇಶ್ವರ ಶಾಸ್ತ್ರಿ ಹಾಗೂ ಕೃಷಿ ಪರಿಕರ ಮಾರಾಟಗಾರರು ಸೇರಿದಂತೆ ಕೃಷಿ ಇಲಾಖೆಯ ಇತರೆ ಅಧಿಕಾರಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಜುಲೈ.18 ರಂದು ಲೋಕಾಯುಕ್ತ ಅಹವಾಲು ಸಭೆ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಜುಲೈ.16–ಕರ್ನಾಟಕ ಲೋಕಾಯುಕ್ತ ಬೀದರ ಪೊಲೀಸ್ ಠಾಣೆ ವತಿಯಿಂದ ಜುಲೈ.18 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಹುಮನಾಬಾದ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಹಾಗೂ ಮಧ್ಯಾಹ್ನ 2 ಗಂಟೆಯಿಂದ 4 ಗಂಟೆಯವರೆಗೆ ಚಿಟಗುಪ್ಪಾ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸಾರ್ವಜನಿಕ ಕುಂದು ಕೊರತೆ/ಅಹವಾಲು ಸಭೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ಬೀದರ ಪೊಲೀಸ್ ಇನ್ಸಪೇಕ್ಟರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾರಣ ಸಾರ್ವಜನಿಕರು ತಮಗೆ ಆಗಬೇಕಾದ ಕೆಲಸಗಳಲ್ಲಿ ವಿಳಂಭ ಮಾಡುತ್ತಿದ್ದರೆ ಅಥವಾ ಅಧಿಕಾರಿಗಳು ನ್ಯಾಯ ಸಮ್ಮತವಾಗಿ ಮಾಡಿಕೊಡಬೇಕಾದ ಕೆಲಸಗಳಲ್ಲಿ ತೊಂದರೆ ಕೊಡುತ್ತಿದ್ದರೆ ಸಭೆಯಲ್ಲಿ ತಮ್ಮ ಕುಂದು ಕೊರತೆಗಳನ್ನು ನೇರವಾಗಿ ಬಂದು ಸಲ್ಲಿಸಲು ಅಥವಾ ಸ್ಥಳದಲ್ಲಿಯೇ ದೂರು ಅರ್ಜಿ ಫಾರಂ ನಂ. 1 ಮತ್ತು 2 ತೆಗೆದುಕೊಂಡು ದೂರು ನೀಡಲು ಅನುಕೂಲ ಕಲ್ಪಿಸಲಾಗಿದೆ, ಸಾರ್ವಜನಿಕರು ಇದರ ಸದುಇಪಯೋಗ ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಪೊಲೀಸ್ ಉಪಾಧೀಕ್ಷಕರು, ಕರ್ನಾಟಕ ಲೋಕಾಯುಕ್ತ ಬೀದರ ಮೊಬೈಲ್ ಸಂಖ್ಯೆ:9364062571, ಪೊಲೀಸ್ ನಿರೀಕ್ಷಕರು–2 ಕರ್ನಾಟಕ ಲೋಕಾಯುಕ್ತ ಬೀದರ ಮೊಬೈಲ್ ಸಂಖ್ಯೆ: 9364062675 ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಜೀವ ರಕ್ಷಣೆಗೆ ಪ್ರಥಮ ಚಿಕಿತ್ಸೆ ಅಗತ್ಯ: ಎಂ ಎ ಶಕೀಬ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.16–ಜೀವಗಳನ್ನು ಉಳಿಸಲು, ಅನಾರೋಗ್ಯವನ್ನು ತಡೆಗಟ್ಟಲು ಹಾಗೂ ವೃತ್ತಿಪರ ವೈದ್ಯಕೀಯ ಸಹಾಯ ಉತ್ತೇಜಿಸಲು ಪ್ರಥಮ ಚಿಕಿತ್ಸೆ ನಿರ್ಣಾಯಕವಾಗಿದೆ ಎಂದು ಭಾರತೀಯ ರೆಡ್ ಕ್ರಾಸ್‌ನ ಜಿಲ್ಲಾ ಶಾಖೆಯ ಎಂ.ಎ ಶಕೀಬ್ ಅವರು ಹೇಳಿದರು.

ವಿದ್ಯಾರ್ಥಿ ಕಲ್ಯಾಣ ಘಟಕ ಹಾಗೂ ವಿವಿಯ ಪ್ರಾಣಿಶಾಸ್ತ್ರ ಅಧ್ಯಯನ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಜೀವ ವಿಜ್ಞಾನ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ "ಪ್ರಥಮ ಚಿಕಿತ್ಸಾ ಕಾರ್ಯಕ್ರಮ"ವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರಥಮ ಚಿಕಿತ್ಸೆಯು ಆರೋಗ್ಯ ಕಾಪಾಡುವಲ್ಲಿ ಬಹಳ ಪ್ರಮುಖವಾಗಿದೆ. ಆಕಸ್ಮಿಕವಾಗಿ ಕಾಯಿಲೆಗಳು ಅಥವಾ ಗಾಯಗಳಿಗೆ ತಕ್ಷಣದ ಸಹಾಯದ ಮಹತ್ವ ತಿಳಿಯಬೇಕು. ಇದರಿಂದ ತುರ್ತು ಪರಿಸ್ಥಿತಿಯನ್ನು ಹತೋಟಿಗೆ ತರಬಹುದು ಎಂದು ಹೇಳಿದರು.

ವಿಜಯನಗರ ಶ್ರೀಕೃಷ್ಣದೇವರಾಯ ವಿವಿಯ ಕುಲಪತಿಗಳಾದ ಪ್ರೊ. ಎಂ ಮುನಿರಾಜು ಮಾತನಾಡಿ, ವಿದ್ಯಾರ್ಥಿಗಳು ರಕ್ತ ನೀಡುವುದರಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬಹುದು. ನಿರ್ದಿಷ್ಟ ಪರಿಸ್ಥಿತಿಯನ್ನು ಆಧರಿಸಿ ಪ್ರಥಮ ಚಿಕಿತ್ಸೆಯನ್ನು ನೀಡಬೇಕು. ವೈದ್ಯಕೀಯ ತುರ್ತು ಸಂದರ್ಭಗಳಲ್ಲಿ ಪರಿಣಾಮಕಾರಿಯಾಗಿ ಪ್ರತಿಕ್ರಿಯಿಸಲು ಪ್ರತಿಯೊಬ್ಬರು ಪ್ರಥಮ ಚಿಕಿತ್ಸೆಯ ಜ್ಞಾನ ಹೊಂದಿರಬೇಕು ಎಂದು ತಿಳಿಸಿದರು.

ವಿವಿಯ ಕುಲಸಚಿವರಾದ ನಾಗರಾಜು.ಸಿ ಮಾತನಾಡಿ, ವಿದ್ಯಾರ್ಥಿಗಳು ಪ್ರಥಮ ಚಿಕಿತ್ಸೆಯ ವಿವಿಧ ಆಯಾಮಗಳನ್ನು ಕಲಿತುಕೊಂಡು ಬೇರೆಯವರಿಗೂ ಕಲಿಸುವ ಕಾರ್ಯವನ್ನು ಮಾಡಬೇಕಾಗಿದೆ. ಪ್ರಥಮ ಚಿಕಿತ್ಸೆಯ ಮಹತ್ವದ ಕುರಿತು ವಿದ್ಯಾರ್ಥಿಗಳಿಗೆ ವಿವರಿಸಿದರು.

ವಿದ್ಯಾರ್ಥಿ ಕಲ್ಯಾಣ ಘಟಕ ನಿರ್ದೇಶಕ ಡಾ.ಶಶಿಕಾಂತ ಎಚ್ ಮಜಗಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಬೋಧಕರು, ಸಂಶೋಧನಾ ವಿದ್ಯಾರ್ಥಿಗಳು ಸೇರಿದಂತೆ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಒಪೆಕ್ ಆಸ್ಪತ್ರೆಗೆ ಜಿಲ್ಲಾಧಿಕಾರಿಗಳ ಭೇಟಿ; ಕಾಮಗಾರಿ, ಸೌಲಭ್ಯಗಳ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರ ಜುಲೈ 16–ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ರಾಯಚೂರ ವೈದ್ಯಕೀಯ ವಿಜ್ಞಾನ ಸಂಸ್ಥೆಗಳ ಅಧೀನದಲ್ಲಿರುವ ನಗರದಲ್ಲಿನ ರಾಜೀವ್‌ಗಾಂಧಿ ಸೂಪರ್ ಸ್ಪೇಷಾಲಿಟಿ (ಓಪೆಕ್) ಆಸ್ಪತ್ರೆಗೆ ಜುಲೈ 16ರಂದು ಭೇಟಿ ನೀಡಿದರು.

ಇದೆ ವೇಳೆ ಜಿಲ್ಲಾಧಿಕಾರಿಗಳು, ನಿರ್ಮಾಣ ಹಂತದಲ್ಲಿರುವ ಟ್ರಾಮಾ ಕೇರ್ ಸೆಂಟರ್ ಗೆ ಭೇಟಿ ನೀಡಿ ಪರಿಶೀಲಿಸಿದರು. ಕಾಮಗಾರಿಯಲ್ಲಿ ಗುಣಮಟ್ಟ ಕಾಯ್ದುಕೊಂಡು ಕಟ್ಟಡ ನಿರ್ಮಾಣ ಕಾರ್ಯವನ್ನು ವೇಗಗೊಳಿಸಬೇಕು ಎಂದು ನಿರ್ದೇಶನ ನೀಡಿದರು. ಆಸ್ಪತ್ರೆಯಲ್ಲಿನ ಸೌಕರ್ಯಗಳ ಬಗ್ಗೆ ವಿಶೇಷ ತಜ್ಞ ವೈದ್ಯರ ಜೊತೆಗೆ ಜಿಲ್ಲಾಧಿಕಾರಿಳು ಇದೆ ವೇಳೆ ಚರ್ಚೆ ನಡೆಸಿದರು.

ಇಲ್ಲಿಗೆ ಬರುವ ರೋಗಿಗಳಿಗೆ ಗುಣಮಟ್ಟದ ರೀತಿಯಲ್ಲಿ ಚಿಕಿತ್ಸೆ ಸಿಗಬೇಕು. ಜನರಿಗೆ ಎಲ್ಲಾ ರೀತಿಯಲ್ಲಿ ಅನುಕೂಲವಾಗುವ ಹಾಗೆ ಹೊಸ ವಿಭಾಗಗಳನ್ನು ಸಹ ಆರಂಭಿಸಲು ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಕಾರ್ಡಿಯಾಲಜಿ ವಿಭಾಗ ಬಲಪಡಿಸಿ: ಇದೀಗ ಹೃದಯ ಸಂಬಂಧಿ ಕಾಯಿಲೆಗಳು ಹೆಚ್ಚುತ್ತಿವೆ. ಹೀಗಾಗಿ ಜನತೆಗೆ ಸಕಾಲಕ್ಕೆ ಚಿಕಿತ್ಸೆ ದೊರೆಯುವಂತೆ ಓಪೆಕ್ ಆಸ್ಪತ್ರೆಯಲ್ಲಿನ ಕಾರ್ಡಿಯಾಲಜಿ ವಿಭಾಗವನ್ನು ಬೇಗನೇ ಬಲಪಡಿಸಲು ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಕಾರ್ಡಿಯಾಲಜಿ ವಿಭಾಗದ ಡಾ.ಗೋಪಿನಾಥ ಅವರಿಗೆ ಸೂಚನೆ ನೀಡಿದರು.

ಪ್ರಚಾರ ನಡೆಸಿ: ಒಪೆಕ್ ಆಸ್ಪತ್ರೆಯಲ್ಲಿ ಉತ್ತಮವಾದ ವೈದ್ಯಕೀಯ ಚಿಕಿತ್ಸೆ ಸಿಗುತ್ತಿದೆ ಎಂಬುದರ ಬಗ್ಗೆ ಜನತೆಗೆ ಮಾಹಿತಿ ರವಾನೆಯಾಗಬೇಕು. ಈ ಬಗ್ಗೆ ವ್ಯಾಪಕ ಪ್ರಚಾರ ನೀಡಬೇಕು. ರೋಗಿಗಳಿಗೆ ಹೆಚ್ಚಿನ ಚಿಕಿತ್ಸೆ ಅಗತ್ಯವಿದ್ದ ಸಂದರ್ಭದಲ್ಲಿ ಸರ್ಕಾರಿ ಅಥವಾ ಖಾಸಗಿ ವೈದ್ಯರು ರೋಗಿಯನ್ನು ಒಪೆಕ್ ಆಸ್ಪತ್ರೆಗೆ ಹೋಗುವಂತೆ ಸಲಹೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಸಲಹೆ ಮಾಡಿದರು.

ಗಾರ್ಡನ್ ಸರಿಪಡಿಸಿ: ವೈದ್ಯಾಧಿಕಾರಿಗಳೊಂದಿಗೆ ಚರ್ಚೆ ನಡೆಸಿದ ಬಳಿಕ ಜಿಲ್ಲಾಧಿಕಾರಿಗಳು, ಆಸ್ಪತ್ರೆಯ ಹೊರಾಂಗಣದಲ್ಲಿ ಸಂಚರಿಸಿ ಆಸ್ಪತ್ರೆಯ ಗಾರ್ಡನ್ ವೀಕ್ಷಣೆ ನಡೆಸಿದರು. ಆಸ್ಪತ್ರೆಗೆ ಬರುವ ರೋಗಿಗಳಿಗೆ ವಿಶ್ರಾಂತಿಗೆ ಅನುಕೂಲವಾಗುವಂತೆ ಕೂಡಲು ಅಲ್ಲಲ್ಲಿ ಸಿಮೆಂಟ್ ಬೆಂಚ್ ಅಳವಡಿಸಿ ಉದ್ಯಾನವನವನ್ನು ಅಚ್ಚುಕಟ್ಟಾಗಿ ನಿರ್ಮಿಸಿ ನಿರ್ವಹಣೆ ಮಾಡಲು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಒಪೆಕ್ ಆಸ್ಪತ್ರೆಯ ನಿರ್ದೇಶಕರಾದ ಡಾ.ರಮೇಶ ಬಿ ಎಚ್, ವಿಶೇಷ ಅಧಿಕಾರಿ ಡಾ.ರಮೇಶ ಸಿ ಸಾಗರ, ಒಪೆಕ್ ಆಸ್ಪತ್ರೆಯ ಮುಖ್ಯ ಆಡಳಿತಾಧಿಕಾರಿ ನೀಲಪ್ರಭಾ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕರಾದ ವಿಜಯಶಂಕರ ಸೇರಿದಂತೆ ಇತರರು ಇದ್ದರು.

# ಮನೆ ಮನೆ ಸಮೀಕ್ಷೆ ಕಾರ್ಯನಿರ್ವಹಿಸಿದ ಗೌರವ ಧನ ಶಿಕ್ಷಕರ ಖಾತೆಗೆ ಶೀಘ್ರದಲ್ಲಿ ಮಂಜೂರ ಮಾಡಿ:ಕ.ರಾ.ಪ್ರಾ.ಶಾ.ತಿ ಸಂಘ ಆಗ್ರಹ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು :ತಾಲೂಕಿನ ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ–2025 ಸಮೀಕ್ಷೆ ಕಾರ್ಯದಲ್ಲಿ ಬೇಸಿಗೆ ರಜೆಯಲ್ಲಿ ದಿನಾಂಕ:–05–05–2025 ರಿಂದ 28–05–2025 ರವರೆಗೆ ಪ್ರಾಥಮಿಕ ಶಾಲಾ ಶಿಕ್ಷಕರು ಪ್ರೌಢ ಶಾಲಾ ಸಹ ಶಿಕ್ಷಕರು ಹಾಗೂ ಪ್ರೌಢ ಶಾಲಾ ಮುಖ್ಯ ಗುರುಗಳು ಗಣಿತಿದಾರರಾಗಿ ಮತ್ತು ಮೇಲ್ವಿಚಾರಕಾರಾಗಿ ಮನೆ–ಮನೆ ಸಮೀಕ್ಷಾ ಕರ್ತವ್ಯವನ್ನು ಯಶಸ್ವಿಗೋಳಿಸಿರುತ್ತಾರೆ.ಕೆ.ಸಿ.ಎಸ್. ಆರ್.ನಿಯಾಮನುಸಾರ ಬೇಸಿಗೆ ರಜೆಯಲ್ಲಿ ಕರ್ತವ್ಯ ನಿರ್ವಹಿಸಿದ್ದಕ್ಕಾಗಿ ಗಳಿಕೆ ರಜೆಗಳ ಸೌಲಭ್ಯ ಹಾಗೂ ನಿಯಮಾನುಸಾರ ನಿಗದಿ ಪಡಿಸಿರುವ ಸೂಕ್ತ ಗೌರವ ಧನ ಸಂಭಾವನೆಯನ್ನು ಶಿಕ್ಷಕರ ಖಾತೆಗೆ ಶೀಘ್ರದಲ್ಲಿ ಮಂಜೂರು ಮಾಡಬೇಕೆಂದು ಕ.ರಾ.ಪ್ರಾ.ಶಾ.ತಿ ಸಂಘ ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಪ್ರಭು ಲಿಂಗ ಗುದ್ದಿ, ಬಸಪ್ಪ ಹಂದ್ರಾಳ, ಗುರು ಸಂಗಯ್ಯ, ಹಾಜಿ ಬಾಬು ಕಲ್ಯಾಣಿ, ಚಿದಾನಂದ,ನಾಗಪ್ಪ ಮಲ್ಲಪ್ಪ , ಶೋಭಾ, ಅರ್ಚನಾ ಸೇರಿದಂತೆ ಉಪಸ್ಥಿತರಿದ್ದರು.

# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ: ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.16–ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 2ಬಿ, 3ಎ, 3ಬಿ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಕ್ಕೆ ಸೇರಿದ ಸಾಮಾನ್ಯ ಪದವಿ ಕೋರ್ಸಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ 2025–26ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿಯು ಪ್ರವರ್ಗ–1, ಎಸ್.ಸಿ ಮತ್ತು ಎಸ್.ಟಿ ಗೆ ರೂ.2.50 ಲಕ್ಷ ಹಾಗೂ ಪ್ರವರ್ಗ–2ಎ, 2ಬಿ, 3ಎ, 3ಬಿಗೆ ರೂ.1 ಲಕ್ಷ ಒಳಗಿರಬೇಕು.


ವಿದ್ಯಾರ್ಥಿಗಳು ವೆಬ್‌ಸೈಟ್ ಿಣಣಠಿ://ಿ.ಇಚಿಡಿಟಿಚಿ–ಣಚಿಇಚಿ.ರಠಡಿ.ಟಿ ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ ಿಣಣಠಿ:// ಛಿತಿಜ.ಇಚಿಡಿಟಿಚಿಣಚಿಇಚಿ.ರಠಡಿ.ಟಿ ನ್ನು ನೋಡಬಹುದು.

ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwd-helpline@gmail.comಗೆ ಇ–ಮೇಲ್ ಮುಖಾಂತರ ಅಥವಾ ಜಿಲ್ಲಾ, ತಾಲ್ಲೂಕು ಅಧಿಕಾರಿ ಕಚೇರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದು.

ಅರ್ಜಿ ಸಲ್ಲಿಸಲು ಆಗಸ್ಟ್ 14 ಕೊನೆಯ ದಿನವಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ನಗರದ ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಹತ್ತಿರದ ಡಿ.ದೇವರಾಜು ಅರಸು ಭವನದ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಚೇರಿ ಅಥವಾ ಸಹಾಯವಾಣಿ ಸಂಖ್ಯೆ 8050770004, 8050770005 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿಎಂ ಬಲ್ಡೋಟಾ ವಿಸ್ತೀರ್ಣ ರದ್ದು ಮಾಡಿದರೆ ಸಾರ್ವಜನಿಕವಾಗಿ ಸಿಎಂ ಜನ್ಮದಿನಾಚರಣೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ರಾಜ್ಯ ರಾಜಧಾನಿಯ ಹತ್ತಿರದ ದೇವನಹಳ್ಳಿ ಭೂ ಹೋರಾಟಕ್ಕೆ ಐತಿಹಾಸಿಕ ಜಯ ಲಭಿಸಿದ್ದಕ್ಕೆ ಇಲ್ಲಿನ ಅಶೋಕ ವೃತ್ತದಲ್ಲಿ ಕಾರ್ಖಾನೆ ವಿರೋಧಿ ಹೋರಾಟಗಾರರು, ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ, ಪರಿಸರ ಹಿತರಕ್ಷಣಾ ವೇದಿಕೆ ಸದಸ್ಯರು ವಿಜಯೋತ್ಸವ ಆಚರಿಸಿ, ಸಿಹಿ ಹಂಚಿ ಸಂಭ್ರಮಿಸಿದರು.

ಈ ವೇಳೆ ಮಾತನಾಡಿದ ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಸಮಿತಿ ಪ್ರಧಾನ ಸಂಚಾಲಕ ಪ್ರೊ. ಅಲ್ಲಮಪ್ರಭು ಬೆಟ್ಟದೂರು, ಸುಮಾರು 1198 ದಿನಗಳ ಸುಧೀರ್ಘ ಹೋರಾಟದ ನಂತರ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ರೈತಪರ ಎಂಬ ಸಂದೇಶ ನೀಡಿದ್ದು 1777 ಎಕರೆ ಭೂಮಿಯ ಸ್ವಾಧೀನ ಕೈಬಿಟ್ಟಿರುವದು ಸ್ವಾಗತಾರ್ಹ. ಅದರಂತೆ ಕೊಪ್ಪಳ ಸೇರಿದಂತೆ ರಾಜ್ಯದ ನಾನಾ ಕಡೆಗಳಲ್ಲಿ ಕಾರ್ಖಾನೆ, ಅಭಿವೃದ್ಧಿ ಹೆಸರಲ್ಲಿ ರೈತರನ್ನು ಒಕ್ಕಲೆಬ್ಬಿಸುವ ಕೆಲಸ ಮಾಡುತ್ತಿರುವದು ಸಹ ಕೈಬಿಡಬೇಕು. ಕೃಷಿ ಭೂಮಿ ಉಳಿಯಬೇಕು, ಭೂ ಸುಧಾರಣೆ ಕಾಯ್ದೆ ತಿದ್ದುಪಡಿ ತೆಗೆಯಬೇಕು. ದೇವನಹಳ್ಳಿ ಮಾದರಿಯಲ್ಲಿ ಕೊಪ್ಪಳ ನಗರಕ್ಕೆ ಹೊಂದಿಕೊಂಡು ಮೋಸದಿಂದ ಬಂದಿರುವ ಹೆಸರು ಬದಲಿಸಿಕೊಂಡು ಉರಿಯುತ್ತಿರುವ ಬಲ್ಡೋಟಾದ ಬಿಎಸ್‌ಪಿಎಲ್ ಕಾರ್ಖಾನೆ ಸೇರಿದಂತೆ ಜನರಿಗೆ ಮಾರಕವಾಗಿರುವ ಎಲ್ಲಾ ಕಂಪನಿಗಳನ್ನು ಕೊಪ್ಪಳ ಬಿಟ್ಟು ತೊಲಗಿಸಬೇಕು ಎಂದು ಮನವಿ ಮಾಡಿದರು.

ಮುಖಂಡರಾದ ಮಂಜುನಾಥ ಜಿ. ಗೊಂಡಬಾಳ ಮಾತನಾಡಿ, ಬರುವ ಆಗಷ್ಟ್ 4 ರಂದು ನಗರಕ್ಕೆ ಸಿದ್ದರಾಮಯ್ಯನವರು ಆಗಮಿಸುತ್ತಿದ್ದು ಅಂದು ಅವರು ಬಲ್ಡೋಟಾ ಹಾಗೂ ಕಿರ್ಲೋಸ್ಕರ್ ವಿಸ್ತೀರ್ಣಕ್ಕೆ ನೀಡಿರುವ ಅನುಮತಿಯನ್ನು ಅಧಿಕೃತವಾಗಿ ರದ್ದುಗೊಳಿಸಿ ಆದೇಶ ನೀಡಿದರೆ ಅವರ ಜನ್ಮದಿನವನ್ನು ಇಲ್ಲಿನ ಜನರೇ ದೊಡ್ಡಮಟ್ಟದಲ್ಲಿ ಅತ್ಯಂತ ಸಡಗರದಿಂದ ಆಚರಿಸುತ್ತಾರೆ. ಇನ್ನು ದೇವನಹಳ್ಳಿಯ ಹೋರಾಟ ರಾಜ್ಯಕ್ಕೆ ಮಾದರಿಯಾಗಿದ್ದು, 12 ವರ್ಷ ಇಲ್ಲದ ಕಾಳಜಿ ಮತ್ತು ಪ್ರೀತಿ ಕಾರ್ಖಾನೆಗಳಿಗೆ ಈಗ ಉಕ್ಕಿ ಹರಿಯುತ್ತಿದೆ, ಅವರ ಆಸೆ ಆಮಿಷಗಳಿಗೆ ಜನ ಬಲಿಯಾಗುವದಿಲ್ಲ, ಅವರ ವಿರುದ್ಧ ಹೋರಾಟ ಇನ್ನಷ್ಟು ತೀವ್ರಗೊಳ್ಳುತ್ತದೆ, ಕಾರ್ಖಾನೆಗಳ ಕಪಟ ಪರಿಸರ ಪ್ರೇಮ ನಮಗೆ ಗೊತ್ತಿದೆ ಎಂದರು.

ಚಳುವಳಿ ಮುಖಂಡ ಬಸವರಾಜ ಶೀಲವಂತರ ಮಾತನಾಡಿ, ಸಿದ್ದರಾಮಯ್ಯ ಅವರ ದೇವನಹಳ್ಳಿ ಭೂಮಿ ರೈತರಿಗೆ ಬಿಡುವ ನಿರ್ಣಯವನ್ನು ಸ್ವಾಗತಿಸುತ್ತೇವೆ, ಅದೇ ರೀತಿ ನಮ್ಮಲ್ಲೂ ಮಾಡಲಿ, ಕಾರ್ಖಾನೆ ವಿರೋಧಿ ಹೋರಾಟಗಾರರ ಮನವಿ ಆಲಿಸಿ, ಕೊಪ್ಪಳಕ್ಕೆ ಬರುವ ಮುನ್ನವೇ ಕಾರ್ಖಾನೆ ರದ್ದುಗೊಳಿಸಿದ ಬಗ್ಗೆ ಆದೇಶ ನೀಡಿ ಬರಲಿ ಎಂದರು. ಸಂಘಟಕರಾದ ಕೆ. ಬಿ. ಗೋನಾಳ, ಮಹಾಂತೇಶ ಕೊತಬಾಳ, ಶರಣು ಗಡ್ಡಿ, ಭೀಮಸೇನ ಕಲಕೇರಿ, ತಿಪ್ಪಯ್ಯಸ್ವಾಮಿ ಹೊಲಗೇರಿ, ಕನಕಪ್ಪ ಪೂಜಾರ, ಬಂದೇನವಾಜ್ ಮಣಿಯಾರ, ಗಾಳೆಪ್ಪ ಮುಂಗೋಲಿ, ಕಾಶಿಮ್ ಸರ್ದಾರ, ನಾಗರಾಜ್ ಜಿ., ಮಕ್ಬೂಲ್ ರಾಯಚೂರು, ಪರಶುರಾಮ ವಣಗೇರಿ ಇಂದರಗಿ, ಮುತ್ತುರಾಜ್ ಹಡಪದ, ಗವಿಸಿದ್ದಪ್ಪ ಹಲಿಗಿ ಕುಣಿಕೇರಿ, ರಮೇಶ ಬೂದಗುಂಪಿ, ಮುದುಕಪ್ಪ ಹೊಸಮನಿ, ಆನಂದ ಗೊಂಡಬಾಳ, ಗವಿಸಿದ್ದಪ್ಪ ಹಂಡಿ ಇತರರು ಇದ್ದರು.

# ದೈವಿವನದಲ್ಲಿ ಆನೈತಿಕ ಚಟುವಟಿಕೆ, ತಾಣವಾಗಿದೆ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಿ : ಕರವೇ ಸ್ವಾಭಿಮಾನಿ ಸೇನೆ ಆಗ್ರಹ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು :ತಾಲೂಕಿನ ಭಾಗದ ಆರಾಧ್ಯ ದೈವ ಶ್ರೀ ಅಮರೇಶ್ವರ ಇಡೀ ಜಿಲ್ಲೆಗೆ ಹೆಸರು ವಾಸಿಯಾದ ಕ್ಷೇತ್ರವಾಗಿದೆ. ಇಂತಹ ಕ್ಷೇತ್ರಕ್ಕೆ ಬರುವ ಭಕ್ತಾದಿಗಳ ವಿಶ್ರಾಂತಿಗಾಗಿ ಈ ಹಿಂದೆ ದೈವಿ ಉದ್ಯಾನವನ ನಿರ್ಮಿಸಲಾಗಿತ್ತು. ಆದರೆ ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ಈ ದೈವಿವನದಲ್ಲಿ ಆನೈತಿಕ ಚಟುವಟಿಕೆ, ವೇಶವಾಟಿಕೆಯಂತಹ ಚಟುವಟಿಕೆಗಳ ತಾಣವಾಗಿ ಮಾರ್ಪಟರೆ ದೈವ ಭಕ್ತಯಲ್ಲಿ ವೇಶವಾಟಿಕೆ ಮಾಡುತ್ತಿರುವುದು ಭಕ್ತರು ತಲೆತಗ್ಗಿಸುವಂತಹ ವಿಷಯವಾಗಿದೆ. ಅಲ್ಲದೇ ಈ ವನದಲ್ಲಿ ಕಾರ್ಯನಿರ್ವಹಿಸುವ ಹೊರಗುತ್ತಿಗೆ ನೌಕರ ಪವಾಡೆಪ್ಪತಂ/ಗಂಗಪ್ಪ ಶರಣ ಸಾ. ಗುಂತಗೋಳ ಇವರು ಉದ್ಯಾನವನಕ್ಕೆ ಬರುವ ಭಕ್ತರಿಂದ ಆನಧಿಕೃತವಾಗಿ ಹಣ ವಸೂಲಿ ಮಾಡುತ್ತಿದ್ದಾನೆ. ಹಣ ವಸೂಲಿಗೆ ಯಾವುದೇ ತರಹದ ಚೀಟಿ ನೀಡುವುದಿಲ್ಲ. ತಾನೇ ಅಧಿಕಾರಿಯಂತೆ ವರ್ತಿಸುತ್ತಿದ್ದಾನೆ. ಅಲ್ಲದೇ ಉದ್ಯಾನವನದಲ್ಲಿ ಕುರಿ ಮೇಕೆಗಳನ್ನು ಮೇಯಿಸಲು ಬೀಡುತ್ತಿರುವುದು ಎಷ್ಟು ಸರಿ. ಈತನ ಕಾರಣದಿಂದಾಗಿ ಉದ್ಯಾನವನ ಹಾಳು ಉದ್ಯಾನದವಾಗಿ ಮಾರ್ಪಟಿದೆ.

ದೈವಿ ಉದ್ಯಾನವನದಲ್ಲಿ ಅನೈತಿಕ ಚಟುವಟಿಕೆ, ವೇಶವಾಟಿಕೆ ಚಟುವಟಿಕೆಗಳಿಗೆ ನಡೆಸಲು ಕಾವಲುಗಾರನಾಗಿ ಅವರಿಂದ 200 ರಿಂದ 300 ಹಣ ಪಡೆಯುತ್ತಿದ್ದಾನೆ. ಈ ಬಗ್ಗೆ ಮೇಲಾಧಿಕಾರಿಗಳಿಗೆ ತಿಳಿಸಿದರು ಯಾವುದೇ ಕ್ರಮ ಕೈಗೊಂಡಿರುವುದಿಲ್ಲ ಇವರೇ ಈ ಚಟುವಟಿಕೆಗಳಿಗೆ ಕುಮ್ಮಕ್ಕು ನೀಡುತ್ತಿದ್ದಾರೆ. ದೈವಿ ಉದ್ಯಾನವನದಲ್ಲಿ ಅನೈತಿಕ ಹಾಗೂ ವೇಶವಾಟಿಕೆ ಚಟುವಟಿಕೆ ನಡೆಸುತ್ತಿರುವ ಹಾಗೂ ಭಕ್ತರಿಂದ ಹಣ ವಸೂಲಿ ಮಾಡುತ್ತಿರುವ ಸದರಿ ಸಿಬ್ಬಂದಿಯನ್ನು ಕೂಡಲೇ ಕೆಲಸದಿಂದ ತೆಗೆದು ಹಾಕಬೇಕು ಹಾಗೂ ಇದಕ್ಕೆ ಬೆಂಬಲ ನೀಡುವ ಅಧಿಕಾರಿಯನ್ನು ಅಮಾನತ್ತು ಮಾಡಬೇಕು ಇಲ್ಲವಾದಲ್ಲಿ ತಮ್ಮ ಕಾರ್ಯಾಲಯದ ಮುಂದೆ ಪ್ರತಿಭಟನೆ ಮಾಡಲಾಗುವುದೆಂದು ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ ವತಿಯಿಂದ ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಅಧ್ಯಕ್ಷರು ಜಿಲಾನಿ ಪಾಷಾ, ತಿಮ್ಮನಗೌಡ, ಬಸವನಗೌಡ, ನನ್ನೆ ಸಾಬ ಸೇರಿದಂತೆ ಉಪಸ್ಥಿತರಿದ್ದರು.

# ಜು.21 ರಂದು ಕೆ.ಡಿ.ಪಿ ಪ್ರಗತಿ ಪರಿಶೀಲನಾ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.16–ಜಿಲ್ಲೆಯ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (20 ಅಂಶ ಸೇರಿದಂತೆ) ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯನ್ನು ಜು.21 ರಂದು ಬೆಳಿಗ್ಗೆ 10 ಗಂಟೆಗೆ ನಗರದ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಬಳ್ಳಾರಿ ಗ್ರಾಮೀಣ ಶಾಸಕರಾದ ಬಿ.ನಾಗೇಂದ್ರ ಅವರು ಸಭೆಯ ಅಧ್ಯಕ್ಷತೆ ವಹಿಸುವರು ಎಂದು ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿ ಅವರು ತಿಳಿಸಿದ್ದಾರೆ.

# ಜು.18 ರಂದು ಮೇಲ್ವಿಚಾರಣಾ ಸಮಿತಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.16–ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ಅಧಿನಿಯಮ–2013ರ ಸೆಕ್ಷನ್–11ರ ಪ್ರಕಾರ ಜಿಲ್ಲಾ ಮೇಲ್ವಿಚಾರಣಾ ಸಮಿತಿ ರಚಿಸಿದ್ದು, ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರ ಅಧ್ಯಕ್ಷತೆಯಲ್ಲಿ ಜು.18 ರಂದು ಮಧ್ಯಾಹ್ನ 3 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಎಸ್.ಸಿ.ಎಸ್.ಪಿ./ಟಿ.ಎಸ್.ಪಿ ಜಿಲ್ಲಾ ಮೇಲ್ವಿಚಾರಣಾ ಸಮಿತಿಯ ಸಭೆ ಏರ್ಪಡಿಸಲಾಗಿದೆ.

ಮುಂದುವರೆದು ಕೇಂದ್ರ ವಲಯ/ರಾಜ್ಯ ವಲಯ/ಜಿಲ್ಲಾ ವಲಯದಲ್ಲಿ ಪರಿಶಿಷ್ಟ ಜಾತಿ ಉಪ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ 2024–25ನೇ ಸಾಲಿನ 2025ರ ಮಾರ್ಚ್‌ನಿಂದ ಜೂನ್ ಅಂತ್ಯದವರೆಗಿನ ಪ್ರಗತಿ ವರದಿಗಳನ್ನು ಸಮಿತಿ ಪರಿಶೀಲಿಸಲಿದೆ. ಸಂಬಂಧಪಟ್ಟ ಇಲಾಖೆಗಳು ಅಗತ್ಯ ಮಾಹಿತಿಗಳೊಂದಿಗೆ ಸಭೆಗೆ ಹಾಜರಾಗಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಬಿ.ಮಲ್ಲಿಕಾರ್ಜುನ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜು.18 ರಂದು ಮಿನಿ ಉದ್ಯೋಗ ಮೇಳ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.16–ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಜು.18 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 02 ಗಂಟೆಯವರೆಗೆ ನಗರದ ಹಳೆಯ ತಾಲ್ಲೂಕು ಕಚೇರಿ ಆವರಣದ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಮಿನಿ ಉದ್ಯೋಗ ಮೇಳ ಆಯೋಜಿಸಲಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ಪಿ.ಎಸ್.ಹಟ್ಟಪ್ಪ ಅವರು ತಿಳಿಸಿದ್ದಾರೆ.

ನಗರದ ಸ್ಪಂದನ ಸ್ಫೂರ್ತಿ ಮೈಕ್ರೋಫೈನಾನ್ಸ್ ಕಂಪನಿಯವರು ತಮ್ಮಲ್ಲಿರುವ ಖಾಲಿ ಹುದ್ದೆಗಳಿಗೆ ನೇರ ಸಂದರ್ಶನ ಮೂಲಕ ನೇಮಕ ಮಾಡಿಕೊಳ್ಳುವರು. ಆಸಕ್ತ ಅಭ್ಯರ್ಥಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದು. ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ.

ವಿದ್ಯಾರ್ಹತೆ:

ಪಿಯುಸಿ, ಐಟಿಐ, ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರಬೇಕು. ಆಸಕ್ತ ಅಭ್ಯರ್ಥಿಗಳು ನೇರ ಸಂದರ್ಶನದಲ್ಲಿ ಭಾಗವಹಿಸಿ, ಇದರ ಸದುಪಯೋಗಪಡೆದುಕೊಳ್ಳಬಹುದು. ಪುರುಷರು ಮತ್ತು ಮಹಿಳೆಯರು ಭಾಗವಹಿಸಬಹುದು.

ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ತಮ್ಮ ಆಧಾರ್ ಕಾರ್ಡ್ ಪ್ರತಿ ಮತ್ತು ಸ್ವ–ವಿವರ (ಬಯೋಡೇಟಾ)ಗಳೊಂದಿಗೆ ಅಂದು ನಡೆಯುವ ನೇರ ಸಂದರ್ಶನದಲ್ಲಿ ಭಾಗವಹಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಅಥವಾ ಮೊ.9742718891, 9663263086, 9900827768, 6360408094ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಮಗಾರಿಗಳನ್ನು ವಿಳಂಬ ಗುತ್ತಿಗೆದಾರರಿಂದ ದಂಡ ವಸೂಲಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜುಲೈ 16– ಜಲ ಜೀವನ ಮಿಷನ್ (ಜೆಜೆಎಮ್) ಕಾಮಗಾರಿಗಳನ್ನು ವಿಳಂಭವಾಗಿ ಪೂರ್ಣಗೊಳಿಸಿದ್ದಕ್ಕಾಗಿ ಗುತ್ತಿಗೆದಾರರಿಂದ ದಂಡ ವಸೂಲಿಗೆ ಸೂಚಿಸಿದೆ ಎಂದು ಯಾದಗಿರಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ಕಾರ್ಯಪಾಲಕ ಇಂಜಿನೀಯರರು ಆನಂದ ಅವರು ತಿಳಿಸಿದ್ದಾರೆ.

ಯಾದಗಿರಿ ಜಿಲ್ಲೆಯಲ್ಲಿ ಸುರಕ್ಷಿತ ಕುಡಿಯುವ ನೀರನ್ನು ಸಕಾಲದಲ್ಲಿ ಮತ್ತು ಪರಿಣಾಮಕಾರಿಯಾಗಿ ಒದಗಿಸುವ ತನ್ನ ಬದ್ಧತೆಯನ್ನು ಮತ್ತಷ್ಟು ಭಲಪಡಿಸುವ ನಿಟ್ಟಿನಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ಯಾದಗಿರಿ ವ್ಯಾಪ್ತಿಯಲ್ಲಿ ಜಲ ಜೀವನ್ ಮಿಷನ್ ಯೋಜನೆಯ ಕಾಮಗಾರಿಗಳನ್ನು ನಿಗದಿತ ಸಮಯ ಒಳಗೆ ಪೂರ್ಣಗೊಳಿಸಲು ವಿಫಲರಾದ ಗುತ್ತಿಗೆದಾರರಿಂದ ದಂಡ ವಸೂಲಿ ಮಾಡಲು ಸೂಚಿಸಿದೆ. ಯಾದಗಿರಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಲ ಜೀವನ್ ಮಿಷನ್ ಯೋಜನೆಯ ಕಾಮಗಾರಿಗಳ ವಿಳಂಭದ ಬಗ್ಗೆ ನೀಡಿದ ಕಟ್ಟುನಿಟ್ಟಿನ ನಿರ್ದೇಶನಗಳ ನಂತರ, ನಡೆಯುತ್ತಿರುವ ಎಲ್ಲಾ ಕಾಮಗಾರಿಗಳ ವಿವರವಾದ ಪರಿಶೀಲನೆಯನ್ನು ನಡೆಸಲಾಯಿತು. ಈ ಕಠಿಣ ಮೌಲ್ಯಮಾಪನವು ಒಪ್ಪಂದದ ಗಡುವನ್ನು ಪಾಲಿಸದ ಹಲವಾರು ಪ್ರಕರಣಗಳನ್ನು ಗುರುತಿಸಿ ದಂಡ ವಿಧಿಸಲು ಸೂಚಿಸಿದೆ.

ಪ್ರತಿ ಗ್ರಾಮೀಣ ಮನೆಗೂ ಹರ್ ಘರ್ ಜಲ್ ಉಪಕ್ರಮದ ಅಡಿಯಲ್ಲಿ ಕಾರ್ಯಾತ್ಮಕ ನಳ ಸಂಪರ್ಕವನ್ನು ಅನಗತ್ಯ ವಿಳಂಭವಿಲ್ಲದೆ ಒದಗಿಸುವುದು ನಮ್ಮ ಪ್ರಮುಖ ಉದ್ದೇಶವಾಗಿದೆ. ಈ ನಿರ್ಣಾಯಕ ಯೋಜನೆಗಳಲ್ಲಿನ ನಿರಂತರ ವಿಳಂಭಗಳು ನಮ್ಮ ನಾಗರಿಕರ ಮೇಲೆ ಮತ್ತು ಒಟ್ಟಾರೆ ಮಿಷನ್ ಮೇಲೆ ಪರಿಣಾಮ ಬೀರುತ್ತವೆ. ಆದ್ದರಿಂದ ನಾವು ಆಯಾ ಕರ್ಯಾದೇಶಗಳು ಮತ್ತು ಒಪ್ಪಂದಗಳಲ್ಲಿ ವಿವರಿಸಿದಂತೆ ದಂಡದ ಷರತ್ತುಗಳನ್ನು ಜಾರಿಗೊಳಿಸಲು ಪ್ರಾರಂಭಿಸಿದೆ. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ಯಾದಗಿರಿ ಇದುವರೆಗೆ ವಿವಿಧ ಡೀಫಾಲ್ಟ್ ಗುತ್ತಿಗೆದಾರರಿಗೆ ಪ್ರಾರಂಭಿಕ ಹಂತದಲ್ಲಿ ಒಟ್ಟು 23,71,647 ರೂ.ಗಳನ್ನು ದಂಡ ವಿಧಿಸಲಾಗಿದೆ. ಈ ದಂಡಗಳನ್ನು ಅವರ ಆಯಾ ಕಾರ್ಯಾದೇಶಗಳು ಮತ್ತು ಒಪ್ಪಂದಗಳಲ್ಲಿ ನಿಗದಿತಪಡಿಸಿದ ನಿಯಮಗಳು ಮತ್ತು ಷರತ್ತುಗಳಿಗೆ ಅನುಗುಣವಾಗಿ ವಿಧಿಸಲಾಗುತ್ತಿದೆ ಮತ್ತು ವಿಳಂಭವಾದ ಕಾಮಗಾರಿಗಳ ಪ್ರಸ್ತಾವನೆಗಳು ಉಪ ವಿಭಾಗಗಳಿಂದ ಸಲ್ಲಿಕೆಯಾಗಬೇಕಾಗಿದ್ದು, ಪ್ರಸ್ತಾವನೆಗಳನ್ನು ಸಲ್ಲಿಸಿದ ನಂತರ ನಿಯಮಾನುಸಾರ ಇನ್ನೂ ಹೆಚ್ಚಿನ ದಂಡವನ್ನು ವಿಧಿಸಲಾಗುವುದು.

# ಕ್ರೀಡೆಗಳು ಜೀವನದಲ್ಲಿ ಶಿಸ್ತು ಬೆಳೆಸುತ್ತವೆ-ಅರಕೇರಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.16–ಕ್ರೀಡೆಗಳು ವಿದ್ಯಾರ್ಥಿಗಳ ಜೀವನದಲ್ಲಿ ಶಿಸ್ತು ಬೆಳೆಸುವುದರ ಜೊತೆಗೆ ಸಮಯ ಪಾಲನೆಯ ಮಹತ್ವ ತಿಳಿಸುತ್ತವೆ ಎಂದು ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಜಿಲ್ಲಾ ಅಧ್ಯಕ್ಷ ಗದಿಗೆಪ್ಪ ಅರಕೇರಿ ಹೇಳಿದರು.

ತಾಲೂಕಿನ ಬೆನಕಟ್ಟಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬುಧವಾರ ಮಕ್ಕಳಿಗಾಗಿ ಏರ್ಪಡಿಸಿದ್ದ ಶಾಲಾ ಹಂತದ ಖೋಖೋ ಸ್ಪರ್ಧೆಯ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

ಇನ್ನೋರ್ವ ಮುಖ್ಯ ಅತಿಥಿ ನಿವೃತ್ತ ದೈಹಿಕ ಶಿಕ್ಷಣ ಶಿಕ್ಷಕ ಜಿ.ಜಿ.ಚಿತ್ತರಗಿ ಮಾತನಾಡಿ, ಕ್ರೀಡೆಗಳಿಂದ ವ್ಯಕ್ತಿಯ ದೈಹಿಕ ಹಾಗೂ ಮಾನಸಿಕ ಆರೋಗ್ಯ ಸದೃಢಗೊಂಡು ಪರಿಪೂರ್ಣ ಬೆಳವಣಿಗೆ ಸಾಧ್ಯವಾಗುತ್ತದೆ. ಪ್ರಾಥಮಿಕ ಶಾಲಾ ಹಂತದಲ್ಲೇ ವಿದ್ಯಾರ್ಥಿಗಳು ಕ್ರೀಡಾಸಕ್ತಿ ಬೆಳೆಸಿಕೊಂಡು ಕ್ರೀಡೆಗಳಲ್ಲಿ ಭಾಗವಹಿಸುವುದರಿಂದ ಪ್ರೌಢ ಹಾಗೂ ಕಾಲೇಜು ಹಂತದಲ್ಲಿ ಉತ್ತಮ ಕ್ರೀಡಾಪಟುಗಳಾಗಿ ಸಾಧನೆ ಮಾಡಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ನಿವೃತ್ತ ದೈಹಿಕ ಶಿಕ್ಷಣ ನಿರ್ದೇಶಕ ವಿನಾಯಕ ಪಾಟೀಲ ಸ್ಪರ್ಧೆಯನ್ನು ಉದ್ಘಾಟಿಸಿದರು. ಶಾಲೆಯ ಎಸ್.ಡಿಎಂಸಿ ಅಧ್ಯಕ್ಷ ಮಹಾಂತಗೌಡ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಅತಿಥಿಗಳಾಗಿ ಲಚ್ಚಪ್ಪ ಬಾಳಕ್ಕನವರ, ಸಿದ್ದಪ್ಪ ಮೆಳ್ಳಿಗೇರಿ, ಮಲ್ಲಿಕಾರ್ಜುನ ಅಂಬಿಗೇರ, ಸಿ.ಎನ್.ಬಾಳಕ್ಕನವರ, ಮುಖ್ಯಗುರು ಜಗನ್ನಾಥ ಪತ್ತಾರ, ನಿವೃತ್ತ ಶಿಕ್ಷಕ ಮುತ್ತುರಾಜ ಗೊರವರ, ದೈಹಿಕ ಶಿಕ್ಷಣ ಶಿಕ್ಷಕಿ ಎಲ್.ಎ.ಪಾಟೀಲ, ಶಿಕ್ಷಕರಾದ ಪಾಂಡು ಸನ್ನಪ್ಪನವರ, ರವಿ ಕೆಂಚನ್ನವರ, ಎ.ಎಸ್.ಮಂತ್ರಿ, ಅಂಜಲಿ ಎಲ್, ಆಶಾರಾಣಿ ಮೇಟಿ ಪಾಲ್ಗೊಂಡಿದ್ದರು.

ವಿಜೇತರು: ಶಾಲೆಯ ಬಾಲಕಿಯರ ಹಾಗೂ ಬಾಲಕರ ತಲಾ 6 ತಂಡಗಳು ಸ್ಪರ್ಧೆಯಲ್ಲಿ ಭಾಗವಹಿಸಿದ್ದು, ಬಾಲಕರ ವಿಭಾಗದಲ್ಲಿ ತಂಡ ತಂಡವನ್ನು ಸೋಲಿಸಿ ಟ್ರೋಫಿ ಪಡೆದರೆ, ಬಾಲಕಿಯರ ವಿಭಾಗದಲ್ಲಿ ತಂಡ ತಂಡವನ್ನು ಸೋಲಿಸಿ ಟ್ರೋಫಿ ತನ್ನದಾಗಿಸಿಕೊಂಡಿತು.

## ಪಿ.ಎಚ್.ಪೂಜಾರ ಜನ್ಮ ದಿನಾಚರಣೆ
# ದೇವಾಲಯಗಳಲ್ಲಿ ಪೂಜೆ, ನಿರ್ಗತಿಕರಿಗೆ ವಸ್ತ್ರ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.16–ಬಾಗಲಕೋಟೆ-ವಿಜಯಪುರ ಅವಳಿ ಜಿಲ್ಲೆಗಳ ವಿಧಾನ ಪರಿಷತ್ ಸದಸ್ಯ, ಬಿಜೆಪಿಯ ಹಿರಿಯ ಮುಖಂಡ ಪಿ.ಎಚ್.ಪೂಜಾರ ಅವರ 71 ನೇ ಜನ್ಮ ದಿನಾಚರಣೆ ಅಂಗವಾಗಿ ಪಕ್ಷದ ಕಾರ್ಯಕರ್ತರು ಹಾಗೂ ಅವರ ಅಭಿಮಾನಿಗಳು ನಗರದ ವಿವಿಧ ದೇವಸ್ಥಾನಗಳಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ಬುಧವಾರ ಬೆಳಿಗ್ಗೆ ನಗರದ ಕಿಲ್ಲಾ ಕೊತ್ತಲೇಶ ಮಾರುತಿ ಮಂದಿರ, ಮರಾಠಾ ಅಂಬಾಭವಾನಿ ದೇವಸ್ಥಾನ, ಗಣಪತಿ ದೇವಸ್ಥಾನ, ಕೇದಾರನಾಥ ದೇವಸ್ಥಾನ, ಗುರು ರಾಘವೇಂದ್ರ ದೇವಸ್ಥಾನ, ಗ್ರಾಮ ದೇವತೆ ದೇವಸ್ಥಾನ, ಮಲ್ಲಿಕಾರ್ಜುನ ದೇವಸ್ಥಾನ, ಎಸ್ಎಸ್‌ಕೆ ಸಮಾಜದ ಅಂಬಾಭವಾನಿ ದೇವಸ್ಥಾನಗಳಲ್ಲಿ ವಿಶೇಷ ಪೂಜೆ ಸಲ್ಲಿಸಿ ಪಿ.ಎಚ್.ಪೂಜಾರ ಅವರಿಗೆ ಒಳಿತಾಗಲಿ ಎಂದು ಪ್ರಾರ್ಥಿಸಿದರು. ನಂತರ ಅವರ ಜನಸಂಪರ್ಕ ಕಾರ್ಯಾಲಯದಲ್ಲಿ ನಿರ್ಗತಿಕರಿಗೆ ಬಟ್ಟೆ-ವಸ್ತ್ರ ನೀಡಿ ಅವರ ಜೊತೆಯಲ್ಲೇ ಸಹ ಭೋಜನ ಮಾಡಿದರು.

ಕಾರ್ಯಕ್ರಮದಲ್ಲಿ ಡಾ.ಶೇಖರ ಮಾನೆ, ಸಂಗನಗೌಡ ಗೌಡರ, ಶಂಭುಗೌಡ ಪಾಟೀಲ, ವಿರುಪಾಕ್ಷ ಅಮೃತಕರ, ಚಂದ್ರಕಾಂತ ಕೇಸನೂರ, ಮಲ್ಲಯ್ಯ ಪೂಜಾರ ಹಿರೇಮಠ, ಮಲ್ಲಿಕಾರ್ಜುನ ಸುರಪುರ, ವಿಶ್ವನಾಥ ಪೂಜಾರ, ರವಿ ಕುಮಟಗಿ, ರಾಮ ಮುಂದಡಾ, ಬಾಳು ಉಳ್ಳಾಗಡ್ಡಿ, ಪುಕರಾಜ ಬೇತಾಳ, ಅನಂತ ಮಳಗಿ, ಸಂಜು ಡಿಗ್ಗಿ, ಯಲ್ಲಪ್ಪ ಅಂಬಿಗೇರ, ರಾಜು ಚಿತ್ತವಾಡಗಿ, ರಾಜು ಗೌಳಿ, ಶೈಲು ಅಂಗಡಿ, ಡಾ.ಕೃಷ್ಣಾ ಚೌಧರಿ, ಡಾ.ಸುಧೀರ ಜಾಧವ, ಗಣೇಶ ದುದ್ದಾನಿ, ಲಚ್ಚಪ್ಪ ಬಾಳಕ್ಕನವರ, ಮಲ್ಲಪ್ಪ ಕಟಗೇರಿ, ಬಸಪ್ಪ ಪಲ್ಲೇದ, ಶಂಕರ ಮಗಜಿ, ಮಾರುತಿ ಮಗಜಿ, ರಾಜು ಶ್ರೀರಾಮ, ಆಸಂಗೆಪ್ಪ ತಳವಾರ, ಈರಣ್ಣ ತಂಬಾಕದ, ಮಲ್ಲಪ್ಪ ಯಡಿಗೇರಿ, ಮಲ್ಲಪ್ಪ ಬಡಿಗೇರ, ಮಂಜುನಾಥ ಬಳೂರಗಿ, ಜಗದೀಶ ಪವಾರ, ವಿನಾಯಕ ದೇಸಾಯಿ, ವಿರುಪಾಕ್ಷ ಬೇನಾಳ, ಮೋಹನ ಗೋಣಿ, ಶಾಂತಾಬಾಯಿ ಗೋಣಿ, ವಿಜಯಲಕ್ಷ್ಮೀ ಅಂಗಡಿ, ಮಾರುತಿ ಶೇಟವಾಜಿ, ಗಣಪತಿ ಪತ್ತಾರ, ವೀರೇಶ ತಳಗಿಹಾಳ, ನಾಗನಗೌಡ ಗೌಡರ, ಸುರೇಶ ಕಟ್ಟಿಮನಿ, ಯಮನಪ್ಪ ಮಡ್ಡಿಕೇರಿ, ಶಂಕರ ಪಾದನಕಟ್ಟಿ ಹಾಗೂ ಸ್ನೇಹಿತರು, ಹಿರಿಯರು, ಅಭಿಮಾನಿಗಳು, ಬಿಜೆಪಿ ಮುಖಂಡರು ಪಾಲ್ಗೊಂಡಿದ್ದರು.

# ಜು.18 ಬಿ.ವಿ.ವಿ.ಸಂಘದಿಂದ ಪ್ರಭುಸ್ವಾಮೀಜಿಗೆ ಗೌರವಾಭಿನಂದನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.16–ನಗರದ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘ ಹಾಗೂ ವಿದ್ಯಾಗಿರಿಯ ಬಿ.ವಿ.ವಿ.ಎಸ್ ಕಲಾ, ವಿಜ್ಞಾನ, ಹಾಗೂ ವಾಣಿಜ್ಯ ಸ್ವತಂತ್ರ ಪದವಿ-ಪೂರ್ವ ಮಹಾವಿದ್ಯಾಲಯದ ವತಿಯಿಂದ ಜು.18 ರಂದು ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್ ಪಡೆದ ಚರಂತಿಮಠದ ಪೂಜ್ಯರು ಹಾಗೂ ಸಂಘದ ಅಧ್ಯಕ್ಷರಾದ ಡಾ.ಮ.ನಿ.ಪ್ರ ಪ್ರಭುಸ್ವಾಮಿಗಳಿಗೆ ಗೌರವಾಭಿನಂದನೆ ಸಲ್ಲಿಸಲಾಗುವುದು.

ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ವಿದ್ಯಾಗಿರಿಯಲ್ಲಿನ ಇಂಜನೀಯರಿಂಗ್ ಕಾಲೇಜಿನ ನೂತನ ಸಭಾಭವನದಲ್ಲಿ ಜರುಗುವ ಸಮಾರಂಭದ ದಿವ್ಯ ಸಾನಿಧ್ಯವನ್ನು ಇಳಕಲ್ಲ ಗುರುಮಹಾಂತ ಶ್ರೀಗಳು ವಹಿಸುವರು. ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ ಅಧ್ಯಕ್ಷತೆ ವಹಿಸುವರು. ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಕಾಲೇಜು ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಗುರುಬಸವ ಸೂಳಿಭಾವಿ ಉಪಸ್ಥಿತರಿರುವರು.

ಇದೇ ಸಂದರ್ಭದಲ್ಲಿ ಕಾಲೇಜಿನ 2025-26 ನೇ ಶೈಕ್ಷಣಿಕ ಸಾಲಿನ ಕ್ರೀಡಾ ಮತ್ತು ಸಾಂಸ್ಕೃತಿಕ ಚಟುವಟಿಕೆಗಳ ಉದ್ಘಾಟನಾ ಸಮಾರಂಭ ಸಹ ಜರುಗಲಿದೆ.

# ಲೋಕಾಯುಕ್ತ ಪೊಲೀಸ್‌ರಿಂದ ಕುಂದುಕೊರತೆ ಸಭೆ

ರಾಯಚೂರು ಜುಲೈ 16: ಇಲ್ಲಿನ ಜಿಲ್ಲಾ ಲೋಕಾಯುಕ್ತ ಪೊಲೀಸರ ವತಿಯಿಂದ ಇದೇ ಜುಲೈ 18ರ ಬೆಳಿಗ್ಗೆ 11ಗಂಟೆಯಿಂದ ಮಧ್ಯಾಹ್ನ 1.30ಗಂಟೆಯವರೆಗೆ ಜಿಲ್ಲೆಯ ಲಿಂಗಸುಗೂರು ತಹಶೀಲ್ದಾರ್ ಕಚೇರಿಯಲ್ಲಿ ಸಾರ್ವಜನಿಕರ ಕುಂದುಕೊರತೆ ಹಾಗೂ ಅಹವಾಲುಗಳ ಸ್ವೀಕಾರ ಸಭೆಯಲ್ಲಿ ಆಯೋಜಿಸಲಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಕರ್ನಾಟಕ ಲೋಕಾಯುಕ್ತ ಪೋಲೀಸ್ ಅಧೀಕ್ಷಕರಾದ ಎಂ.ಎನ್.ಶಶಿಧರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾದಾಮಿ ತಾಲೂಕಿನಲ್ಲೂ ಡ್ರಗ್ಸ್ ಹಾವಳಿ-ಪಾಟೀಲ ಆರೋಪ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.16–ಜಿಲ್ಲೆಯ ಬಾದಾಮಿ ತಾಲೂಕಿನಲ್ಲೂ ಡ್ರಗ್ಸ್ ಹಾವಳಿ ಹೆಚ್ಚಾಗಿದ್ದು ಬಹಿರಂಗವಾಗಿ ಮಾರಾಟ ಎಗ್ಗಿಲ್ಲದೇ ನಡೆಯುತ್ತಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಶಾಂತಗೌಡ ಪಾಟೀಲ ಆರೋಪ ಮಾಡಿದ್ದಾರೆ.

ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಿಕ್ಕ ಮಕ್ಕಳು ಡ್ರಗ್ಸ್‌ಗೆ ಬಲಿಯಾಗುತ್ತಿದ್ದು, ಈ ದಂಧೆ ನಾಯಕರ ಆಡಳಿತ ಪಕ್ಷದ ನಾಯಕರ ಕೃಪೆಯಿಂದಲೇ ನಡೆಯುತ್ತಿದೆ ಎಂದರು.

ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆಯ ಆಪ್ತ ಸಹಾಯಕ, ಕಲಬುರ್ಗಿ ದಕ್ಷಿಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಲಿಂಗರಾಜ ಕಣ್ಣಿ ಮಾದಕ ದ್ರವ್ಯ ಕಳ್ಳಸಾಗಣೆಗೆ ನಡೆಸಿ ಬಂಧನಕ್ಕೊಳಗಾಗಿರುವುದು ಡ್ರಗ್ಸ್ ದಂಧೆ ಸಚಿವರ ಆಪ್ತ ವಲಯದಲ್ಲೇ ನಡೆಯುತ್ತಿದೆ ಎಂಬುದಕ್ಕೆ ಸಾಕ್ಷಿಯಾಗಿದೆ ಎಂದು ಹೇಳಿದ ಪಾಟೀಲ, ಈ ಪ್ರಕರಣ ರಾಜ್ಯದಲ್ಲಿ ಡ್ರಗ್ಸ್ ಮಾಫಿಯಾ ಆಳವಾಗಿದೆ ಎಂಬುದನ್ನು ರುಜುವಾತು ಪಡಿಸಿದೆ ಎಂದರು.

ಯುವಕರು ಮಾದಕ ದ್ರವ್ಯಗಳಿಂದ ದೂರವಿರಬೇಕು ಎಂದು ಸಚಿವರು ಜಾಗೃತಿ ಕಾರ್ಯಾಕ್ರಮಗಳು ನಡೆಸುತ್ತಾರೆ. ಆದರೆ ಅವರ ಆಪ್ತರೇ ಈ ಮಾರಕ ದಂಧೆಯಲ್ಲಿ ತೊಡಗಿರುವುದು ದುರಂತ ಎಂದ ಶಾಂತಗೌಡ, ಇದು ಕೇವಲ ವ್ಯಕ್ತಿಗತ ತಪ್ಪು ಅಲ್ಲ, ಸರ್ಕಾರದ ನೈತಿಕತೆ, ನಿಷ್ಠೆ ಹಾಗೂ ಕಣ್ಗಾವಲು ವ್ಯವಸ್ಥೆಯ ವೈಫಲ್ಯವನ್ನೂ ತೋರಿಸುತ್ತದೆ ಎಂದು ಅವರು ಹೇಳಿದರು.

ನರೇಗಾ ಯೋಜನೆಯಡಿಯಲ್ಲಿ ಉದ್ಯೋಗ ನೀಡಿದರೂ ಕಳೆದ ಏಳು ತಿಂಗಳಿಂದ ನೌಕರರಿಗೆ ವೇತನ ಪಾವತಿ ಆಗಿಲ್ಲ. ವಿಶೇಷವಾಗಿ ಕಾಶಪ್ಪನವರ ಕ್ಷೇತ್ರದ ಗಂಜಿಹಾಳ ಗ್ರಾಮದಲ್ಲಿ ನರೇಗಾದಲ್ಲಿ ಅಕ್ರಮಗಳಾಗಿವೆ. ಇದರ ಬಗ್ಗೆ ಶಾಸಕರು ಮಾತನಾಡಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ವಕ್ತಾರ ಸತ್ಯನಾರಾಯಣ ಹೇಮಾದ್ರಿ, ಪ್ರಧಾನ ಕಾರ್ಯದರ್ಶಿ ಮಲ್ಲಯ್ಯ ಮೂಗನೂರಮಠ, ಮುತ್ತು ಉಳ್ಳಾಗಡ್ಡಿ, ಮಾಧ್ಯಮ ಸಂಚಾಲಕ ಶಿವಾನಂದ ಸುರಪುರ ಇದ್ದರು.

# 'ಮನೆ ಮನೆಗೆ ಪೊಲೀಸ್'ಕಾರ್ಯಕ್ರಮಕ್ಕೆ ಚಾಲನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.16–ಪೊಲೀಸ್ ಇಲಾಖೆಯಿಂದ ಸಾರ್ವಜನಿಕರ ಸುರಕ್ಷತೆಗಾಗಿ ಸರಕಾರ ರೂಪಿಸಿದ 'ಮನೆ ಮನೆಗೆ ಪೊಲೀಸ್' ವಿನೂತನ ಕಾರ್ಯಕ್ರಮಕ್ಕೆ ಜಿಲ್ಲೆಯಾದ್ಯಂತ ಬುಧವಾರ ಚಾಲನೆ ನೀಡಲಾಯಿತು.

ರಾಜ್ಯದ ಗೃಹಮಂತ್ರಿಗಳ ಮಹತ್ವಾಕಾಂಕ್ಷಿ ಯೋಜನೆ ಇದಾಗಿದ್ದು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಮಾರ್ಗದರ್ಶನದಲ್ಲಿ ನಗರದ ದೀಪಂ ಕಾಲೋನಿ ಮತ್ತು ಮದಿನಾ ಕಾಲೋನಿಯಲ್ಲಿ ಬಾಗಲಕೋಟೆ ಶಹರ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕರಾದ ಗುರುನಾಥ ಚವ್ಹಾಣ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ಸಾರ್ವಜನಿಕರಿಗೆ ಅತ್ಯುತ್ತಮ ಸೇವೆ ಒದಗಿಸುವ ಉದ್ದೇಶದಿಂದ ಈ ವಿನೂತನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸೈಬರ್ ಅಪರಾಧ, ಕರ್ನಾಟಕ ಡ್ರಗ್ಸ್ ಫ್ರೀ ಆಪ್, ಬಾಲ್ಯವಿವಾಹ ನಿಷೇಧ ಕಾಯ್ದೆ, ಸಾಮಾಜಿಕ ಜಾಲ ತಾಣಗಳಲ್ಲಿ ಬರುವ ಸತ್ಯಾಸತ್ಯತೆ ಬಗ್ಗೆ, ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೇಟ್ ಧರಿಸುವುದು, ಕಾರಿನಲ್ಲಿ ಸಂಚರಿಸುವವರು ಸೀಟ್ ಬೆಲ್ಟ್ ಧರಿಸುವುದು ಸೇರಿದಂತೆ ಇತರೆ ಸುರಕ್ಷತಾ ಕ್ರಮಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಕಾರ್ಯ ಮಾಡಲಾಗುತ್ತದೆ ಎಂದರು.

ಪುರುಷ ಹಾಗೂ ಮಹಿಳಾ ಪೊಲೀಸ್ ಸಿಬ್ಬಂದಿಗಳ ತಂಡ ಮನೆ ಮನೆಗೆ ತೆರಳಿ ಸಾರ್ವಜನಿಕರ ಸುರಕ್ಷತೆಗಾಗಿ ಕೈಗೊಂಡ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಗುತ್ತದೆ. ಸಾರ್ವಜನಿಕರು ವಾಸಿಸುವ ಮನೆ ಮತ್ತು ವಾರ್ಡಗಳಲ್ಲಿ ಹೆಚ್ಚಿನ ಭದ್ರತೆಗಾಗಿ, ಸಿಸಿಟಿವಿ ಅಳವಡಿಸುವ ಕುರಿತು ಜನರಲ್ಲಿ ಜಾಗೃತಿ ಮೂಡಿಸುವದರ ಜೊತೆಗೆ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿ ಸಣ್ಣ ಪುಟ್ಟ ಸಮಸ್ಯೆಗಳನ್ನು ಸ್ಥಳದಲ್ಲಿಯೇ ಪರಿಹಾರ ಕಂಡುಕೊಳ್ಳುವ ಕೆಲಸ ಮಾಡಲಾಗುತ್ತಿದೆ. ಜಿಲ್ಲಾ ಕಂಟ್ರೋಲ್ ರೂಮ್ ಸಿಪಿಐ, ಬಿಟಿ ಸಿಬ್ಬಂದಿಗಳ ಮೊಬೈಲ್ ನಂಬರಗಳನ್ನು ಸಾರ್ವಜನಿಕರಿಗೆ ಕೊಟ್ಟಿದ್ದು, ತುರ್ತು ಪರಿಸ್ಥಿತಿಯಲ್ಲಿ 112ಗೆ ಕರೆ ಮಾಡಲು ತಿಳಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಪಿ.ಎಸ್.ಐಗಳಾದ ಆರ್.ಎಸ್.ದೊಡಮನಿ, ಜೆ.ವಾಯ್.ನಧಾಫ್, ಹೆಚ್ಚುವರಿ ಸಿಪಿಐಗಳಾದ ಬಿ.ಬಿ.ಕೊಳ್ಳಿ, ಶರಣೇಶ ಜಾಲಿಹಾಳ, ಎ.ಎಸ್.ಐ ಡಿ.ಡಿ.ಧೂಳಖೇಡ, ಎಚ್.ಎಸ್.ಹೂಗಾರ, ಕೆ.ವಿ.ಗುಳಬಾಳ ಸೇರಿದಂತೆ ಇತರರು ಉಪಸ್ಥಿತರಿದ್ದರು.

# "ಗೆಲುವಿನ ಗುಟ್ಟು" ವಿಶೇಷ ಕಾರ್ಯಕ್ರಮ ನೈಪುಣ್ಯತೆ, ಕೌಶಲ್ಯ ಹಾಗೂ ಯಶೋಗಾಥೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಜುಲೈ 16– ಯುವಜನರಲ್ಲಿ ಆತ್ಮಸ್ಥೈರ್ಯ ಕುಂದುತ್ತಿರುವ ಹಿನ್ನಲೆಯಲ್ಲಿ ಅವರಿಗೆ ಆತ್ಮಸ್ಥೈರ್ಯ ತುಂಬಲು ಹಾಗೂ ನೆಮ್ಮದಿಯ ಜೀವನ ಕಟ್ಟಿಕೊಳ್ಳಲು ಮಾರ್ಗದರ್ಶನ ನೀಡುವ ವಿಶೇಷ ಕಾರ್ಯಕ್ರಮ ಸರಣಿ "ಗೆಲುವಿನ ಗುಟ್ಟು" ಕಾರ್ಯಕ್ರಮವು ಭದ್ರಾವತಿ ಆಕಾಶವಾಣಿ ಕೇಂದ್ರದಿಂದ ಪ್ರತಿ ಶುಕ್ರವಾರ ಬೆಳಿಗ್ಗೆ 9.05 ರಿಂದ 9.20 ರವರೆಗೆ ಪ್ರಸಾರವಾಗಲಿದೆ.

ಈ ಕಾರ್ಯಕ್ರಮ ಸರಣಿಯಲ್ಲಿ ವಿವಿಧ ವಿಭಾಗದಲ್ಲಿ ನೈಪುಣ್ಯತೆ ಪಡೆಯುವ ವಿಧಾನ, ಕೌಶಲ್ಯದ ಅವಶ್ಯಕತೆ ಹಾಗೂ ಪಡೆಯುವ ವಿಧಾನ ಮತ್ತು ಜೀವನದಲ್ಲಿ ಯಶಸ್ಸನ್ನು ಪಡೆದ ಹಲವು ಗಣ್ಯರ ಯಶೋಗಾಥೆ ಪ್ರಸಾರವಾಗಲಿದ್ದು ಶಿವಮೊಗ್ಗದ ಪಿ.ಇ.ಎಸ್ ಸಂಸ್ಥೆಯ 52 ವಿಷಯ ಪರಿಣಿತರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಲಿದ್ದಾರೆ.

ಪಿ.ಇ.ಎಸ್ ಸಹಯೋಗದಲ್ಲಿ ಪ್ರಸಾರವಾಗುತ್ತಿರುವ ಈ ಕಾರ್ಯಕ್ರಮ ಸರಣಿಯನ್ನು ಸಾರ್ವಜನಿಕರು ಉಪಯೋಗಿಸಿಕೊಳ್ಳುವುದರೊಂದಿಗೆ ಪ್ರಯೋಜನೆ ಪಡೆಯಬೇಕೆಂದು ಭದ್ರಾವತಿ ಆಕಾಶವಾಣಿ ಕೇಂದ್ರದ ಕಾರ್ಯಕ್ರಮ ಮುಖ್ಯಸ್ಥರಾದ ಎಸ್.ಆರ್.ಭಟ್ ಹಾಗು ಪಿ.ಇ.ಎಸ್ ಸಂಸ್ಥೆಯ ಮುಖ್ಯ ಆಡಳಿತ ಸಂಯೋಜಕರಾದ ಡಾ.ನಾಗರಾಜ್ ಆರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಂದಾಯ ನೌಕರರ ಕ್ರೀಡಾಕೂಟ ಸಮಾರೋಪ ಮುಧೋಳ ತಾಲೂಕಾ ತಂಡಕ್ಕೆ ಸಮಗ್ರ ವೀರಾಗ್ರಣಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.16–ಬಾಗಲಕೋಟೆ ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಎರಡು ದಿನಗಳ ಕಾಲ ನಡೆದ ಕಂದಾಯ ಇಲಾಖೆಯ ನೌಕರರ ಕ್ರೀಡಾಕೂಟದಲ್ಲಿ ಮುಧೋಳ ತಾಲೂಕಾ ತಂಡ ಸಮಗ್ರ ವೀರಾಗ್ರಣಿ ಪ್ರಶಸ್ತಿ ಪಡೆದುಕೊಂಡಿತು.



ಕಂದಾಯ ಇಲಾಖೆ ನೌಕರರ ಸಂಘ, ಜಿಲ್ಲಾ ಕಂದಾಯ ಇಲಾಖೆ ವಿವಿಧ ವೃಂದ ಸಂಘಗಳ ಸಹಯೋಗದಲ್ಲಿ ಕಂದಾಯ ದಿನಾಚರಣೆ ಅಂಗವಾಗಿ ಕ್ರೀಡೋತ್ಸವ, ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ವಿಜೇತರಾದವರಿಗೆ ಬುಧವಾರ ಹಮ್ಮಿಕೊಂಡ ಪ್ರಶಸ್ತಿ ವಿತರಣಾ ಸಮಾರಂಭದಲ್ಲಿ ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಮುಧೋಳ ತಾಲೂಕಾ ತಂಡಕ್ಕೆ ಸಮಗ್ರ ವೀರಾಗ್ರಣಿ ಪ್ರಶಸ್ತಿ ನೀಡಿದರು.

ಪ್ರಶಸ್ತ ವಿತರಣೆ ಕಾರ್ಯಕ್ರಮದಲ್ಲಿ ಜಿಲ್ಲಾ ಪ್ರಧಾನ ಮತ್ತು ಸತ್ರನ್ಯಾಯಾಧೀಶ ಎನ್.ವಿ.ವಿಜಯ್, ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಉಪ ವಿಭಾಗಾಧಿಕಾರಿಗಳಾದ ಸಂತೋಷ ಜಗಲಾಸರ, ಶ್ವೇತಾ ಬೀಡಿಕರ, ತಹಶೀಲ್ದಾರರಾದ ವಾಸುದೇವ ಸ್ವಾಮಿ, ಕಾವ್ಯಶ್ರೀ ಎಚ್, ಎಫ್.ಬಿ.ಮೊಮ್ಮನ್ನವರ, ನಿಂಗಪ್ಪ ಬಿರಾದಾರ, ವಿನೋದ ಹತ್ತಳ್ಳಿ, ಅಮರೇಶ ಪಮ್ಮಾರ, ಗಿರೀಶ ಸ್ವಾದಿ, ಸದಾಶಿವ ಮಕ್ಕೋಜಿ, ಮಹಾದೇವ ಸನಮೂರೆ, ವಿಜಯಕುಮಾರ ಕಡಕೋಳ, ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಬಳ್ಳಾರಿ, ಕಂದಾಯ ನೌಕರರ ಸಂಘದ ಅಧ್ಯಕ್ಷ ಚಿದಾನಂದ ವಡವಡಗಿ, ಗೌರವಾಧ್ಯಕ್ಷ ಮಲ್ಲಿಕಾರ್ಜುನ ಗುಡೂರ, ಪ್ರಧಾನ ಕಾರ್ಯದರ್ಶಿ ಶ್ರೀಕಾಂತ ಪಾಟೀಲ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮುಧೋಳ ತಾಲೂಕಾ ತಂಡ ಕಬಡ್ಡಿಯಲ್ಲಿ ದ್ವಿತೀಯ, ಹಗ್ಗ ಜಗ್ಗಾಟದಲ್ಲಿ ಪ್ರಥಮ, ಕ್ರಿಕೆಟ್ ಪಂದ್ಯಾವಳಿಯಲ್ಲಿ ದ್ವಿತೀಯ, 4*100 ಮೀಟರ್ ರಿಲೇ ಓಟದಲ್ಲಿ ಪ್ರಥಮ ಸ್ಥಾನ ಪಡೆದುಕೊಂಡಿದೆ. 24 ವರ್ಷದೊಳಗಿನ ಪುರುಷ ವಿಭಾಗದಲ್ಲಿ 100 ಮೀಟರ್ ಓಟದಲ್ಲಿ ಮನೋಜಗೌಡ ಗೌಡರ (ಪ್ರಥಮ), ಶ್ರೀಧರ ಚಲವಾದಿ (ದ್ವಿತೀಯ), ಸಚಿನ ಜಾದವ (ತೃತೀಯ), 200 ಮೀಟರ ಓಟದಲ್ಲಿ ಸಚಿನ ಜಾದವ (ಪ್ರಥಮ), ರಾಘವೇಂದ್ರ ಕೇರಸರಕೊಪ್ಪ (ದ್ವಿತೀಯ), ಮಾರುತಿ ಮಹೇಶವಾಡಗಿ (ತೃತೀಯ), 400 ಮೀ.ಓಟದಲ್ಲಿ ಮಲಿಕಸಾಬ ಅತ್ತಾರ (ಪ್ರಥಮ), ಶಿವಾನಂದ ತಳಕೇರಿ (ದ್ವಿತೀಯ), ಪ್ರವೀಣ ಅಂಬೋಜಿ (ತೃತೀಯ), 800 ಮೀ.ಓಟದಲ್ಲಿ ಮಲ್ಲಿಕಾರ್ಜುನ ಉಪ್ಪಾರ (ಪ್ರಥಮ), ಮಲಿಕಸಾಬ ಅತ್ತಾರ (ದ್ವಿತೀಯ), ಈಶ್ವರ ಹೊಸಲಕರ (ತೃತೀಯ) ಸ್ಥಾನ ಪಡೆದುಕೊಂಡರು.

ಉದ್ದ ಜಿಗಿತದಲ್ಲಿ ನವೀನ ಮರಡಿ (ಪ್ರಥಮ), ಮಂಜುನಾಥ ಕೂಗಟಿ (ದ್ವಿತೀಯ), ಪರಮೇಶ್ವರ ನಾಯಕ (ತೃತೀಯ), ಎತ್ತರ ಜಿಗಿತ ನವೀನ ಮರಡಿ (ಪ್ರಥಮ), ಮೋಹನ ವಾಲಿಕಾರ (ದ್ವಿತೀಯ), ಸಚಿನ ಜಾದವ, ವೆಂಕಟೇಶ ಸಂಶಿ (ತೃತೀಯ), ಗುಂಡು ಎಸೆತ ಶಬ್ಬೀರ ಜಾತಗಾರ (ಪ್ರಥಮ), ಗಂಗಾಧರ ಲೋಹಾರ (ದ್ವಿತೀಯ), ರವಿ ಚಲವಾದಿ (ತೃತೀಯ), ಚಕ್ರ ಎಸೆತ ನಾಗೇಶ ಲಮಾಣಿ (ಪ್ರಥಮ), ರವಿ ಚಲವಾದಿ (ದ್ವಿತೀಯ), ಅಶೋಕ ತೇಲಿ (ತೃತೀಯ), ಚದುರಂಗ ಅಶೋಕ ತೇಲಿ (ಪ್ರಥಮ), ಸೌರಭ ಮೇತ್ರಿ (ದ್ವಿತೀಯ), ಬಿ.ಆರ್.ಹೊಂಗಲ (ತೃತೀಯ), ಕೇರಂ ಅಸ್ಲಂ ಇಂಡಿಕರ (ಪ್ರಥಮ), ರಮೇಶ ಪಾಟೀಲ (ದ್ವಿತೀಯ), ವಿಠಲ ಕೂಗಟಿ (ತೃತೀಯ) ಸ್ಥಾನ ಪಡೆದುಕೊಂಡರು.

45 ವರ್ಷದೊಳಗಿನ ಮಹಿಳೆಯರ ವಿಭಾಗದಲ್ಲಿ 100 ಮೀ.ಓಟ ಗುರುಬಾಯಿ ಕೋಲಕಾರ (ಪ್ರಥಮ), ವಿಶಾಲಾ ಎಲ್ (ದ್ವಿತೀಯ), ಪುಷ್ಪಾ ಹಿರೇಮಠ (ತೃತೀಯ), 200 ಮೀ.ಓಟ ಗುರುಬಾಯಿ ಕೋಲಕಾರ (ಪ್ರಥಮ), ಅಶ್ವಿನಿ ಕಂಕಣವಾಡಿ (ದ್ವಿತಿಯ), ಗೌರಿ ಹಿರೇಮಠ (ತೃತೀಯ), 400 ಮೀ.ಓಟ ಪುಷ್ಪಾ ಹಿರೇಮಠ (ಪ್ರಥಮ), ಚಂದ್ರಕಲಾ ಮಾದರ (ದ್ವಿತೀಯ), ರೇಣುಕಾ (ತೃತೀಯ), ಉದ್ದ ಜಿಗಿತ ವಿಶಾಲ ಜೆ (ಪ್ರಥಮ), ಎಂ.ಎ.ಕುಂಟೋಜಿ, ಶಶಿಕಲಾ ಬಿರಾದಾರ (ದ್ವಿತೀಯ), ಚಂದ್ರಿಕಾ ಮಾದರ (ತೃತೀಯ), ಗುಂಡು ಎಸೆತ ಗೌರಿ ಹಿರೇಮಠ (ಪ್ರಥಮ), ನೂರಜಹಾನ ಜಮಾದಾರ (ದ್ವಿತೀಯ), ಗುರುಬಾಯಿ ಕೋಲಕಾರ (ತೃತೀಯ), ಚಕ್ರ ಎಸೆತ ನೂರಜಹಾನ ಜಮಾದಾರ (ಪ್ರಥಮ), ಗುರುಬಾಯಿ ಕೋಲಕಾರ (ದ್ವಿತೀಯ), ಜ್ಯೋತಿ ಯಲ್ಲಡಗಿ (ತೃತೀಯ) ಸ್ಥಾನ ಪಡೆದು-ಕೊಂಡಿದ್ದಾರೆ.

ಚೆಸ್ ಸ್ಪರ್ಧೆಯಲ್ಲಿ ಶೃತಿ ನಾಯಕ (ಪ್ರಥಮ), ಮಹಾನಂದಾ ಮಠ (ದ್ವಿತೀಯ), ಸುವರ್ಣ ಚಲವಾದಿ (ತೃತೀಯ), ಕೇರಂನಲ್ಲಿ ಜ್ಯೋತಿ ಯಲ್ಲಡಗಿ (ಪ್ರಥಮ), ವರ್ಷಾ ಬಡಿಗೇರ (ದ್ವಿತೀಯ), ಸುಮಯ್ಯಾ ಮಾಲ್ದಾರ (ತೃತೀಯ), ಶಟಲ್ ಬ್ಯಾಡ್ಮಿಟನ್‌ದಲ್ಲಿ ಶ್ವೇತಾ ಬೀಡಿಕರ (ಪ್ರಥಮ), ಪ್ರಿಯಾಂಕಾ ಕೋಳಿ (ದ್ವಿತೀಯ), ನೂರಜಹಾನ್ (ತೃತೀಯ), ಅಧಿಕಾರಿಗಳ ವಿಭಾಗದಲ್ಲಿ 100 ಮೀಟರ ಓಟ ವಿನೋದ ಹತ್ತಳ್ಳಿ (ಪ್ರಥಮ), ಸದಾಶಿವ ಮಕ್ಕೋಜಿ (ದ್ವಿತೀಯ), ಮಹಾದೇವ ಸನಮೂರೆ (ತೃತೀಯ) ಸ್ಥಾನ ಪಡೆದುಕೊಂಡಿದ್ದಾರೆ.

## ತಾಪಂ ಇಓ, ಪಿಡಿಓಗಳ ಪ್ರಗತಿ ಪರಿಶೀಲನಾ ಸಭೆ
# ಅಭಿವೃದ್ಧಿ ಕಾರ್ಯಗಳು ಚುರುಕು ಪಡೆಯಲಿ: ಜೆ.ಟಿ.ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.16–ಬೀಳಗಿ ಮತಕ್ಷೇತ್ರ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳು ಕುಂಟಿತಗೊಂಡಿ-ದ್ದು, ಬರುವ ಎರಡು ತಿಂಗಳಲ್ಲಿ ಅಭಿವೃದ್ಧಿ ಕಾರ್ಯಗಳಲ್ಲಿ ಪ್ರಗತಿ ಹೊಂದಬೇಕೆಂದು ಬೀಳಗಿ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ ಅಧಿಕಾರಿಗಳಿಗೆ ಗಡುವು ನೀಡಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಬುಧವಾರ ಜರುಗಿದ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಪಂಚಾಯತ ಅಭಿವೃದ್ಧಿ ಅಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗ್ರಾಮ ಮಟ್ಟದಲ್ಲಿ ಮೂಲಭೂತ ಸೌಲಭ್ಯಗಳಾದ ಚರಂಡಿ ಕಾಮಗಾರಿ, ಶುದ್ಧ ಕುಡಿಯುವ ನೀರು ಸೇರಿದಂತೆ ಇತರೆ ಕೆಲಸಗಳು ಸರಿಯಾಗಿ ಆಗುತ್ತಿಲ್ಲ. ಮಾಹಿತಿ ಕೇಳಿದರೆ ಸರಿಯಾದ ಮಾಹಿತಿ ಸಹ ನೀಡುತ್ತಿಲ್ಲ. ಅಧಿಕಾರಿಗಳ ಕಾರ್ಯವೈಖರಿಯಲ್ಲಿ ಬದಲಾವಣೆಯಾಗದಿದ್ದಲ್ಲಿ ಸಂಬಂಧಿಸಿದವರ ಮೇಲೆ ಸರಕಾರಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಲಾಗುವುದೆಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಮತಕ್ಷೇತ್ರದ ಬಾದಾಮಿ ತಾಲೂಕಿನ ಫಕೀರ ಬೂದಿಹಾಳ ಹಾಗೂ ಅನಗವಾಡಿ ಪಂಚಾಯತಿ ಅಬಿವೃದ್ಧಿ ಅಧಿಕಾರಿಗಳಿಗೆ ಸಾಕಷ್ಟು ಬಾರಿ ಹೇಳಿದರೂ ಸಮರ್ಪಕವಾಗಿ ಕಾರ್ಯನಿರ್ವಹಿಸದೇ ಇದ್ದುದರಿಂದ ನೋಟಿಸ್ ಜಾರಿ ಮಾಡುವಂತೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಿದ ಶಾಸಕರು, ತಾಲೂಕಾ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಪ್ರತಿ ಗ್ರಾಮಗಳಿಗೆ ವಾರಕ್ಕೆ ಒಂದು ಬಾರಿಯಾದರೂ ಭೇಟಿ ನೀಡಿ ಅವರ ಕಾರ್ಯವೈಖರಿಯನ್ನು ಪರಿಶೀಲಿಸಬೇಕು. ಗ್ರಾಮದ ಜನರ ಜೊತೆಗೆ ಮುಕ್ತವಾಗಿ ಚರ್ಚೆ ಮಾಡಿ ಗ್ರಾಮದ ಸಮಸ್ಯೆಗಳನ್ನು ಪರಿಹರಿಸುವ ಕಾರ್ಯವಾಗಬೇಕು ಎಂದರು.

ಮತಕ್ಷೇತ್ರದ ಪ್ರತಿ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಸಿಸಿ ರಸ್ತೆ, ಕುಡಿಯುವ ನೀರು, ಶೌಚಾಲಯಗಳ ಕುಂದು ಕೊರತೆಗಳು ನಮ್ಮ ಗಮನಕ್ಕೆ ಬರದಂತೆ ಕಾರ್ಯನಿರ್ವಹಿಸಬೇಕು. ಪ್ರತಿ ಪ್ರಾಥಮಿಕ ಶಾಲೆಯ ಅಡುಗೆ ಕೋಣೆ ರಿಪೇರಿ, ಅಂಗನವಾಡಿ ಕಟ್ಟಡ ಹಾಗೂ ಸ್ಮಶಾನದ ಚಿತಾಗಾರ ದುರಸ್ತಿ ಕಾರ್ಯ ಇದ್ದಲ್ಲಿ ಕೂಡಲೇ ಸರಿಪಡಿಸಬೇಕು. ಅರಣ್ಯ ಇಲಾಖೆಯಿಂದ ಸರಿಯಾದ ಕೆಲಸ ನಡೆಯುತ್ತಿಲ್ಲ. ನೆಟ್ಟ ಗಿಡಗಳು ಕಾಣುತ್ತಿಲ್ಲ. ಈ ಬಗ್ಗೆ ಅಧಿಕಾರಿಗಳು ಹೆಚ್ಚಿನ ಗಮನಹರಿಸಿ ಮತಕ್ಷೇತ್ರವನ್ನು ಹಸರೀಕರಣಗೊಳಿಸಲು ಕ್ರಮಕೈಗೊಳ್ಳಲು ಸೂಚಿಸಿದರು.

ಕ್ಷೇತ್ರ ವ್ಯಾಪ್ತಿಯ ಗ್ರಾ.ಪಂ ವತಿಯಿಂದ ಕನಿಷ್ಟ 100 ರೈತರಿಗೆ ಸರಕಾರಿ ಯೋಜನೆಗಳನ್ನು ಪೂರೈಸಿಕೊಟ್ಟಲ್ಲಿ 10 ಸಾವಿರ ರೂ.ಗಳ ಬಹುಮಾನ ಘೋಷಿಸಿದ್ದೆ. ಆ ಬಹುಮಾನ ಪಡೆಯಲು ಆಗದಿರುವುದು ನೋವಿನ ಸಂಗತಿಯಾಗಿದೆ ಎಂದರು.

ಜಿಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ, ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ನರೇಗಾದಡಿ ಕೈಗೊಂಡ ಹಳೆಯ ಕಾಮಗಾರಿಗಳನ್ನು ಎರಡು ದಿನಗಳಲ್ಲಿ ಪಟ್ಟಿಮಾಡಿಕೊಂಡು ಇಡಬೇಕು. ಅವುಗಳಿಗೆ ಆನ್‌ಲೈನ್‌ನಲ್ಲಿ ಅನುಮೋದನೆಗೆ ಕ್ರಮವಹಿಸಲಾಗುತ್ತದೆ. ಕ್ರಿಯಾಯೋಜನೆಯಲ್ಲಿ ಕೈಗೊಂಡ ಕಾಮಗಾರಿಗಳಿಗೆ ವಿಳಂಬ ಧೋರಣೆ ಅನುಸರಿಸುವಂತಿಲ್ಲ. ಕಾರ್ಯವೈಖರಿಯಲ್ಲಿ ಬೇಜವಾಬ್ದಾರಿ ತೋರಿದಲ್ಲಿ ಅಮಾನತ್ತಿಗೆ ಶಿಫಾರಸ್ಸು ಮಾಡಲಾಗುವುದೆಂದರು.

ಕುಡಿಯುವ ನೀರು ಪೂರೈಕೆ ನಿರ್ವಹಣೆ ವ್ಯವಸ್ಥಿತವಾಗಿರಬೇಕು. 15ನೇ ಹಣಕಾಸಿನಡಿ ಕೈಗೊಂಡ ಕಾಮಗಾರಿಗಳು ಅಪೂರ್ಣಗೊಂಡಿದ್ದು, ಪೂರ್ಣಗೊಳಿಸಲು ಸೂಚಿಸಿದರು. ಇ-ಖಾತಾ ಬಗ್ಗೆ ಜನರಲ್ಲಿ ಅರಿವು ಮೂಡಿಸಿ ನಿಗದಿತ ಅವಧಿಯಲ್ಲಿ ಕೆಲಸ ಮಾಡಿಕೊಡಲು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಾದ ಸುಭಾಷ ಸಂಪಗಾವಿ, ಶ್ರೀನಿವಾಸ ಪಾಟೀಲ, ಸತೀಶ ಮಾಕೊಂಡ ಸೇರಿದಂತೆ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

# ಬೀದರ್‌ನಲ್ಲಿ ಪತ್ತೆಯಾದ ಶತಮಾನ ಇತಿಹಾಸವಿರುವ ಅನಂತ ಪದ್ಮನಾಭ ದೇಗುಲಕ್ಕೆ ಬೇಕಿದೆ ರಸ್ತೆ ಸಂಪರ್ಕ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 16 :ಬೀದರ ಜಿಲ್ಲೆಯ ಭಾಲ್ಕಿ ತಾಲೂಕಿನ ಸೇವಾನಗರ ತಾಂಡಾದ ಬಳಿ ದಟ್ಟವಾದ ಕಾಯ್ದಿಟ್ಟ ಅರಣ್ಯ ಪ್ರದೇಶದಲ್ಲಿ ಪುರಾತನ ಅನಂತ ಪದ್ಮನಾಭ ದೇವಸ್ಥಾನ ವಿಷ್ಣು ಮಂದಿರ ಇದೆ. ದಟ್ಟವಾದ ಕಾಯ್ದಿಟ್ಟ ಅರಣ್ಯದಲ್ಲಿ ಮರೆಯಾಗಿದ್ದ ಈ ದೇವಸ್ಥಾನ ಮೂರು ವರ್ಷಗಳ ಹಿಂದೆಯಷ್ಟೇ ಪತ್ತೆಯಾಗಿದೆ. ಇಲ್ಲಿಗೆ ಬರುವ ಭಕ್ತರು ದೇವಸ್ಥಾನವನ್ನು ಅಭಿವೃದ್ಧಿ ಪಡಿಸಿದ್ದು, ದೇವಸ್ಥಾನಕ್ಕೆ ರಸ್ತೆ ಸಂಪರ್ಕ ಕಲ್ಪಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವರಿಗೆ ಮನವಿ ಮಾಡುತ್ತಿದ್ದಾರೆ .

**ದೇವಸ್ಥಾನ ಪತ್ತೆಯಾಗಿದ್ದು ಹೇಗೆ?**

ಮೂರು ವರ್ಷಗಳ ಹಿಂದೆ ಸೇವಾನಗರ ತಾಂಡಾದ ನಿವಾಸಿಯೊಬ್ಬರು ಜೀವನದಲ್ಲಿ ಜಿಗುಪ್ಸೆಗೊಂಡು ಆತ್ಮಹತ್ಯೆ ಮಾಡಿಕೊಳ್ಳಬೇಕು ಎಂದು ಕಾಡಿಗೆ ಹೋಗಿದ್ದರು. ಕಾಡಿನಲ್ಲಿ ಒಂದು ದೊಡ್ಡ ಆಲದ ಮರ ಅವರಿಗೆ ಕಂಡಿದೆ. ಇದೇ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಳ್ಳಬೇಕೆಂದು ಯೋಚಿಸಿ ಮರದ ಬಳಿ ಹೋದಾಗ,ಅವರಿಗೆ ಪುರಾತನ ನೀರಿನ ಹೊಂಡ ಕಂಡಿದೆ.

ಅಲ್ಲಿಗೆ ಹೋಗಿ ಅಚ್ಚರಿಯಿಂದ ನೋಡಿದಾಗ ಹೊಂಡಲ್ಲಿ ನೀರು ತುಂಬಿ ತುಳುಕುತ್ತಿತ್ತಂತೆ. ಈ



ನೀರು ಕುಡಿದ ಮೇಲೆ ಅವರಿಗೆ ಆತ್ಮಹತ್ಯೆಮಾಡಿಕೊಳ್ಳುವ ಯೋಚನೆ ಹೋಯಿತಂತೆ. ನಂತರ, ವಿಷ್ಣು ಹಾವಿನ ಮೇಲೆ ಮಲಗಿರುವ ಭಂಗಿಯಲ್ಲಿ ಮೂರ್ತಿ ಕಂಡು ಅದಕ್ಕೆ ನಮಸ್ಕಾರ ಮಾಡಿದ್ದಾರೆ. ನಂತರ, ಇಲ್ಲಿ ದೇವಸ್ಥಾನವಿರುವುದು ಊರಿನವರಿಗೆ ಗೊತ್ತಾಗಿದೆ. ಪ್ರತಿನಿತ್ಯ ಗ್ರಾಮಸ್ಥರು ಅನಂತ ಪದ್ಮನಾಭ ದೇವಸ್ಥಾನಕ್ಕೆ ಆಗಮಿಸಿ ಪೂಜೆ ಸಲ್ಲಿಸುತ್ತಿದ್ದಾರೆ.

**ದೇವಸ್ಥಾನದ ಇತಿಹಾಸ**

ದೇವಸ್ಥಾನದಲ್ಲಿರುವ ವಿಷ್ಣುವಿನ ಮೂರ್ತಿ ಹಾಗೂ ನೀರಿನ ಹೊಂಡ ಸುಮಾರು ಒಂದು ಸಾವಿರ ವರ್ಷದಷ್ಟು ಹಳೆಯದು ಎಂದು ಹೇಳಲಾಗುತ್ತಿದೆ. ಈ ದೇವಸ್ಥಾನ ಇರುವ ಸುತ್ತಮುತ್ತಲಿನ ಬೆಟ್ಟ ಹಲವಾರು ವಿಸ್ಮಯಗಳನ್ನೊಳಗೊಂಡಿದೆ ಎಂದು ಇಲ್ಲಿನ ಭಕ್ತರು ಹೇಳುತ್ತಾರೆ. ಅಮಾವಾಸ್ಯೆ ಹಾಗೂ ಹುಣ್ಣಿಯಂದು ಭಕ್ತರು ದೇವಸ್ಥಾನಕ್ಕೆ ಬರುತ್ತಾರೆ. ಈ ದೇವಸ್ಥಾನದ ಸುತ್ತ ಅರಣ್ಯ ಪ್ರದೇಶವಿದೆ.ದೇವಸ್ಥಾನದಲ್ಲಿರುವ ನೀರಿನ ಹೊಂಡದಲ್ಲಿನ ನೀರು ಇದುವರೆಗೂ ಬತ್ತಿರುವ ಉದಾಹರಣೆ ಇಲ್ಲ. ಈ ನೀರನ್ನು ಪ್ರತಿನಿತ್ಯ ಕುಡಿಯುವುದರಿಂದ ದೇಹದಲ್ಲಿರುವ ಖಾಯಿಲೆಗಳು ವಾಸಿಯಾಗುತ್ತವೆ ಎಂಬ ನಂಬಿಕೆ ಗ್ರಾಮಸ್ಥರಲ್ಲಿದೆ. ನೀರಿನ ಹೊಂಡ ಸುಮಾರು ಹದಿನೈದು ಅಡಿಯಷ್ಟು ಆಳವಾಗಿದ್ದು, ವರ್ಷವಿಡೀ ಇಲ್ಲಿನ ನೀರು ಬತ್ತುವುದಿಲ್ಲ.

ಕಾಡು ಒಂದು ರೀತಿಯ ಕುತೂಹಲ ಮೂಡಿಸುವ, ಪ್ರಕೃತಿ ಸೌಂದರ್ಯದಿಂದ ತುಂಬಿರುವ ತಾಣವಾಗಿದೆ. ಪುರಾತನ ಕಾಲದ ಹೊಂಡದಲ್ಲಿರುವ ವಿಷ್ಣುವಿ ಮೂರ್ತಿ, ಭಕ್ತರನ್ನ ಸೆಳೆಯುತ್ತಿದೆ. ದಟ್ಟ ಕಾಡಿನ ನಡುವೆ ಶತಮಾನದಿಂದಲೂ ಇಲ್ಲಿ ಅನಂತ ಪದ್ಮನಾಭ ದೇವರು ನೆಲೆಸಿದ್ದಾನೆ. ಇಲ್ಲಿನ ಹೊಂಡವು ಬರಗಾಲದಲ್ಲಿಯೂ ಬತ್ತದೆ ಇರುವುದು ವಿಶೇಷವಾಗಿದೆ.

# ವಿವಿಧ ಅಂಗನವಾಡಿ ಕೇಂದ್ರಗಳಿಗೆ ನ್ಯಾಯಾಧೀಶರ ಭೇಟಿ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು.16 : ಜಿಲ್ಲೆಯ ಹಲವು ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸಿದಾಗ ಸಾಕಷ್ಟು ಸಮಸ್ಯೆಗಳು ಕಂಡುಬಂದಿದ್ದು, ಅವುಗಳೆಲ್ಲವುಗಳ ಪಟ್ಟಿ ಮಾಡಿ ವರದಿ ತಯಾರಿಸಲಾಗುವುದು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ ಬನಸೋಡೆ ತಿಳಿಸಿದರು.

ಅವರು ಮಂಗಳವಾರ ಬೀದರ ನಗರದ ನೌಬಾದ, ಮುಸ್ಲಿಂಗಲ್ಲಿ, ಲಾಲಬಾಗ, ಕಪಲಾಪೂರ, ಅತಿವಾಳ ಗ್ರಾಮಗಳಲ್ಲಿರುವ ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸಿದರು.

ಬಹಳಷ್ಟು ಅಂಗನವಾಡಿ ಕೇಂದ್ರಗಳಲ್ಲಿ ಯಾವುದೇ ರಜಿಸ್ಟರಗಳು ಬರೆಯದೇ ಇರುವುದು ಕಂಡುಬಂದಿರುತ್ತದೆ. ಶೌಚಾಲಯಗಳು

ಇದ್ದರು ಸಹ ನೀರಿನ ವ್ಯವಸ್ಥೆ ಇರಲಿಲ್ಲ, ಹಾಜರಾತಿ ಪಸ್ತಕದಲ್ಲಿ ಕಾಣಿಸಿದ್ದ ಸಂಖ್ಯೆಯಷ್ಟು ಮಕ್ಕಳು ಇರಲಿಲ್ಲ, ಬಹಳಷ್ಟು ಕೇಂದ್ರಗಳಲ್ಲಿ ಸ್ವಚ್ಛತೆಯನ್ನು ಕಾಪಾಡಿರುವುದಿಲ್ಲ. ಅಡುಗೆ ಕೋಣೆಗಳ ಕೊರತೆ ಕಂಡುಬಂದಿರುತ್ತದೆ. ಎಲ್ಲಾ ಅಂಗನವಾಡಿ ಕೇಂದ್ರಗಳಲ್ಲಿ ವಿದ್ಯುತ ವ್ಯವಸ್ಥೆ

ಇದ್ದಿರುವುದಿಲ್ಲ. ಎಲ್ಲಾ ಅಂಗನವಾಡಿ ಕೇಂದ್ರಗಳಲ್ಲಿ ಕಂಡುಬಂದಿರುವುದಿಲ್ಲ. ಮಕ್ಕಳಿಗೆ ಆಟವಾಡಲು ಆಟದ ಮೈದಾನವು ಕಂಡುಬಂದಿರುವುದಿಲ್ಲ. ಶುದ್ಧ ಕುಡಿಯುವ ನೀರಿನ ಕೊರತೆ ಕಂಡುಬಂದಿರುತ್ತದೆ. ಕಪಲಾಪೂರ ಅಂಗನವಾಡಿ ಕೇಂದ್ರದಲ್ಲಿ ಶಿಕ್ಷಕರು ಮತ್ತು ಮಕ್ಕಳು ಇಲ್ಲದೇ ಇರುವುದು ಕಂಡುಬಂದಿರುತ್ತದೆ ಎಂದರು.

# ಅಂಚೆ ಕಚೇರಿಗಳು ಎಲ್ಲಾ ಸೇವೆ ಒದಗಿಸುವ ಏಕೀಕೃತ ಕೇಂದ್ರವಾಗಲಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜು.16:ಅಂಚೆಕಛೇರಿಗಳು ಎಲ್ಲಾ ಸೇವೆಗಳನ್ನು ಒದಗಿಸುವ ಏಕೀಕೃತ ಕೇಂದ್ರವಾಗಬೇಕು ಹಾಗೂ ಜನ ಸಾಮಾನ್ಯರಿಗೆ ಸಣ್ಣ ಉಳಿತಾಯದ ಮಹತ್ವಗಳನ್ನು ತಿಳಿಸಿ ಉಳಿತಾಯ ಮನೋಭಾವವನ್ನು ಅವರಲ್ಲಿ ಹೆಚ್ಚಿಸಬೇಕು ಹಾಗೂ ಅಂಚೆ ಸಿಬ್ಬಂದಿಯವರು ಉತ್ತಮ ಜೀವನ ಶೈಲಿ, ಸರ್ವತೋಮುಖ ಬೆಳವಣಿಗೆಯೆಡೆಗೆ ಗಮನವಹಿಸುವುದು ಅವಶ್ಯ,ಆರೋಗ್ಯವೇ ಮಹಾ ಸಂಪತ್ತು ಎಂದು ಕರ್ನಲ್ ಶ್ರೀ. ಸುಶಿಲ್ ಕುಮಾರ್ ಖಕಛಿ ಪೋಸ್ಟಮಾಸ್ಟರ್ ಜನರಲ್, ಉತ್ತರ ಕರ್ನಾಟಕ ವಲಯ, ಧಾರವಾಡ ಇವರು ಜ್ಯೋತಿ ಬೆಳಗಿಸುವುದರೊಂದಿಗೆ, ಉದ್ಘಾಟನಾ ನುಡಿಗಳಲ್ಲಿ ತಮ್ಮ ಅನಿಸಿಕೆಗಳನ್ನು ವಿಭಾಗೀಯ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ವ್ಯಕ್ತಪಡಿಸಿದರು.

ಸತತ ಪ್ರಯತ್ನ ಸಣ್ಣ-ಸಣ್ಣ ಧನಾತ್ಮಕ ಬದಲಾವಣೆಗಳು ಅಂಚೆ ಸಿಬ್ಬಂದಿಯವರು ಪ್ರಗತಿ ಮನೋಭಾವದಿಂದ ಜನಸಾಮಾನ್ಯರಿಗೆ ಸೇವೆಗಳನ್ನು ಒದಗಿಸಲು ಸಾಧ್ಯ. ಇಂದು ವಿತರಿಸಿದ ಪ್ರಶಸ್ತಿ ಪತ್ರ



ಹಾಗೂ ನೆನಪಿನ ಕಾಣಿಕೆಗಳು ಎಲ್ಲಾ ಸಿಬ್ಬಂದಿಯವರಲ್ಲಿ ಸ್ಪರ್ಧಾತ್ಮಕ ಮನೋಭಾವವನ್ನು ಬೆಳೆಸಲಿ ಹಾಗೂ ಇಲಾಖೆಯ ಉನ್ನತಿಗಾಗಿ ಎಲ್ಲರೂ ಶ್ರಮಿಸಬೇಕು ಎಂದು ಶ್ರೀ. ಆರ್. ಅಶೋಕ, ಅಂಚೆ ಅಧೀಕ್ಷಕರು, ಕಲಬುರಗಿ ಇವರು ತಮ್ಮ ಉದ್ಘಾಟನಾ ಭಾಷಣದಲ್ಲಿ ಅಂಚೆ ಸಿಬ್ಬಂದಿಯನ್ನು ಉದ್ದೇಶಿಸಿ ಮಾತನಾಡಿದರು.ಶ್ರೀ. ಆರ್.ಕೆ. ಉಮರಾಣೆ ಸಹಾಯ ಅಂಚೆ ಅಧೀಕ್ಷಕರು (ಸ್ಥಾನಿಕ) ಇವರು ಪ್ರಾಸ್ತವಿಕ ನುಡಿಗಳನ್ನಾಡಿದರು. ಶ್ರೀ. ನವೀನ್ ಸಿಂಗ್ ಅಂಚೆ ನೀರಿಕ್ಷಕರು ಶಹಾಬಾದ ಸ್ವಾಗತಿಸಿದರು.ಶ್ರೀ.ಸುರೇಶ ಅಂಚೆ ನೀರಿಕ್ಷಕರು ಕಾಳಗಿ ಇವರು ವಂದನಾರ್ಪಣೆ ಮಾಡಿದರು.ಶ್ರೀಮತಿ ಅಶ್ವಿನಿ ಹಾಗೂ ಶ್ರೀ. ಚಂದ್ರಕಾಂತ ಸಾಲೋಟಗಿ ನಿರೂಪಣೆ ಮಾಡಿದರು. ಕಾರ್ಯಕ್ರಮದಲ್ಲಿ ಶ್ರೀ. ಪ್ರಕಾಶ್ ನಾಯಕ್, ಸಿನೀಯರ್ ಮ್ಯನೇಜರ್ ಖಕಕಃ, ಶ್ರೀ. ಎಂ.ಎಲ್ ಭಾಗವಾನ್ ಸಹಾಯಕ ಅಂಚೆ ಅಧೀಕ್ಷಕರು, ಶ್ರೀ. ಮಲ್ಲಿಕಾರ್ಜುನ ಕಲಶೆಟ್ಟಿ ಅಂಚೆ ನೀರಿಕ್ಷಕರು, ಶ್ರೀ. ವಿಜಯಕುಮಾರ್, ಶ್ರೀ. ಶಿವಾನಂದ ಬಡಗಿ ಅಂಚೆ ನಿರೀಕ್ಷಕರು, ಶ್ರೀ. ಶಾಂತಕುಮಾರ ವಾಗಾ. ಶ್ರೀ. ವಿದ್ಯಾಧರ ಗೋಟುರ, ಶ್ರೀ. ನಬಿಸಾಬ್ ಅಂಚೆ ಪಾಲಕರು, ಶ್ರೀ. ಸುಶಾಂತ ಭಟ್ ಅಂಚೆ ಚೀಟಿ ಸಂಗ್ರಹಕಾರರು ಹಾಗೂ ಅಂಚೆ ಸಿಬ್ಬಂದಿಯವರು ಭಾಗವಹಿಸಿದ್ದರು.

# ಖಾಶೆಂಪುರ್ ಪಿ: ಅದ್ದೂರಿಯಾಗಿ ನಡೆದ ಮರಿಗೆಮ್ಮ ದೇವಿ ಜಾತ್ರಾ ಮಹೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಬೀದರ್ ಜು.16: ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಖಾಶೆಂಪುರ್ ಪಿ (ಪಾನ್ ಖಾಶೆಂಪುರ್) ಗ್ರಾಮದಲ್ಲಿ ಮಂಗಳವಾರ ಗ್ರಾಮದೇವತೆ ಮರಿಗೆಮ್ಮ ದೇವಿಯ ಜಾತ್ರಾ ಮಹೋತ್ಸವ ಅದ್ದೂರಿಯಾಗಿ ನಡೆದಿದ್ದು, ಮಾಜಿ ಸಚಿವರು, ಜೆಡಿಎಸ್ ಪಕ್ಷದ ಹಿರಿಯ ನಾಯಕರು, ಸ್ವಗ್ರಾಮದವರಾದ ಬಂಡೆಪ್ಪ ಖಾಶೆಂಪುರ್ ರವರು ಜಾತ್ರಾಮಹೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡರು.

ಪ್ರತಿ ವರ್ಷದಂತೆ ಈ ವರ್ಷವೂ ಜಾತ್ರಾಮಹೋತ್ಸವ ಕಾರ್ಯಕ್ರಮಕ್ಕೆ ಖಾಶೆಂಪುರ್ ಪಿ ಗ್ರಾಮಸ್ಥರು ಬೆಳಗ್ಗೆಯಿಂದಲೇ ಸಿದ್ಧತೆ ಆರಂಭಿಸಿ, ಸಂಜೆ ವೇಳೆಗೆ ಗ್ರಾಮ ದೇವತೆಯ ನೂತನ ಮೂರ್ತಿಗಳನ್ನು ಪ್ರತಿಷ್ಠಾಪಿಸಿ, ವಿಶೇಷ ಪೂಜೆ ಕಾರ್ಯಕ್ರಮ ನೆರವೇರಿಸಿದರು.

**ಜಾತ್ರೆಯ ದಿನವೇ ತಯಾರಾಗುತ್ತವೆ ಮೂರ್ತಿಗಳು:**

ಖಾಶೆಂಪುರ್ ಪಿ ಗ್ರಾಮದ ಗ್ರಾಮ ದೇವತೆ ಮರಿಗೆಮ್ಮ ದೇವಿಯ ಮೂರ್ತಿಗಳನ್ನು ಜಾತ್ರಾಮಹೋತ್ಸವ ದಿನದಂದೇ ಒಂದೇ ದಿನದಲ್ಲೇ ತಯಾರಿಸುವ ಸಂಪ್ರದಾಯವು ಮೊದಲಿನಿಂದಲೂ ಜಾರಿಯಲಿದ್ದು, ಈ ವರ್ಷವೂ ಮಂಗಳವಾರ ಬೆಳಿಗ್ಗೆ ಗ್ರಾಮಸ್ಥರು ಮರದ ತುಕಡಿಗಳನ್ನು ಗ್ರಾಮದ ಬಡಿಗೇರ (ಮೂರ್ತಿ ತಯಾರಿಸುವವರ) ಮನೆಗಳಿಗೆ ನೀಡಿದರು.

ಅವುಗಳಿಂದ ಸಂಜೆಯವರೆಗೂ ಬಡಿಗೇರು ಮೂರ್ತಿಗಳನ್ನು ತಯಾರಿಸಿದರು. ತಯಾರಾದ ಮೂರ್ತಿಗಳನ್ನು ಸಂಜೆಯ ವೇಳೆಯಲ್ಲಿ ಗ್ರಾಮಸ್ಥರು ಬಡಿಗೇರ ಮನೆಯಿಂದ ಬಾಜಾ ಭಜಂತ್ರಿಗಳೊಂದಿಗೆ ಮೆರವಣಿಗೆಯಲ್ಲಿ ತಂದು ಮರಿಗೆಮ್ಮ ದೇವಿಯ ಮಂದಿರದಲ್ಲಿ ಪ್ರತಿಷ್ಠಾಪಿಸಿದರು.

ದೇವಿಯ ಜಾತ್ರಾ ಮಹೋತ್ಸವ ಕಾರ್ಯಕ್ರಮವನ್ನು ಕಣ್ತುಂಬಿಕೊಳ್ಳಲು ಖಾಶೆಂಪುರ್ ಪಿ ಸೇರಿದಂತೆ ವಿವಿಧ ಗ್ರಾಮಗಳಿಂದ ಸಹಸ್ರಾರು ಸಂಖ್ಯೆಯಲ್ಲಿ ಆಗಮಿಸಿದ್ದ ಭಕ್ತರು, ಮೆರವಣಿಗೆಯುದ್ದಕ್ಕೂ ಮರಿಗೆಮ್ಮ ತಾಯಿಯ ದರ್ಶನ ಪಡೆದು, ತಾಯಿಯ ಪರ ಜೈಘೋಷ ಮೊಳಗಿಸಿ, ಭಕ್ತಿ ಸಮರ್ಪಿಸಿದರು. ಈ ಸಂದರ್ಭದಲ್ಲಿ ಪ್ರಮುಖರಾದ ಶಾಂತಲಿಂಗ ಸಾವಳಗಿ, ರಾಜು ಖಾಶೆಂಪುರ್, ರಾಜಕುಮಾರ್ ಪೊಲೀಸ್ ಪಾಟೀಲ್, ಬಾಬು ಖಾಶೆಂಪುರ್, ಸಿ.ಎಮ್ ನಾಗರಾಜ್, ಎಮ್. ಮುರುಳಿದರ್, ಉಜ್ವಲ್ ಖಾಶೆಂಪುರ್, ಅನಿಲ್ ಲಚ್ಚನೋರ್, ಶರಣಪ್ಪ ಖಾಶೆಂಪುರ್, ಭಜರಂಗ ತಮಗೊಂಡ, ದತ್ತು ಕಾಡವಾದ, ಶರಣಪ್ಪ ಚಿಂಚೋಳಿ, ಭೀಮಣ್ಣ ಔಂಟಿ, ಮಾರುತಿ ಬಸಗೊಂಡ, ಸುನೀಲ್ ಗುಮಾಸ್ತಿ, ಯೋಗೇಶ್ ವಗ್ಗೆ, ರಾಜು ವಗ್ಗೆ, ಮಲ್ಲು ಮುದುಕಪ್ಪನವರ್, ಮಂಜುನಾಥ ಬಾಲೇಬಾಯಿ, ಶಿವಕುಮಾರ್ ಹೊಸಳ್ಳಿ, ಸುನೀಲ್ ಖಾಶೆಂಪುರ್, ಪವನ್ ವಗ್ಗೆ, ರಮೇಶ್ ಸೇರಿದಂತೆ ಖಾಶೆಂಪುರ್ ಮತ್ತು ಸುತ್ತಮುತ್ತಲಿನ ಗ್ರಾಮಗಳ ಜನರು ಸಾವಿರಾರು ಸಂಖ್ಯೆಯಲ್ಲಿದ್ದರು.

# "ಕೌಶಲ್ಯ ದಿನಾಚರಣೆ": ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪ್ರದಾನ

ಕಲಬುರಗಿ,ಜು.16:"ಕೌಶಲ್ಯದಿನಾಚರಣೆ"ಯ ಪ್ರಯುಕ್ತ ಜಿಲ್ಲೆಯ ಸರಕಾರಿ ಹಾಗೂ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ಸಹಯೋಗದೊಂದಿಗೆ ಸರ್ಕಾರಿ/ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ವಿದ್ಯಾರ್ಥಿಗಳಿಗೆ ಜಿಲ್ಲಾ ಮಟ್ಟದ ತಾಂತ್ರಿಕ ಕೌಶಲ್ಯ ಸ್ಪರ್ಧೆಯನ್ನು ಇತ್ತೀಚೆಗೆ ಕಲಬುರಗಿ (ಪುರುಷ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಏರ್ಪಡಿಸಲಾಗಿತ್ತು.

ಜೇವರ್ಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಜೋಡಣೆಗಾರ (ಫಿಟ್ಟರ್) ವಿದ್ಯಾರ್ಥಿಗಳಿಗೆ "ಖಜಟಜಿ Balancingsculpture"ಹಾಗೂ ವಿದ್ಯುತ್‌ಕರ್ಮಿ (ಎಲೆಕ್ಟ್ರಿಶಿಯನ್) ವಿದ್ಯಾರ್ಥಿಗಳು "GrossCutting Machine"ಪ್ರೊಜೆಕ್ಟ್‌ಗಳಲ್ಲಿ ಜಿಲ್ಲಾ ಮಟ್ಟದ ದ್ವಿತೀಯ ಬಹುಮಾನವನ್ನು ಪಡೆದಿರುತ್ತಾರೆ. ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಕೌಶಲ್ಯ ಸ್ಪರ್ಧೆ ಹಾಗೂ ಕ್ರೀಡಾಕೂಟಗಳ ಸ್ಪರ್ಧೆಗಳಲ್ಲಿ



ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ವಿತರಿಸಿದರು. ಪ್ರಶಸ್ತಿ ಪಡೆದ ವಿದ್ಯಾರ್ಥಿಗಳಿಗೆ ಹಾಗೂ ಮಾರ್ಗದರ್ಶಕ ಶಿಕ್ಷಕರಾದ ಕಿರಿಯ ತರಬೇತಿ ಅಧಿಕಾರಿ (ಇ.ಎನ್) ವಿಜಯಕುಮಾರ ಹಾಗೂ ಶ್ರೀ ಝಾಕೀರ ಪಟೇಲ ಇವರಿಗೆ ಸಂಸ್ಥೆಯ ಪ್ರಾಚಾರ್ಯರು, ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಅಭಿನಂದಿಸಿದರು.

ಈ ಸಂದರ್ಭದಲ್ಲಿ ವಿಭಾಗೀಯ ಕಛೇರಿಯ ಉಪನಿರ್ದೇಶಕಿ ಹಾಗೂ ಸಂಸ್ಥೆಯ ಪ್ರಾಚಾರ್ಯರಾದ ಡಾ.ರುಬಿನಾ ಪರ್ವಿನ್, ಕಲಬುರಗಿ ಜಿಲ್ಲಾ ನೋಡಲ್ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರಾದ ಮುರಳೀಧರ ರತ್ನಗಿರಿ, ಆಡಳಿತಾಧಿಕಾರಿಗಳಾದ ಸುರೇಶ ವಗ್ಗೆ, ಸಂಸ್ಥೆಯ ತರಬೇತಿ

ಅಧಿಕಾರಿಗಳಾದ ಅಶೋಕಕುಮಾರ ಕಾಬಾ, ಕಿರಿಯ ತರಬೇತಿ ಅಧಿಕಾರಿಗಳಾದ ಬಸನಗೌಡ ಪಾಟೀಲ, ವಿಜಯಕುಮಾರ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಜನರು ಮತ್ತು ಪೊಲೀಸರ ನಡುವೆ ಉತ್ತಮ ಸಂಬಂದ ಬೆಳೆಸಲು ಮನೆ-ಮನೆಗೆ ಪೊಲೀಸ್ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ :ಜು.16: ಪಟ್ಟಣದ ಚನ್ನಬಸವ ಬಡಾವಣೆಯಲ್ಲಿಯ ಹಲವು ಮನೆಗಳಿಗೆ ಪೊಲೀಸ್ ಸಿಬ್ಬಂಧಿಗಳೊಂದಿಗೆ ಅಭಿಯಾನ ಕೈಗೊಂಡು ಮಾದಕ ವಸ್ತು, ಸೈಬರ್ ಅಪರಾಧ, ಬಾಲಾಪರಾಧ, ಮನೆ ಕಳ್ಳತನ, ಸಂಚಾರ ನಿಯಮ ಮುಂತಾದ ವಿಷಯಗಳ ಬಗ್ಗೆ ಜಾಗೃತಿ ಮೂಡಿಸಿದರು.ಈ ಸಂದರ್ಭದಲ್ಲಿ ಪಿಎಸ್ಐ ಚಂದ್ರಶೇಖರ ನಿರ್ಣೆ ಮಾತನಾಡಿ,ಸಾರ್ವಜನಿಕರ ಸಮಸ್ಯೆ, ದೂರು ಆಲಿಸಲು, ಜನರು ಮತ್ತು ಪೊಲೀಸರ ನಡುವೆ ಉತ್ತಮ ಸಂಬಂದ ಬೆಳೆಸಲು ಹಾಗೂ ಅಪರಾಧಗಳನ್ನು ತಡೆಗಟ್ಟಲು ಮನೆ ಮನೆಗೆ ಪೊಲೀಸ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.ಕಾನೂನು ಸುವ್ಯವಸ್ಥೆ ಕಾಪಾಡುವುದು ಕೇವಲ ಪೊಲೀಸ್ ಇಲಾಖೆಯ ಜವಾಬ್ದಾರಿಯಲ್ಲ ಅದು ನಿಮ್ಮೆಲ್ಲರ ಸಹಭಾಗಿತ್ವದಿಂದ ಮಾತ್ರ



ಸಾಧ್ಯ. ಪೊಲೀಸರಿಂದ ಹೆಚ್ಚಿನ ಸೇವೆ ಈ ಮೂಲಕ ಜನರೆಡೆಗೆ ತಲುಪಲಿದೆ ಎಂದರು,ಈ ವೇಳೆ ಬಡಾವಣೆ ನಿವಾಸಿಗಳಾದ,ಯಶವಂತ ಬಿರಾದಾರ, ಎಸ್ಎನ್ ಡಿಗ್ಗಿಕರ, ರಮಾಕಾಂತ ಕಣಜೆ, ಪೊಲೀಸ್ ಸಿಬ್ಬಂದಿಗಳಾದ ಶಿವಾನಂದ ಹೂಗಾರ, ವೆಂಕಟೇಶ, ಲೋಕೇಶ ಹಾಗೂ ಇನ್ನಿತರರು ಇದ್ದರು.

# ಚನ್ನರಾಯಪಟ್ಟಣ ಭೂಸ್ವಾಧೀನ ರದ್ಧತಿ ಸ್ವಾಗತಾರ್ಹ:ಬಿಆರ್ ಪಾಟೀಲ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜು.16: ದೇವನಹಳ್ಳಿ ತಾಲ್ಲೂಕಿನ ಚನ್ನರಾಯಪಟ್ಟಣದ ರೈತರ ಭೂಸ್ವಾಧೀನ ಕ್ರಮವನ್ನು ರದ್ದುಗೊಳಿಸಿರುವ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರನ್ನು ಅಭಿನಂದಿಸುವೆ. ಅದೇ ರೀತಿ ರಾಷ್ಟ್ರ ಮಟ್ಟದಲ್ಲಿ ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ದೊರಕಿಸಲು ರಾಷ್ಟ್ರ ಮಟ್ಟದ ಹೋರಾಟದ ನೇತೃತ್ವವನ್ನು ಸಿದ್ಧರಾಮಯ್ಯ ಅವರು ವಹಿಸಬೇಕು ಎಂದು ಆಳಂದ ಶಾಸಕ ಹಾಗೂ ರಾಜ್ಯ ನೀತಿ, ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್. ಪಾಟೀಲ್ ಅವರು ಒತ್ತಾಯಿಸಿದರು.ನಗರದ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಂ.ಡಿ. ನಂಜುಂಡಸ್ವಾಮಿ ಅವರ ಗರಡಿಯಲ್ಲಿ ಬೆಳೆದಿರುವ ಸಿದ್ಧರಾಮಯ್ಯ ಅವರಿಗೆ ರೈತಪರ ಕಾಳಜಿ ಇದೆ. ಹೀಗಾಗಿ ಅವರ ನಾಯಕತ್ವದಲ್ಲಿ ರಾಷ್ಟ್ರ ಮಟ್ಟದಲ್ಲಿ ಹೋರಾಟ ಆರಂಭವಾದಲ್ಲಿ ರೈತರ ಕೃಷಿ ಉತ್ಪನ್ನಗಳಿಗೆ



ಯೋಗ್ಯ ಬೆಂಬಲ ಬೆಲೆ ದೊರಕಲಿದೆ ಎಂದರು.ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ತಮ್ಮ ಸ್ವಂತ ಹೊಲದಲ್ಲಿ ಉಳಿಮೆ ಮಾಡಿದವರು. ರೈತರ ಸಂಕಷ್ಟ, ನೋವು ಅವರಿಗೆ ಗೊತ್ತಿದೆ. ಹಾಗಾಗಿ ಗಂಭೀರವಾಗಿ ಯೋಚಿಸಿ, ಭೂಸ್ವಾಧೀನ ಮಾಡುವ ಕುರಿತಾಗಿರುವ ನಿರ್ಧಾರವನ್ನು ರದ್ದುಪಡಿಸಿದ್ದಾರೆ.ಇದನ್ನ ಮಾಡಿರುವಂತೆಯೇ ಕನಿಷ್ಠ ಬೆಂಬಲ ಬೆಲೆಯ ಜಾರಿಗೆಗೆ ರಾಷ್ಟ್ರಮಟ್ಟದಲ್ಲೂ ಮುಂದಾಳತ್ವವಹಿಸಿ, ಹೋರಾಟ ನಡೆಸಿದರೆ ಯಶಸ್ವಿಯಾಗುತ್ತದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.ದೇವನಹಳ್ಳಿ ತಾಲ್ಲೂಕಿನ ಚನ್ನರಾಯಪಟ್ಟಣದ 1,777 ಎಕರೆ ಜಮೀನು ಸ್ವಾಧೀನಪಡಿಸಿಕೊಂಡು ಅಂತಿಮ ಅಧಿಸೂಚನೆ ಹೊರಡಿಸಲಾಗಿತ್ತು. ಬಿಜೆಪಿಯ ಬಿ.ಎಸ್.

ಯಡಿಯೂರಪ್ಪ ಅವರ ಸರ್ಕಾರ ಇದ್ದಾಗಿನಿಂದಲೂ ಭೂಸ್ವಾಧೀನ ಮಾಡಿಕೊಳ್ಳುವುದು ಪ್ರಾರಂಭಿಸಲಾಗಿತ್ತು. ಆದರೂ, ರೈತರ ಹಿತ ರಕ್ಷಣೆಗಾಗಿ ಭೂಮಿ ಮರಳಿ ರೈತರಿಗೆ ಕೊಡುವಂತಹ ಐತಿಹಾಸಿಕ ನಿರ್ಧಾರ ತೆಗೆದುಕೊಂಡಿರುವುದು ಸ್ವಾಗತಾರ್ಹ.

ಈ ಮೂಲಕ ಕಳೆದ ಮೂರು ವರ್ಷಗಳಿಂದ ನಡೆಯುತ್ತಿದ್ದ ಹೋರಾಟಕ್ಕೆ ನಮ್ಮ ಸರ್ಕಾರ ಕೊನೆಗೂ ತೆರೆ ಎಳೆದಿದೆ. ರೈತರ ಪರವಾಗಿ ನಿಂತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಅಭಿನಂದಿಸುತ್ತೇನೆ ಎಂದು ಅವರು ಹೇಳಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.